ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ

26 ಡಿಸೆಂಬರ್ 2025 ಶುಕ್ರವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 284 | ಪುಟ-4 | ಹಾಸನ | E-mail : prajodayahsn@gmail.com | RNI NO: KARKAN/2007/22629



ಕ್ರಿಸ್‌ಮಸ್ ಅಂಗವಾಗಿ ದೆಹಲಿಯ ಕ್ಯಾಥೆಡ್ರಲ್ ಚರ್ಚ್ ಆಫ್ ದಿ ರಿಡೆಂಪ್ಶನ್‌ನಲ್ಲಿ ನಡೆದ ಸಾಮೂಹಿಕ ಪ್ರಾರ್ಥನೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದ್ದ ಕ್ಷಣ...


ವರ್ಷಾಂತ್ಯಕ್ಕೆ ಮೆಗಾ ಕ್ಲಾಷ್ » 2


ಗ್ಯಾರಂಟಿಗೆ ಹಣ ಹೊಂದಿಸಿಕೊಳ್ಳಲು ಮದ್ಯದಂಗಡಿ ಹರಾಜು » 3


ಲಖನೌದಲ್ಲಿ ರಾಷ್ಟ್ರೀಯ ಪ್ರೇರಣಾ ಸ್ಥಳ ಲೋಕಾರ್ಪಣೆ » 4

# ಮುಖ್ಯಮಂತ್ರಿ ಕುರ್ಚಿಗಾಗಿ ಹೋರಾಟ ಅಚಲ

## ಖರ್ಗೆ ಭೇಟಿಯಾದ ಡಿ.ಕೆ.ಶಿವಕುಮಾರ್ | ಸಿದ್ದು ಪರವಾಗಿ ಒಗ್ಗೂಡಿದ ಅಹಿಂದ ನಾಯಕರು

• ಪ್ರಜೋದಯ ವರದಿ

**ಬೆಂಗಳೂರು:** ಪಕ್ಷದ ಕಾರ್ಯಕರ್ತನಾಗಿ ಇರುತ್ತೇನೆ, ವರಿಷ್ಠರಿಗೆ ತೊಂದರೆ ಕೊಡುವುದಿಲ್ಲವೆಂದು ವೈರಾಗ್ಯದ ಮಾತುಗಳನ್ನಾಡಿದ್ದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಗುರುವಾರ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿಯಾಗಿರುವುದು ಕುತೂಹಲ ಕೆರಳಿಸಿದೆ.

ಕಳೆದ ಒಂದು ತಿಂಗಳಿಂದ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಊಹಾಪೋಹಗಳು ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದ್ದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ರಾಜಕೀಯ ನಡೆಗಳು ಹೆಜ್ಜೆಗಳು ಚರ್ಚೆಗೆ ಎಡೆಮಾಡಿಕೊಟ್ಟಿವೆ. ಮುಖ್ಯಮಂತ್ರಿ ಬದಲಾವಣೆ ಸಂಬಂಧ ಹೈಕಮಾಂಡ್ ಸ್ಪಷ್ಟ ನಿರ್ಧಾರ ಕೈಗೊಳ್ಳುತ್ತದೆಂದು ಹೇಳಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಇತ್ತೀಚೆಗೆ ಸ್ಥಳೀಯ ಸಮಸ್ಯೆಯನ್ನು ಸ್ಥಳೀಯವಾಗಿಯೇ ಬಗೆಹರಿಸಿಕೊಳ್ಳಬೇಕು ಎಂದಿದ್ದರು. ಅವರಿಂದ ಈ ಮಾತು ಬರುತ್ತಿದ್ದಂತೆ ಶಿವಕುಮಾರ್ ಅವರು ವರಿಷ್ಠರ ಭೇಟಿಗಾಗಿ ದೆಹಲಿ ಪ್ರವಾಸ ಕೈಗೊಂಡಿದ್ದರು. ಆದರೆ, ನಾಯಕ ರಾಹುಲ್ ಗಾಂಧಿ ಸೇರಿ ಯಾರ ಭೇಟಿಯೂ ಸಾಧ್ಯವಾಗದ ಹಿನ್ನಲೆಯಲ್ಲಿ ಸುದ್ದಿಗೋಷ್ಠಿ ನಡೆಸಿ ಹೈಕಮಾಂಡ್ ಪರ ವಿನಮ್ರ ಮಾತುಗಳನ್ನಾಡಿ ತಮ್ಮದೇಯಾದ ರೀತಿಯಲ್ಲಿ ದಾಳ ಉರುಳಿಸಿದ್ದರು. ಗುರುವಾರ ದಿಢೀರನೆ ಮಲ್ಲಿಕಾರ್ಜುನ ಖರ್ಗೆ ಅವರ ನಿವಾಸಕ್ಕೆ ತೆರಳಿ ಸಭೆ ನಡೆಸಿದ್ದು ಅವರ ಮತ್ತೊಂದು ಚಾಣಾಕ್ಷ ನಡೆ ಎಂಬ ಮಾತುಗಳು ಕೇಳಿಬಂದಿವೆ.



> ನಾಯಕತ್ವ ಬದಲಾವಣೆ ಎಂಬುದು ಊಹಾಪೋಹ ಅಷ್ಟೇ. ಹೈ ಕಮಾಂಡ್ ನಿರ್ಧಾರಕ್ಕೆ ಬದ್ಧರಾಗಿ ಕೆಲಸ ಮಾಡುತ್ತೇವೆಂದು ನಾನು ಮತ್ತು ಸಿದ್ದರಾಮಯ್ಯ ಹೇಳಿದ್ದೇವೆ. ಮಾತಿಗೆ ಬದ್ಧರಾಗಿರುತ್ತೇವೆ. ಅರ್ಥ ವಿಲ್ಲದ ಪ್ರಶ್ನೆಗಳಿಗೆ ಪ್ರತಿಕ್ರಿಯಿಸುವುದಿಲ್ಲ.
> -ಡಿ.ಕೆ.ಶಿವಕುಮಾರ್, ಡಿಸಿಎಂ

ಖರ್ಗೆ ಭೇಟಿ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಡಿ.ಕೆ. ಶಿವಕುಮಾರ್ ಅವರು, ಡಿ. 27ರಂದು ದೆಹಲಿಯಲ್ಲಿ ನಡೆಯುವ ಕಾಂಗ್ರೆಸ್ ಕಾರ್ಯಕಾರಿಣಿ ಸಭೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ

» ನಾಲ್ಕನೇ ಪುಟದಲ್ಲಿ

### ಮೈಸೂರಿನಲ್ಲಿ ಜ.25ಕ್ಕೆ ಸಮಾವೇಶ

ಮುಖ್ಯಮಂತ್ರಿ ಸ್ಥಾನಕ್ಕಾಗಿ ಡಿ.ಕೆ.ಶಿವಕುಮಾರ್ ತೆರೆಮರೆಯ ಕಸರತ್ತು ನಡೆಸುತ್ತಿರುವ ನಡುವೆಯೇ ಸಿದ್ದರಾಮಯ್ಯ ಪರವಾಗಿ ಹಿಂದುಳಿದ ವರ್ಗಗಳ ನಾಯಕರು ಧ್ವನಿ ಎತ್ತಿದ್ದು ಜ. 25 ರಂದು ಮೈಸೂರಿನಲ್ಲಿ ಅಹಿಂದ ಸಮಾವೇಶ ನಡೆಸಲು ನಿರ್ಧರಿಸಿದ್ದಾರೆ.

2028ರ ವರೆಗೆ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿರಬೇಕೆಂದರೆ ಹೈಕಮಾಂಡ್‌ಗೆ ಜನಬೆಂಬಲದ ಸಂದೇಶ ಸಾರಬೇಕು. ಅದಕ್ಕಾಗಿ ಸಮಾವೇಶ ಅನಿವಾರ್ಯವೆಂಬ ಮನಸ್ಥಿತಿಗೆ ಸಿದ್ದರಾಮಯ್ಯ ಬೆಂಬಲಿಗರು ಬಂದಿದ್ದಾರೆ. ಈ ಹಿನ್ನಲೆಯಲ್ಲಿ ಗುರುವಾರ ಮೈಸೂರಿನಲ್ಲಿ ಪೂರ್ವಭಾವಿ ಸಭೆ ನಡೆಸಿದರು. ದಸರಾ ವಸ್ತು ಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿ ಅಹಿಂದ ಸಮಾವೇಶ ನಡೆಸಲಾಗುವುದೆಂದು ರಾಜ್ಯ ಹಿಂದುಳಿದ ಸಮುದಾಯಗಳ ಜಾಗೃತಿ ವೇದಿಕೆ ಅಧ್ಯಕ್ಷ ಕೆ. ಶಿವರಾಮ್ ಅವರು ತಿಳಿಸಿದ್ದಾರೆ. ಕರ್ನಾಟಕದಲ್ಲಿ ಇಲ್ಲಿಯವರೆಗೆ 23 ಮುಖ್ಯಮಂತ್ರಿಗಳಾದರೂ ಹಿಂದುಳಿದ ವರ್ಗಗಳಿಂದ ಬಂದವರು ಬೆರಳೆಣಿಕೆಯಷ್ಟು ಮಾತ್ರ. ಶತಮಾನಗಳಿಂದ ಅಹಿಂದ ಸಮುದಾಯಗಳು ಅನ್ಯಾಯ ಅನುಭವಿಸುತ್ತಿವೆ. ಹಕ್ಕುಗಳಿಗಾಗಿ ಹೋರಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದರು. ನಾಯಕತ್ವ ಅಥವಾ ಸೀಟು ಹಂಚಿಕೆ ಜಗಳದಿಂದಾಗಿ ಕರ್ನಾಟಕ ಮತ್ತೊಂದು ರಾಜಸ್ಥಾನವಾಗಬಾರದು. ಈ ಸಮ್ಮೇಳನವು ಯಾವ ನಾಯಕನ ವಿರುದ್ಧವಲ್ಲ. ಆದರೆ, ಸಿದ್ದರಾಮಯ್ಯ ಅವರಿಗೆ ಅಹಿಂದ ಸಮುದಾಯಗಳ ಬೆಂಬಲ ವ್ಯಕ್ತಪಡಿಸಲು ಮತ್ತು ನಮ್ಮ ಹಕ್ಕುಗಳನ್ನು ಪ್ರತಿಪಾದಿಸುವ ಉದ್ದೇಶದಿಂದ ಆಯೋಜಿಸಿದ್ದೇವೆಂದರು.

ಕರ್ನಾಟಕವು ಬಿಹಾರ, ಗುಜರಾತ್ ಅಥವಾ ರಾಜಸ್ಥಾನದಂತೆ ಆಗಲು ನಾವು ಬಿಡಬಾರದು. ಸಂಪತ್ತು, ಅಧಿಕಾರ , ಜಾತಿಗೆ ಆದ್ಯತೆ ನೀಡುವ ನಾಯ ಕರು ದೇಶವನ್ನು ನಡೆಸಿದರೆ ದೇಶ ಹಾಳಾಗುತ್ತದೆ. ಮುಖ್ಯಮಂತ್ರಿ ಬಲವಾದ ನೈತಿಕ ಮೌಲ್ಯಗಳನ್ನು ಮತ್ತು ಬಡವರ ಕಲ್ಯಾಣಕ್ಕೆ ಬದ್ಧತೆ ಹೊಂದಿದ್ದಾರೆಂದರು.

# ಬಸ್ ದುರಂತ : ಜಿಲ್ಲೆಯ ಇಬ್ಬರು ಯುವತಿಯರು ಸಜೀವ ದಹನ

## ವಿವಾಹ ನಿಶ್ಚಯವಾಗಿದ್ದ ಸಾಫ್ಟ್‌ವೇರ್ ಇಂಜಿನೀಯರ್‌ಗಳು ಸಾವಿನ ಮನೆಗೆ

• ಪ್ರಜೋದಯ ವರದಿ

**ಹಾಸನ:** ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲ್ಲೂಕಿನ ಗೊರ್ಲತ್ತು ಗ್ರಾಮದಲ್ಲಿ ನಡೆದ ಭೀಕರ ಬಸ್ ದುರಂತದಲ್ಲಿ ಜಿಲ್ಲೆಯ ಇಬ್ಬರು ಯುವತಿಯರು ಸಜೀವ ದಹನರಾಗಿದ್ದಾರೆ.

ಚನ್ನರಾಯಪಟ್ಟಣದ ಮಾನಸ ಹಾಗು ತಾಲ್ಲೂಕಿನ ಅಂಕನಹಳ್ಳಿಯ ನವ್ಯ ಎಂಬುವವರು ಸಾವನ್ನಪ್ಪಿದ್ದಾರೆ. ಮೃತಪಟ್ಟ ಇಬ್ಬರು ಯುವತಿಯರ ವಿವಾಹ ನಿಶ್ಚಯವಾಗಿದ್ದು, ನವ್ಯಳ ಮದುವೆ ಏಪ್ರಿಲ್‌ನಲ್ಲಿ ಹಾಗು ಮಾನಸಾಳ ನಿಶ್ಚಿತಾರ್ಥ ಕೂಡ ನಡೆದಿದ್ದು, ಮದುವೆಗೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿತ್ತು. ಯುವತಿಯರು ಹೊಸ ಬದುಕಿಗೆ ಕಾಲಿಡಬೇಕೆನ್ನುವಷ್ಟರಲ್ಲಿ ದುರಂತದಲ್ಲಿ ಅಂತ್ಯಕಂಡಿದ್ದಾರೆ.

ಹಾಸನದ ಮಲೆನಾಡು ಇಂಜಿನೀಯರಿಂಗ್ ಕಾಲೇಜಿನಲ್ಲಿ ಒಟ್ಟಿಗೆ ಇಂಜಿನೀಯರಿಂಗ್ ಶಿಕ್ಷಣ ಪೂರ್ಣಗೊಳಿಸಿದ್ದ ನವ್ಯ ಮತ್ತು ಮಾನಸ, ಬೆಂಗಳೂರಿನಲ್ಲಿ ಎಂ.ಟೆಕ್ ಮುಗಿಸಿ ಸಾಫ್ಟ್‌ವೇರ್ ಇಂಜಿನೀಯರ್‌ಗಳಾಗಿ ಕೆಲಸ ಮಾಡುತ್ತಿದ್ದರು. ಬುಧವಾರ ರಾತ್ರಿ ಸ್ನೇಹಿತೆ ಮಿಲನಾ ಎಂಬುವವರ ಜೊತೆ ಬೆಂಗಳೂರಿನಿಂದ ಗೋಕರ್ಣಕ್ಕೆ ಬಸ್ ಹತ್ತಿ ಹೊರಟಿದ್ದರು. ರಾತ್ರಿ ನಡೆದ ಬಸ್ ಅಪಘಾತದ ವೇಳೆ ಮಿಲನಾ ಗಾಯಗೊಂಡು ಆಸ್ಪತ್ರೆ ಸೇರಿದ್ದು, ಕಣ್ಮರೆಯಾಗಿದ್ದ ಮಾನಸ ಹಾಗು ನವ್ಯ ಅವರ ಮೃತ ದೇಹಗಳನ್ನು ಪಾಲಕರು ಶವಾಗಾರದಲ್ಲಿ ಗುರುತಿಸಿದ್ದಾರೆ.



**ಲಾಕೆಟ್‌ನಿಂದ ಚಹರೆ ಪತ್ತೆ**

ಬಸ್‌ನಲ್ಲಿದ್ದ ಕೆಲ ಪ್ರಯಾಣಿಕರು ಸಜೀವ ದಹನಗೊಂಡು, 6 ಮೃತ ದೇಹಗಳು ಪತ್ತೆಯಾಗಿದ್ದವು. ಆ ಪೈಕಿ ನವ್ಯ ಹಾಗು ಮಾನಸ ಅವರ ಶವಗಳ ಬಗ್ಗೆ ಅನುಮಾನ ವ್ಯಕ್ತವಾಗಿತ್ತು. ಶವಾಗಾರದಲ್ಲಿ ಮಾನಸ ತಂದೆ, ಗಣೇಶನ ಪೆಂಡೆಂಟ್ ಇದ್ದ ಲಾಕೆಟ್ ಮೂಲಕ ಮಗಳ ಶವವನ್ನು ಪತ್ತೆಹಚ್ಚಿದ್ದಾರೆಂದು ಚಿತ್ರದುರ್ಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರು ತಿಳಿಸಿದ್ದಾರೆ.

ಈ ಕುರಿತು ಮಾನಸ ತಂದೆ ಚಂದ್ರೇಗೌಡ ಅವರು ಮಾತನಾಡಿ, ಮಗಳಿಗೆ ಚಿನ್ನದ ಸರ ಹಾಗು ಗಣೇಶನ ಡಾಲರ್ ಕೊಡಿಸಿದ್ದೆ. ನಿಶ್ಚಿತಾರ್ಥ ಆಗಿತ್ತು, ಮದುವೆಗೆ ಸಿದ್ಧತೆ ಮಾಡಿಕೊಂಡಿ ದ್ದೆವು. ಆದರೆ, ವಿಧಿಯಾಟ ಅವಳು ಬದುಕುಳಿಯಲಿಲ್ಲ, ಬೆಂಗಳೂರಿನಿಂದ ಗೋಕರ್ಣ ಹೋಗಲು ನಾನೇ ಹೋಗಿ ಬಸ್ ಹತ್ತಿಸಿದ್ದೆ ಎಂದು ಕಣ್ಣೀರಿಟ್ಟಿದ್ದಾರೆ.

ನವ್ಯ ತಂದೆ ಮಂಜಪ್ಪ ಅವರು ಮಾತನಾಡಿ, ಬೆಳಿಗ್ಗೆ 7 ಗಂಟೆಗೆ ವಿಷಯ ಗೊತ್ತಾಗಿದೆ. ಮಿಲನ ಫೋನ್ ಮಾಡಿ ಹೇಳಿದಳು. ನವ್ಯ, ಮಾನಸ, ಮಿಲನ ಮೂವರು ಬೆಸ್ಟ್ ಫ್ರೆಂಡ್ಸ್ ಆಗಿದ್ದರು. ಮೂವರು ಒಟ್ಟಿಗೆ ಇಂಜಿನೀಯರಿಂಗ್ ಓದಿ, ಸಾಫ್ಟ್‌ವೇರ್ ಇಂಜಿನೀಯರ್ ಆಗಿ ಕೆಲಸ ಮಾಡುತ್ತಿದ್ದರು.

ಸದ್ಯ ರಜೆ ಇದ್ದ ಕಾರಣಕ್ಕೆ ಪ್ರವಾಸಕ್ಕೆ ಹೊರಟಿ ದ್ದರು. ನನಗೆ ಒಬ್ಬನೇ ಮಗ ಹಾಗು ಒಬ್ಬಳೇ ಮಗಳಿದ್ದಾಳೆ. ಏಪ್ರಿಲ್‌ನಲ್ಲಿ ನವ್ಯ ಮದುವೆ ಕೂಡ ನಿಶ್ಚಯವಾಗಿತ್ತು ಎಂದು ಅಳಲು ತೋಡಿಕೊಂಡಿದ್ದಾರೆ.

# ಜಿಲ್ಲಾದ್ಯಂತ ಕ್ರಿಸ್ಮಸ್ ಸಂಭ್ರಮ: ಚರ್ಚ್‌ಗಳಲ್ಲಿ ಪ್ರಾರ್ಥನೆ

• ಪ್ರಜೋದಯ ವರದಿ

**ಹಾಸನ:** ನಗರ ಸೇರಿ ಜಿಲ್ಲಾದ್ಯಂತ ವಿವಿಧ ಚರ್ಚ್‌ಗಳಲ್ಲಿ ಗುರುವಾರ ಯೇಸು ಕ್ರಿಸ್ತರ ಜನ್ಮ ದಿನದ ಅಂಗವಾಗಿ ಆಚರಿಸುವ ಕ್ರಿಸ್ಮಸ್ ಹಬ್ಬವನ್ನು ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಡಿ.24ರ ಮಧ್ಯರಾತ್ರಿಯಿಂದಲೇ ಚರ್ಚ್‌ಗಳಲ್ಲಿ ವಿಶೇಷ ಪ್ರಾರ್ಥನೆ, ಗಾಯನ ಕಾರ್ಯಕ್ರಮಗಳು ನಡೆದವು. ಸಂಸದ ಶ್ರೇಯಸ್ ಪಟೇಲ್ ಅವರು ಚನ್ನರಾಯಪಟ್ಟಣದ ಅಲ್ವಾಲ್ಸ್, ದುದ್ದ ಹೋಬಳಿ ಗಾಡೇನಹಳ್ಳಿಯ ಸಂತ ಇಗ್ನೇಷಿಯಸ್ ಲೊಯೊಲಾ ಚರ್ಚ್‌ಗೆ ಭೇಟಿ ನೀಡಿ ವಿಶೇಷ ಪ್ರಾರ್ಥನೆ ಸಲ್ಲಿಸಿದರು. ಗುರುವಾರ ಬೆಳಿಗ್ಗೆ ಹೊಳೆನರಸೀಪುರದ ರೆಹೋಬೋತ್, ಸಿಎಸ್ಐ ಚರ್ಚ್, ಹಾಸನದ ಎನ್.ಆರ್.ವೃತ್ತದಲ್ಲಿರುವ ಸಂತ ಅಂಥೋಣಿ ಚರ್ಚ್, ಆರ್.ಸಿ.ರಸ್ತೆಯಲ್ಲಿರುವ ಸಿಎಸ್ಐ ವೇಸ್ಲೇ ಚರ್ಚ್‌ಗೆ ಭೇಟಿ ನೀಡಿ ಕ್ರೈಸ್ತ ಬಾಂಧವರಿಗೆ ಹಬ್ಬದ ಶುಭಾಶಯ ಕೋರಿದರು. ಸಾಮೂಹಿಕ ಪ್ರಾರ್ಥನೆ ಮೂಲಕ ಲೋಕ ಕಲ್ಯಾಣಕ್ಕೆ ಪ್ರಾರ್ಥಿಸಿದರು.

ಈ ವೇಳೆ ಸುದ್ದಿಗಾರರೊಂದಿಗೆ ಮಾತನಾಡಿದ ಶ್ರೇಯಸ್ ಅವರು, ಯೇಸು ಭಗವಂತನು ಎಲ್ಲರಿಗೂ ಒಳಿತು ಮಾಡಲಿ, ಉತ್ತಮ ಮಳೆ ಹಾಗು ಉತ್ತಮ ಬೆಳೆ ದೊರಕಲಿ. ತಾನು ಕ್ರೈಸ್ತ ಸಮುದಾಯದ ಶಾಲೆಯಲ್ಲಿ ವಿದ್ಯಾಭ್ಯಾಸ ಮಾಡಿರುವುದರಿಂದ ಕ್ರಿಸ್ಮಸ್ ಹಬ್ಬವು ವೈಯಕ್ತಿಕವಾಗಿ ವಿಶೇಷವಾಗಿದೆ. ಧರ್ಮ ಗುರುಗಳ ಮಾರ್ಗದರ್ಶನದಲ್ಲಿ ಸಮಾಜದಲ್ಲಿ ಸೌಹಾರ್ದತೆ, ಪ್ರೀತಿ ಮತ್ತು ಸಹಬಾಳ್ವೆ ಬೆಳೆಸುವ ಕಾರ್ಯವಾಗಬೇಕಿದೆ ಎಂದರು.





ನಗರದ ಸಂತ ಅಂಥೋನಿಯವರ ದೇವಾಲಯದ ಫಾದರ್ ಪ್ಯಾಟ್ರಿಕ್ ಜಯರಾವ್ ಅವರು ಮಾತನಾಡಿ, ಕ್ರಿಸ್ಮಸ್ ಎಂದರೆ ಯೇಸು ಕ್ರಿಸ್ತನ ಜನನದ ಹಬ್ಬ. ಪ್ರತಿ ವರ್ಷ ಡಿ. 24ರ ಮಧ್ಯರಾತ್ರಿಯಿಂದಲೇ ಎಲ್ಲರೂ ಪ್ರೀತಿ ಮತ್ತು ಹರ್ಷದಿಂದ ಆಚರಿಸುವ ಹಬ್ಬವಾಗಿದೆ. ಹಲವು ದೇಶಗಳಲ್ಲಿ ಇದು ಸಾಂಸ್ಕೃತಿಕ ಹಬ್ಬವಾಗಿಯೂ ರೂಪುಗೊಂಡಿದೆ ಎಂದರು.

# ಮಕ್ಕಳ ಗ್ರಾಮಸಭೆ: ಶೇ.5ರ ಪ್ರಗತಿಯೊಂದಿಗೆ ಜಿಲ್ಲೆಗೆ ಕೊನೆಯ ಸ್ಥಾನ

## ಗಂಭೀರವಾಗಿ ಪರಿಗಣಿಸದ ಜಿಲ್ಲಾ ಪಂಚಾಯಿತಿ | ಪ್ರಚಾರಕ್ಕಷ್ಟೇ ಸೀಮಿತವಾದ ಕಾರ್ಯಕ್ರಮ | ಶಿಕ್ಷಕರ ಅಸಮಾಧಾನ

• ಪ್ರಜೋದಯ ವರದಿ

**ಹಾಸನ:** ಮಕ್ಕಳ ಹಕ್ಕುಗಳು ಮತ್ತು ಕಲ್ಯಾಣದ ಕುರಿತು ಚರ್ಚೆ, ಸಮಸ್ಯೆ ಆಲಿಸಿ ಪರಿಹಾರ ಕಂಡುಕೊಳ್ಳಲು ನಡೆಸಲಾಗುವ ಮಕ್ಕಳ ಗ್ರಾಮಸಭೆಗೆ ಜಿಲ್ಲೆಯಲ್ಲಿ ಭಾರೀ ನಿರುತ್ಸಾಹ ವ್ಯಕ್ತವಾಗಿದೆ.

ಪ್ರತಿ ಶಾಲೆಯಲ್ಲಿ ವರ್ಷಕ್ಕೆ ಎರಡರಿಂದ ಮೂರು ಬಾರಿ ಗ್ರಾಮ ಸಭೆ ನಡೆಸಬೇಕು. ಆದರೆ, ಈ ವರ್ಷ ಶೇ.5ರಷ್ಟು ಮಾತ್ರ ಮಕ್ಕಳ ಗ್ರಾಮ ಸಭೆ ನಡೆಸಲಾಗಿದೆ. 267 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿರೀಕ್ಷಿತ ಮಟ್ಟದಲ್ಲಿ ಸಭೆಗಳು ನಡೆಯದಿರುವುದು ಜಿಲ್ಲಾ ಪಂಚಾಯಿತಿ ಆಡಳಿತ ವೈಖರಿಗೆ ಹಿಡಿದ ಕೈಗನ್ನಡಿಯಾಗಿದೆ.

**ಗ್ರಾಮ ಸಭೆಯ ಉದ್ದೇಶವೇನು ?**

ಮಕ್ಕಳ ಶಿಕ್ಷಣ, ಆರೋಗ್ಯ, ಪೌಷ್ಟಿಕ ಆಹಾರ ಮತ್ತು ರಕ್ಷಣೆಗೆ ಸಂಬಂಧಿಸಿ ಗ್ರಾಮಸಭೆ ಆಯೋಜಿಸಲಾಗುತ್ತದೆ. ಮಕ್ಕಳು ತಮ್ಮ ಶಾಲೆ, ಶೌಚಾಲಯ, ಕುಡಿಯುವ ನೀರು, ಆಟದ ಮೈದಾನ ಸೇರಿ ಹಲವು ಸಮಸ್ಯೆಗಳ ಕುರಿತು ತಮ್ಮ ಅಭಿಪ್ರಾಯ ಹಂಚಿಕೊಳ್ಳುತ್ತಾರೆ. ಶಾಲಾ ಪರಿಸರ, ಕೌಟುಂಬಿಕ, ಶೈಕ್ಷಣಿಕ ಹಾಗು ಬೌದ್ಧಿಕವಾಗಿ ಸುದೀರ್ಘ ಚರ್ಚೆ ನಡೆಸಬೇಕು. ಮಕ್ಕಳ ಹಕ್ಕುಗಳ ರಕ್ಷಣೆಗೆ ಕೈಗೊಂಡಿರುವ ಕ್ರಮಗಳು, ಬಾಲ ಕಾರ್ಮಿಕತೆ ನಿರ್ಮೂಲನೆ, ಶಾಲೆಯಿಂದ ಹೊರಗುಳಿದ ಮಕ್ಕಳನ್ನು ಕರೆತರುವ ಪ್ರಕ್ರಿಯೆ, ಗ್ರಾಮದಲ್ಲಿ ಮಕ್ಕಳ ಅಭಿವೃದ್ಧಿಗೆ ಕೈಗೊಳ್ಳಬೇಕಾದ ಯೋಜನೆಗಳ ಕುರಿತು ಚರ್ಚಿಸಬೇಕು. ಆದರೆ, ಹಾಸನದಲ್ಲಿ ಆ ನಿಟ್ಟಿನಲ್ಲಿ ನಿರೀಕ್ಷಿತ ಮಟ್ಟದಲ್ಲಿ ಕೆಲಸಗಳಾಗಿಲ್ಲ.



ಗ್ರಾಮ ಸಭೆಯನ್ನು ಯಶಸ್ವಿಯಾಗಿ ನಡೆಸಿದ ಜಿಲ್ಲೆಗಳಲ್ಲಿ ಚಿಕ್ಕಬಳ್ಳಾಪುರ ಶೇ.98 ರಷ್ಟು ಸಾಧನೆಯೊಂದಿಗೆ ಮೊದಲ ಸ್ಥಾನದಲ್ಲಿದ್ದರೆ ಶೇ.5ರ ಪ್ರಗತಿಯೊಂದಿಗೆ ಹಾಸನ 31ನೇ ಸ್ಥಾನ ಅಂದರೆ ಕೊನೆಯ ಸ್ಥಾನದಲ್ಲಿದೆ.

**ಪ್ರಚಾರಕ್ಕಷ್ಟೇ ಸೀಮಿತರಾದರು**

ಜಿಲ್ಲಾ ಪಂಚಾಯಿತಿ ನೇತೃತ್ವದಲ್ಲಿ ನಡೆಯುವ ಈ ಮಹತ್ತರ ಕಾರ್ಯಕ್ರಮಕ್ಕೆ ಕ್ಷೇತ್ರ ಶಾಸಕರು, ಗ್ರಾಮ ಪಂಚಾಯಿತಿ ಅಧ್ಯಕ್ಷ ಹಾಗು ಸದಸ್ಯರು, ಎಸ್‌ಡಿಎಂಸಿ ಪದಾಧಿಕಾರಿಗಳು, ಶಿಕ್ಷಕರು ಅಪೇಕ್ಷಿತರಿರುತ್ತಾರೆ. ಶಾಲಾ ಮುಖ್ಯ ಶಿಕ್ಷಕರಿಗೆ ಮೊದಲೇ ದಿನಾಂಕ ತಿಳಿಸಿ ಇಂತಹ ದಿನದಂದು ಮಕ್ಕಳ ಗ್ರಾಮ ಸಭೆ ನಡೆಸೋಣ ಎನ್ನುವುದು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯ ಜವಾಬ್ದಾರಿ. ಯೋಜನೆ ಆರಂಭದ ಕೆಲವು ದಿನ ಎಲ್ಲಾ ತಾಲ್ಲೂಕುಗಳಲ್ಲಿ ಕೆಲ ಶಾಲೆಗಳಿಗೆ ಭೇಟಿ ನೀಡಿ ಕಾರ್ಯಕ್ರಮ ಉದ್ಘಾಟಿಸಿದರು. ನಂತರದ ದಿನಗಳಲ್ಲಿ ಅದನ್ನು ಮುಂದುವರಿಸ ಬೇಕಿದ್ದ ಗ್ರಾಮ ಪಂಚಾಯಿತಿ ಅಧಿಕಾರಿ ಹಾಗು ಜನಪ್ರತಿನಿಧಿಗಳು ಸಂಪೂರ್ಣ ನಿರ್ಲಕ್ಷ್ಯ ವಹಿಸಿದ ಪರಿಣಾಮ ಪ್ರಗತಿಯಲ್ಲಿ ಜಿಲ್ಲೆ ಕೊನೆಯ ಸ್ಥಾನ ತಲುಪುವಂತಾಗಿದೆ. ಮೇಲ್ಮಟ್ಟದ ಅಧಿಕಾರಿಗಳು ಸಹ ಆ ಕುರಿತು ಚಿಂತನೆ ನಡೆಸದಿರುವುದು ದುರದೃಷ್ಟಕರ.

**ಶಿಕ್ಷಣ ಅನುದಾನವೂ ಮೊಟಕು**

ಜಿಲ್ಲೆಯ ಕೆಲವು ಗ್ರಾಮ ಪಂಚಾಯಿತಿಗಳಲ್ಲಿ ಪ್ರತಿವರ್ಷ ಶಾಲೆಗಾಗಿ ನೀಡಬೇಕಿರುವ ಶಿಕ್ಷಣ ಅನುದಾನ ನೀಡಲು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹಿಂದೇಟು ಹಾಕುತ್ತಿದ್ದಾರೆ. ವಾರ್ಷಿಕ 5 ಸಾವಿರ ರೂ.ಗಳನ್ನು ಪಂಚಾಯಿತಿ ನೀಡಬೇಕು. ಸರ್ಕಾರದಿಂದ ಈ ಯೋಜನೆಯಡಿ ಅನುದಾನ ಬರುತ್ತದೆಂಬ ಮಾಹಿತಿಯೂ ಕೆಲವು ಶಿಕ್ಷಕರಿಗೆ ಇಲ್ಲ. ಪಂಚಾಯಿತಿಯವರು ಮಾತ್ರ ಹಣ ನೀಡಿದ್ದೇವೆಂದು ಬಿಲ್ ಮಾಡುವುದು ಸಾಮಾನ್ಯವಾಗಿದೆ ಎಂದು ಹೆಸರು ಹೇಳಲಿಚ್ಛಿಸದ ಶಿಕ್ಷಕರೊಬ್ಬರು ಹೇಳಿದರು.

**ಶಾಲೆಗಳಲ್ಲಿ ಹೆಚ್ಚಲಿ ಅರಿವು ಕಾರ್ಯಕ್ರಮ**

ಮಕ್ಕಳ ಗ್ರಾಮ ಸಭೆ ಎಂದರೆ ಕೇವಲ ಒಂದು ದಿನದ ಸಾಂಸ್ಕೃತಿಕ ಕಾರ್ಯಕ್ರಮವಲ್ಲ. ಸಂಪನ್ಮೂಲ ವ್ಯಕ್ತಿಗಳಿಂದ ಅರಿವು ಮೂಡಿಸುವ ಕೆಲಸವೂ ಆಗಬೇಕಿದೆ. ಪೋಕ್ಸೋ ಕಾಯ್ದೆ, ಬಾಲ ಕಾರ್ಮಿಕ ಪದ್ಧತಿ, ಶಾಲೆ ಬಿಟ್ಟ ಮಕ್ಕಳ ವಾಪಸ್ ಕರೆತರುವುದು ಸೇರಿ ಶೈಕ್ಷಣಿಕ ಪ್ರಗತಿ ದೃಷ್ಟಿಯಿಂದ ಹತ್ತು ಹಲವು ಕ್ರಮಗಳನ್ನು ಕೈಗೊಳ್ಳಬೇಕಿದೆ. ಈ ನಿಟ್ಟಿನಲ್ಲಿ ಜಿಲ್ಲಾ ಪಂಚಾಯಿತಿ ಹಾಗು ಶಿಕ್ಷಣ ಇಲಾಖೆ ಅಧಿಕಾರಿಗಳು ಗಮನ ಹರಿಸಬೇಕಿದೆ.

# ಖಾಸಗಿ ಶಾಲೆ ವಿರುದ್ಧ ಮಕ್ಕಳ ಹಕ್ಕುಗಳ ಆಯೋಗದ ಅಧ್ಯಕ್ಷರ ತರಾಟೆ

• ಪ್ರಜೋದಯ ವರದಿ

**ಹಾಸನ:** ಅಪ್ರಾಪ್ತ ಬಾಲಕಿ ಮೇಲೆ ಅತ್ಯಾಚಾರವೆಸಗಿ ಬಾಲಕಿ ಮಗುವಿಗೆ ಜನ್ಮ ನೀಡಿದ ಪ್ರಕರಣ ಸಂಬಂಧ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಅಧ್ಯಕ್ಷ ಶಶಿಧರ್ ಕೋಸಂಬೆ ಅವರು ಚನ್ನರಾಯಪಟ್ಟಣದ ಖಾಸಗಿ ಶಾಲೆಗೆ ಭೇಟಿ ನೀಡಿ ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗು ಶಾಲೆಗೆ ಕಾರಣ ಕೇಳಿ ನೋಟೀಸ್ ಜಾರಿ ಮಾಡಿದ್ದಾರೆ.

10ನೇ ತರಗತಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ನಡೆದರೂ ಶಿಕ್ಷಕರು, ಪೋಷಕರು ಗಮನ ಹರಿಸದಿರುವುದು ಬೇಸರದ ಸಂಗತಿ. ಇಲ್ಲಿ ಮುಖ್ಯ ಶಿಕ್ಷಕರ ನಿರ್ಲಕ್ಷ್ಯವೂ ಹೆಚ್ಚಿದೆ. ಮಕ್ಕಳ ದಾಖಲಾತಿ ಕಾಪಾಡುವಲ್ಲಿ ಸಂಸ್ಥೆ ನಿರ್ಲಕ್ಷ್ಯ ವಹಿಸಿದೆ ಎಂದು ತರಾಟೆಗೆ ತೆಗೆದುಕೊಂಡರು.



ರಾಜ್ಯಾದ್ಯಂತ 2016ರಿಂದ ಮಕ್ಕಳ ರಕ್ಷಣಾ ನೀತಿ ಜಾರಿಗೆ ಬಂದಿದೆ. ಶಾಲೆಯಲ್ಲಿ ಅದು ಅನುಷ್ಠಾನಗೊಂಡಿಲ್ಲ. ಮಕ್ಕಳಿಗೆ ಶಿಕ್ಷಣ ನೀಡುವುದಷ್ಟೇ ಸಂಸ್ಥೆಯ ಕೆಲಸವಲ್ಲ, ಅವರ ಭದ್ರತೆಯೂ ಅಷ್ಟೇ ಮುಖ್ಯವಾಗಿರುತ್ತ ಎಂದ ಅವರು, ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯವೆಸಗಿರುವ ಶಾಲಾ ವಾಹನದ ಚಾಲಕ ರಂಜಿತ್‌ನನ್ನು ಬಂಧಿಸುವಂತೆ ಸೂಚಿಸಿ, ಆತನ ಹಿನ್ನಲೆ, ಬೇರೆ ಯಾವುದಾದರೂ ಪ್ರಕರಣದಲ್ಲಿ ಆರೋಪಿಯಾಗಿದ್ದಾನಾ ಎಂಬುದರ ಕುರಿತು ವರದಿ ನೀಡುವಂತೆ ಡಿವೈಎಸ್ಪಿರವರಿಗೆ ಸೂಚಿಸಿದರು.

ಶಾಲಾ ವಾಹನದಲ್ಲಿ ಸಿಸಿಟಿವಿ ಅಳವಡಿಕೆ, ಮಕ್ಕಳ ಮೇಲೆ ನಿಗಾ ವಹಿಸಲು ಮಹಿಳಾ ಸಿಬ್ಬಂದಿ ನೇಮಕ ಮಾಡದಿರುವುದು, ಪರಿಣತ ಚಾಲಕನನ್ನು ನೇಮಕ ಮಾಡದಿರುವುದು ಕಂಡು ಬಂದಿದೆ. ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಿದ್ದು, ತಪ್ಪಿತಸ್ಥರ ವಿರುದ್ಧ ಕ್ರಮ ಖಚಿತವೆಂದರು. ಶಾಲೆಯಲ್ಲಿ ದಾಖಲಾತಿ ಪರಿಶೀಲಿಸಿದ ನಂತರ ಹಿಮ್ಸ್‌ಗೆ ಭೇಟಿ ನೀಡಿ ಬಾಲಕಿ ಆರೋಗ್ಯ ವಿಚಾರಿಸಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಕೆ.ಜಿ. ದಿಲೀಪ್, ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಬಲರಾಮ್ ಮತ್ತಿತರರಿದ್ದರು.

# ಸಿಎಸ್‌ಗಳೊಂದಿಗೆ 3 ದಿನ ಮೋದಿ ಸಭೆ

• ಪ್ರಜೋದಯ ವರದಿ

**ನವದೆಹಲಿ :** ಅಭಿವೃದ್ಧಿ ಹೊಂದಿದ ರಾಷ್ಟ್ರವಾಗುವ ಭಾರತದ ಗುರಿ ಸಾಧಿಸಲು ಕೈಗೊಳ್ಳಬೇಕಾದ ಕ್ರಮಗಳು, ಮಾನವ ಸಂಪನ್ಮೂಲಕ್ಕೆ ಉತ್ತೇಜನ ಸೇರಿ ಇನ್ನಿತರೆ ಕ್ರಮ ಕೈಗೊಳ್ಳುವ ಹಿನ್ನಲೆಯಲ್ಲಿ ಅನುಸರಿಸಬೇಕಾದ ಕ್ರಮಗಳ ಕುರಿತು ಪ್ರಧಾನಿ ನರೇಂದ್ರ ಮೋದಿ ಮೂರು ದಿನಗಳ ಕಾಲ ರಾಜ್ಯಗಳ ಮುಖ್ಯಕಾರ್ಯದರ್ಶಿಗಳೊಂದಿಗೆ ಮಹತ್ವದ ಸಭೆ ಕರೆದಿದ್ದಾರೆ.

ಮಹಿಳೆಯರು ಮತ್ತು ಮಕ್ಕಳ ಕಲ್ಯಾಣ, ಶಾಲಾ ಶಿಕ್ಷಣ, ಉನ್ನತ ಶಿಕ್ಷಣ, ಕ್ರೀಡೆ, ಕೌಶಲ್ಯ ಅಭಿವೃದ್ಧಿಗೆ ಸಂಬಂಧಿಸಿದ ಐದು ವಿಷಯಗಳಿಗೆ ಸಭೆಯಲ್ಲಿ ಒತ್ತು ನೀಡಲಾಗಿದೆ.

# ಕಾಡಾನೆಗಳ ದಾಂಧಲೆ, ಭೀಮನ ಓಡಾಟಕ್ಕೆ ರೈತರು ಹೈರಾಣ

## ಬೇಲೂರು ತಾಲ್ಲೂಕಿನಲ್ಲಿ ತಪ್ಪದ ಗಜಪಡೆ ಗಲಾಟೆ: ಭತ್ತದ ಬೆಳೆ ನಾಶ

• ಪ್ರಜೋದಯ ವರದಿ

**ಬೇಲೂರು:** ರಾತ್ರಿ ವೇಳೆ ಕಾಡಾನೆಗಳು ಗುಂಪು ಜಮೀನಿಗೆ ಲಗ್ಗೆ ಇಟ್ಟು ಬೆಳೆ ನಾಶ ಮಾಡುತ್ತಿದ್ದರೆ, ಹಗಲಿನ ವೇಳೆ ಕಾಡಾನೆ ಭೀಮ ಆಹಾರ ಅರಸಿ ಮನೆ ಬಾಗಿಲಿಗೆ ಬರುತ್ತಿರುವುದರಿಂದ ತಾಲ್ಲೂಕಿನ ರೈತರು ಕಂಗೆಟ್ಟಿದ್ದಾರೆ.

ಭೀಮ ಗುರುವಾರ ತಾಲ್ಲೂಕಿನ ಬಿಕ್ಕೋಡು ಹೋಬಳಿ ಹುಸ್ಕೂರು ಗ್ರಾಮದ ಮನೆಗಳ ಬಳಿ ಬಂದು ಆತಂಕ ಸೃಷ್ಟಿಸಿದೆ. ಕಾಡಾನೆಯನ್ನು ಕಂಡ ಗ್ರಾಮಸ್ಥರು ಇಟಿಎಫ್ ಸಿಬ್ಬಂದಿಗೆ ಮಾಹಿತಿ ನೀಡಿದ ಹಿನ್ನಲೆ ಬೇರೆಡೆಗೆ ಓಡಿಸಲು ಅರಣ್ಯ ಇಲಾಖೆ ಸಿಬ್ಬಂದಿ ಹೈರಾಣಾಗಿದ್ದಾರೆ.



ತಾಲ್ಲೂಕಿನ ಕರಡಗೋಡು ಗ್ರಾಮದ ನರೇಂದ್ರ, ಶಿವೇಗೌಡ್ರು ತೋಟ, ಕೊಗೋಡು ಗ್ರಾಮದ ಅರಮನೆ ಗುಡ್ಡ, ಬೆಳ್ಳಾವರ ಗ್ರಾಮದ ಈಶ್ವರ ಎಸ್ಟೇಟ್, ಬೊಮ್ಮಡಿಹಳ್ಳಿ ಗ್ರಾಮದ ಬೊಮ್ಮಡಿಹಳ್ಳಿ ಫಾರೆಸ್ಟ್, ನೆರಳಮಕ್ಕಿ ಗ್ರಾಮದ ಕಾನಹಳ್ಳಿ ಫಾರೆಸ್ಟ್, ಸುತ್ತಮುತ್ತ ಕಾಡಾನೆಗಳ ಸಂಚಾರ ಕಂಡು ಬಂದಿದ್ದು, ಫಸಲಿಗೆ ಬಂದಿರುವ ಭತ್ತದ ಬೆಳೆ ಉಳಿಸಿಕೊಳ್ಳಲು ರೈತರು ಹರಸಾಹಸ ಪಡುವಂತಾಗಿದೆ.

ನಾಲ್ಕೈದು ದಿನಗಳಿಂದ ಕಾಡಾನೆಗಳ ಗುಂಪು ರಾತ್ರಿ ಸಮಯದಲ್ಲಿ ದಾಂಧಲೆ ಮಾಡುತ್ತಿದ್ದರೆ, ಭೀಮ ಹಗಲಿನ ಸಮಯ ಗದ್ದೆಯಲ್ಲಿ ಓಡಾಡುತ್ತಾ ನಮ್ಮ ಕಣ್ಣುದುರಲ್ಲೇ ಭತ್ತದ ತೆನೆಯನ್ನು ತಿನ್ನುತ್ತಾ ಹಾನಿ ಮಾಡುತ್ತಿದೆ. ಜಮೀನಲ್ಲಿ ಕೆಲಸ ನಿರ್ವಹಿಸುತ್ತಿದ್ದ ವೇಳೆ ಬೇರೊಂದು

» ನಾಲ್ಕನೇ ಪುಟದಲ್ಲಿ

# ಅತ್ಯಾಚಾರ: ಬಾಲಕಿ ಮೇಲೆ ವ್ಯತಿರಿಕ್ತ ಪರಿಣಾಮ ಬೀರದಿರಲಿ



• ಪ್ರಜೋದಯ ವರದಿ

**ಹಾಸನ:** ಅತ್ಯಾಚಾರಕ್ಕೊಳಗಾಗಿ ಮಗುವಿಗೆ ಜನ್ಮ ನೀಡಿರುವ ಅಪ್ರಾಪ್ತ ಬಾಲಕಿಯ ಮನಸ್ಸಿನ ಮೇಲೆ ಈ ಘಟನೆ ವ್ಯತಿರಿಕ್ತ ಪರಿಣಾಮ ಬೀರದಂತೆ ಅಧಿಕಾರಿಗಳು ಎಚ್ಚರ ವಹಿಸಬೇಕೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ ಅವರು ಹೇಳಿದರು.

ಜಿಲ್ಲೆಯ ಖಾಸಗಿ ಶಾಲೆಯೊಂದರ ವಾಹನ ಚಾಲಕನ ಲೈಂಗಿಕ ಶೋಷಣೆಯಿಂದ ಹೆಣ್ಣು ಮಗುವಿಗೆ ಜನ್ಮ ನೀಡಿ ಹಿಮ್ಸ್‌ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ಬಾಲಕಿಯ ಆರೋಗ್ಯ ವಿಚಾರಿಸಿ ಗುರುವಾರ

» ನಾಲ್ಕನೇ ಪುಟದಲ್ಲಿ

## ಜಿಲ್ಲೆಯಲ್ಲಿ ಹೊಸ ವರ್ಷಕ್ಕೆ ಜೆಡಿಎಸ್ ಬೃಹತ್ ಸಮಾವೇಶ | ಸ್ಥಳೀಯ ಸಂಸ್ಥೆ ಚುನಾವಣೆ ಹೊತ್ತಿನಲ್ಲಿ ದಳಪತಿಗಳ ರಣಕಹಳೆ

# ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ಅಖಾಡಕ್ಕಿಳಿದ ದೇವೇಗೌಡರು

• ಪ್ರಜೋದಯ ವರದಿ

**ಹಾಸನ:** ಜೆಡಿಎಸ್ ಭದ್ರಕೋಟೆಯಲ್ಲಿ ಕಳೆದ ವಿಧಾನಸಭೆ, ಲೋಕಸಭೆ ಚುನಾವಣೆಯಲ್ಲಿ ಜಿಲ್ಲೆಯಲ್ಲಿ ಖಾತೆ ತೆರೆದಿರುವ ಕಾಂಗ್ರೆಸ್, ಸಾಲು ಸಾಲು ಸಮಾವೇಶ ನಡೆಸಿ ಜನಬಲ ಪ್ರದರ್ಶನ ಮಾಡುತ್ತಿದೆ. ಇದೀಗ ಸ್ಥಳೀಯ ಸಂಸ್ಥೆ ಚುನಾವಣೆ ಸಮೀಪಿಸುತ್ತಿದ್ದಂತೆ ಎಚ್ಚೆತ್ತ ಜೆಡಿಎಸ್, ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ಸಮಾವೇಶದ ಮೂಲಕ ರಣಕಹಳೆ ಮೊಳಗಿಸಲು ಸಜ್ಜಾಗಿದೆ.

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಎರಡೂವರೆ ವರ್ಷದಲ್ಲಿ ಸಾವಿರಾರು ಸಂಖ್ಯೆಯಲ್ಲಿ ಜನರನ್ನು ಸೇರಿಸಿ ನಗರದಲ್ಲಿ ಎರಡು, ಅರಸೀಕೆರೆಯಲ್ಲಿ ಒಂದು ಬೃಹತ್ ಸಮಾವೇಶ ನಡೆಸಲಾಗಿದೆ. ಆದರೆ, ಕಳೆದ ಲೋಕಸಭೆ ಚುನಾವಣೆ ವೇಳೆ ಮಾಜಿ ಸಂಸದ ಪ್ರಜ್ವಲ್ ಪ್ರಕರಣದಿಂದ ಜೆಡಿಎಸ್ ಕಾಯಕರ್ತರು ಮುಜುಗರಕ್ಕೆ ಒಳಗಾಗಿ ಉತ್ಸಾಹ ಕಳೆದುಕೊಂಡಿದ್ದರು.



ಜಿಲ್ಲಾ ಜೆಡಿಎಸ್ ಕಾರ್ಯಕರ್ತರಿಗೆ ಚೈತನ್ಯ ತುಂಬುವ ನಿಟ್ಟಿನಲ್ಲಿ ಸಮಾವೇಶ ನಡೆಸುವುದಾಗಿ ಪಕ್ಷದ ರಾಜ್ಯಾಧ್ಯಕ್ಷರೂ ಆದ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಹಲವು ಬಾರಿ ಹೇಳಿದ್ದರೂ ಕಾರ್ಯರೂಪಕ್ಕೆ ಬಂದಿರಲಿಲ್ಲ. ಇದೀಗ ಪಕ್ಷದ ರಾಷ್ಟ್ರೀಯ ಅಧ್ಯಕ್ಷ, ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡ ಅವರೇ ಅಖಾಡಕ್ಕಿಳಿದು ಜನವರಿ ತಿಂಗಳಲ್ಲಿ ಜಿಲ್ಲೆಯಲ್ಲಿ ಬೃಹತ್ ಜೆಡಿಎಸ್ ಸಮಾವೇಶ ನಡೆಸುವುದಾಗಿ ಘೋಷಿಸಿದ್ದಾರೆ.



**ಟಕ್ಕರ್ ನೀಡಲು ದಳಪತಿಗಳ ತಂತ್ರ**

ಮಾಜಿ ಪ್ರಧಾನಿ ದೇವೇಗೌಡರತವರು ಜಿಲ್ಲೆಯಲ್ಲಿ ಕಾಂಗ್ರೆಸ್ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಜಿಲ್ಲೆಯಲ್ಲಿ ಒಂದರ ಮೇಲೊಂದು ಸಮಾವೇಶ ಆಯೋಜಿಸುವ ಮೂಲಕ ರಾಜಕೀಯ ಚಟುವಟಿಕೆ ಗರಿಗೆದರುವಂತೆ ಮಾಡಿದ್ದಾರೆ. ಇದಕ್ಕೆ ತಿರುಗೇಟು ನೀಡುವ ಉದ್ದೇಶದಿಂದ ದೇವೇಗೌಡರ ನೇತೃತ್ವದಲ್ಲಿ 2026ರ ಹೊಸ ವರ್ಷದಲ್ಲಿ ಜಿಲ್ಲೆಯಲ್ಲಿ ಜನತದಳ ಸಮಾವೇಶ ನಡೆಸುವ ಮೂಲಕ ಕಾಂಗ್ರೆಸ್‌ಗೆ ತಕ್ಕ ಉತ್ತರ ನೀಡಲು ನಿರ್ಧರಿಸಿದ್ದಾರೆ.

ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ, ಹಾಸನ ಮಹಾನಗರ ಪಾಲಿಕೆ, ಅರಸೀಕೆರೆ ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ಚುನಾವಣಾ ಚಟುವಟಿಕೆಗಳು ಗರಿಗೆದರಿರುವ ಹೊತ್ತಿನಲ್ಲಿ ದೇವೇಗೌಡರು ಸಮಾವೇಶ ನಡೆಸುವ ಮೂಲಕ ಪಕ್ಷದ ಶಕ್ತಿ ಪ್ರದರ್ಶನಕ್ಕೆ ಮುಂದಾಗಿದ್ದಾರೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ

» ನಾಲ್ಕನೇ ಪುಟದಲ್ಲಿ

### ಕಾರ್ಯಕರ್ತರ ಮನೋಬಲ ಹೆಚ್ಚಿಸಲು ತಂತ್ರ

ಮಾರ್ಚ್ ಅಥವಾ ಏಪ್ರಿಲ್‌ನಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆಯುವ ಸಾಧ್ಯತೆ ಇರುವ ಹಿನ್ನಲೆ ಪಕ್ಷ ಸಂಘಟನೆಗೆ ಬಲ ನೀಡುವ ಉದ್ದೇಶದಿಂದ ಈ ಸಮಾವೇಶ ಆಯೋಜಿಸಲಾಗುತ್ತಿದೆ ಎಂದು ಪಕ್ಷದ ಮೂಲಗಳು ತಿಳಿಸಿವೆ. ಪ್ರಜ್ವಲ್ ಪ್ರಕರಣದಿಂದ ಕುಂಠಿತಗೊಂಡಿದ್ದ ಕಾರ್ಯಕರ್ತರ ಮನೋಬಲವನ್ನು ಹೆಚ್ಚಿಸಿ, ಜಿಲ್ಲೆಯಲ್ಲಿ ಮತ್ತೆ ಜೆಡಿಎಸ್ ಅಧಿಪತ್ಯ ಸ್ಥಾಪಿಸುವ ಉದ್ದೇಶ ಈ ಸಮಾವೇಶದ ಹಿಂದಿದೆ ಎನ್ನಲಾಗುತ್ತಿದೆ.

# ಅರಣ್ಯ ಇಲಾಖೆ ಸಿಬ್ಬಂದಿಗೆ 1 ಕೋ.ರೂ. ವಿಮೆ

• ಪ್ರಜೋದಯ ವರದಿ

**ಬೆಂಗಳೂರು:** ಅರಣ್ಯ ಇಲಾಖೆಯ ಖಾಯಂ ಅಧಿಕಾರಿ, ಸಿಬ್ಬಂದಿಗೆ 1 ಕೋ.ರೂ. ಅಪಘಾತ (ಮರಣ) ವಿಮೆ ಹಾಗು ಹೊರಗುತ್ತಿಗೆ ಸಿಬ್ಬಂದಿಗೆ 20 ಲಕ್ಷ ರೂ. ವಿಮಾ ಸೌಲಭ್ಯ ಕಲ್ಪಿಸಲು ಬ್ಯಾಂಕ್ ಆಫ್ ಬರೋಡಾದೊಂದಿಗೆ ತಿಳಿವಳಿಕೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ಅರಣ್ಯ ಸಚಿವ ಈಶ್ವರ ಖಂಡ್ರೆ ಅವರು ತಿಳಿಸಿದ್ದಾರೆ.

ವನ ಮತ್ತು ವನ್ಯಜೀವಿಗಳ ರಕ್ಷಣೆಗಾಗಿ ಮುಂಚೂಣಿ ಸಿಬ್ಬಂದಿ/ಹಸಿರು ಸೈನಿಕರು ಅಪಾಯ ಎದಿರುಸುತ್ತಾ ಹಗಲಿರುಳು ಶ್ರಮಿಸುತ್ತಿದ್ದು, ಇಲಾಖೆ ಕೆಲವು ಶೌರ್ಯಶಾಲಿ ಹಸಿರು ಯೋಧರನ್ನು ಕಳೆದುಕೊಂಡಿದೆ. ಇವರೆಲ್ಲರಿಗೂ ಸಾಮಾಜಿಕ ಮತ್ತು ಆರ್ಥಿಕ ಭದ್ರತೆ ಒದಗಿಸಲು ಈ ತಿಳಿವಳಿಕೆ ಒಪ್ಪಂದ ಮಾಡಿಕೊಳ್ಳಲಾಗಿದೆ ಎಂದು ವಿವರಿಸಿದ್ದಾರೆ.

CMYK CMYK CMYK CMYK

E-mail : prajodayahsn@gmail.com
ಪ್ರಜೋದಯ
26 ಡಿಸೆಂಬರ್ 2025 ಶುಕ್ರವಾರ
ಸಿನಿ ಪ್ರಜಾ

## ಹೊಸ ವರ್ಷಕ್ಕೆ ಚಿಕ್ಕಣ್ಣ ನಟನೆಯ ಜೋಡೆತ್ತು ಶೂಟಿಂಗ್ ಶುರು

ಚಿಕ್ಕಣ್ಣ ನಾಯಕ ನಟರಾಗಿರುವ ಜೋಡೆತ್ತು ಸಿನಿಮಾ ಇತ್ತೀಚೆಗಷ್ಟೇ ಸೆಟ್ಟೇರಿತ್ತು. ಚಿತ್ರತಂಡ ಇದೀಗ ಶೂಟಿಂಗ್‌ಗೆ ಹೊರಡಲು ಸಜ್ಜಾಗಿದೆ. ಇಡೀ ಸಿನಿಮಾ ಗ್ರಾಮೀಣ ಸೊಗಡಿನ ಹಿನ್ನೆಲೆಯಲ್ಲಿ ಕಟ್ಟಿಕೊಡುವ ಬಯಕೆಯಿಂದ, ಅದಕ್ಕಾಗಿ ಒಂದು ಗ್ರಾಮವನ್ನೇ ಸೆಟ್ನಲ್ಲಿ ನಿರ್ಮಿಸುತ್ತಿದೆ ಜೋಡೆತ್ತು ತಂಡ. ಇದಕ್ಕಾಗಿ ಚಿಕ್ಕಮಗಳೂರಿನಲ್ಲಿ ಬೃಹತ್ ಸೆಟ್ ಹಾಕಲಾಗಿದೆ. ಜನವರಿ 5ರಿಂದ ಚಿತ್ರೀಕರಣ ಶುರುವಾಗಲಿದೆ.

ಸೋಮಶೇಖರ್ (ಕಟ್ಟಿಗೇನಹಳ್ಳಿ) ನಿರ್ಮಾಣದ ಜೋಡೆತ್ತು ಸಿನಿಮಾ ಪ್ಯಾನ್ ಇಂಡಿಯಾ ಮಟ್ಟದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗುತ್ತಿದೆ. ಆಕಾಶ್ ಎಂಟರ್ ಪ್ರೈಸಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾಗುತ್ತಿರುವ ಮೂರನೇ ಸಿನಿಮಾವಿದು. ಚಿಕ್ಕಣ್ಣ ಜತೆಗೆ ತೆಲುಗಿನ ಸುನಿಲ್ ಸಹ ಪ್ರಮುಖ ಪಾತ್ರ ನಿರ್ವಹಿಸುತ್ತಿದ್ದಾರೆ. ಇವರೊಟ್ಟಿಗೆ ಇನ್ನೂ ಅನೇಕ ಕಲಾವಿದರು ನಟಿಸಲಿದ್ದು, ಅದರ ಕುರಿತು ಸದ್ಯದಲ್ಲೇ ಚಿತ್ರತಂಡ ಅಧಿಕೃತವಾಗಿ ಮಾಹಿತಿ ಹರಿಬಿಡಲಿದೆ.

ಅಧ್ಯಕ್ಷ, ರಾಬರ್ಟ್, ಕಾಟೇರ ಹಾಗೂ ಇತ್ತೀಚೆಗೆ ಬಿಡುಗಡೆಯಾದ ದಿ ಡೆವಿಲ್ ಸಿನಿಮಾಕ್ಕೆ ಕ್ಯಾಮೆರಾಮನ್ ಆಗಿದ್ದ ಸುಧಾಕರ್ ಎಸ್ ರಾಜ್ ಈ ಸಿನಿಮಾಕ್ಕೆ ಆಕ್ಷನ್ ಕಟ್ ಹೇಳಲಿದ್ದಾರೆ. ಜತೆಗೆ ಛಾಯಾಗ್ರಹಣ ಜವಾಬ್ದಾರಿಯೂ ಅವರೇ ನಿರ್ವಹಿಸುವ ಮೂಲಕ ಜೋಡೆತ್ತುಗಳಿಗೆ ಕಣ್ಣಾಗಲಿದ್ದಾರೆ.

ಇನ್ನು ಈ ಚಿತ್ರಕ್ಕೆ ವಿ.ಹರಿಕೃಷ್ಣ ಸಂಗೀತ ಸಂಯೋಜಿಸಲಿದ್ದು, ಐದು ಹಾಡುಗಳನ್ನು ಕಟ್ಟಿಕೊಡಲಿದ್ದಾರೆ. ಮಾಸ್ತಿ, ರಾಜಶೇಖರ್ ಹಾಗೂ ರಘು ನಿಡುವಳ್ಳಿ ಈ ಚಿತ್ರಕ್ಕೆ ಸಂಭಾಷಣೆ ಬರೆಯುತ್ತಿದ್ದು, ಮೋಹನ್ ಬಿ ಕೆರೆ ಕಲಾ ನಿರ್ದೇಶನ ಜೋಡೆತ್ತು ಸಿನಿಮಾಕ್ಕಿದೆ. ಎಲ್ಲಾ ಅಂದುಕೊಂಡಂತೆ ಆದರೆ 2026ರಲ್ಲಿ ಸಿನಿಮಾ ತೆರೆಕಾಣಲಿದೆ. ಈ ಸಿನಿಮಾದ ಕಥೆ 80ರ ದಶಕದ ಕಾಲಘಟ್ಟದಲ್ಲಿ ನಡೆಯುತ್ತದೆ. ನಿಜವಾದ ಜೋಡೆತ್ತು ಯಾರೆಂಬುದನ್ನು ಸದ್ಯದಲ್ಲೇ ತಿಳಿಸುತ್ತೇವೆ.




ಇದು ನನ್ನ ಕೆರಿಯರ್‌ನಲ್ಲೇ ದೊಡ್ಡ ಬಜೆಟ್‌ನ ಸಿನಿಮಾ. ಹಳ್ಳಿಯಲ್ಲಿ ಶುರುವಾಗಿ ಹಳ್ಳಿಯಲ್ಲೇ ಮುಗಿಯುವ ಸಿನಿಮಾ. ಫ್ಯಾಮಿಲಿ ಸೆಂಟಿಮೆಂಟ್, ಕಾಮಿಡಿ, ಆಕ್ಷನ್ ಎಲ್ಲಾ ಅಂಶಗಳೂ ಕೂಡಿರುವ ಸಿನಿಮಾವಿದು ಎಂದರು ನಟ ಚಿಕ್ಕಣ್ಣ.


## 26-12-2025 ದಿನ ಭವಿಷ್ಯ



**ಮೇಷ:** ನೀವು ಅಭಿಪ್ರಾಯ ನೀಡುವಾಗ ಇತರರ ಭಾವನೆಗಳನ್ನು ವಿಶೇಷವಾಗಿ ಪರಿಗಣಿಸಿ. ನೀವು ಮಾಡಿದ ಯಾವುದೇ ತಪ್ಪು ನಿರ್ಧಾರ ಅವರಿಗೆ ಮಾತ್ರ ವ್ಯತಿರಿಕ್ತ ಪರಿಣಾಮ ಉಂಟುಮಾಡದೇ ನಿಮಗೂ ಮಾನಸಿಕ ಒತ್ತಡ ನೀಡುತ್ತದೆ. ಇಂದು ನೀವು ನಿಮ್ಮ ಮಕ್ಕಳ ಕಾರಣದಿಂದ ಆರ್ಥಿಕ ಲಾಭವನ್ನು ಪಡೆಯುವ ಸಾಧ್ಯತೆ ಕಂಡುಬರುತ್ತಿದೆ.



**ವೃಷಭ:** ನಿಮ್ಮ ಆಕರ್ಷಕ ವರ್ತನೆ ಗಮನ ಸೆಳೆಯುತ್ತದೆ. ಮೌಲ್ಯ ಹೆಚ್ಚಾಗುವ ವಸ್ತುಗಳನ್ನು ಖರೀದಿಸಲು ಪರಿಪೂರ್ಣ ದಿನ. ನೀವು ಕುಟುಂಬದ ಸದಸ್ಯರೊಂದಿಗೆ ಸಮಯ ಕಳೆಯದೇ ಹೋದರೆ ಮನೆಯಲ್ಲಿ ಸಮಸ್ಯೆಗಳನ್ನು ನಿರೀಕ್ಷಿಸಬಹುದು. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.



**ಮಿಥುನ:** ಸಂತೋಷದ ಸುದ್ದಿ ಪಡೆಯುವ ಸಾಧ್ಯತೆಯಿದೆ. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ನಿಮ್ಮ ಜ್ಞಾನದಾಹ ನಿಮಗೆ ಹೊಸ ಸ್ನೇಹಿತರನ್ನು ಪಡೆಯಲು ಸಹಾಯ ಮಾಡುತ್ತದೆ. ಪ್ರೀತಿ ಮಿತಿಯಿಲ್ಲದ್ದಾಗಿದೆ, ಅಪಾರವಾಗಿದೆ; ನೀವು ಈ ಮುಂಚೆ ಈ ವಿಷಯಗಳನ್ನು ಕೇಳಿರಬೇಕು.



**ಕರ್ಕಾಟಕ:** ಹಣದ ಸ್ಥಾನ ಮತ್ತು ಆರ್ಥಿಕ ಸಮಸ್ಯೆಗಳು ಒತ್ತಡದ ಮೂಲವಾಗಿರುತ್ತವೆ. ಪ್ರಮುಖ ಜನರು ವಿಶೇಷ ವರ್ಗ ಹೊಂದಿರುವ ಯಾವುದಕ್ಕಾದರೂ ಹಣಕಾಸು ನೀಡಲು ಸಿದ್ಧವಾಗಿರುತ್ತಾರೆ. ನಿಮ್ಮ ಕುಟುಂಬದ ಬಗ್ಗೆ ನೀವು ಎಷ್ಟು ಕಾಳಜಿ ಹೊಂದಿದ್ದೀರೆಂದು ಅವರಿಗೆ ಅರ್ಥ ಮಾಡಿಸಲು ಮೌಖಿಕ ಮತ್ತು ಅಮೌಖಿಕ ಸಂದೇಶಗಳನ್ನು ನೀಡುತ್ತಿರಿ.



**ಸಿಂಹ:** ಆರೋಗ್ಯ ಚೆನ್ನಾಗಿರುತ್ತದೆ. ಇಂದು ನೀವು ನಿಮ್ಮ ಮನೆಯ ಹಿರಿಯ ಜನರಿಂದ ಹಣವನ್ನು ಉಳಿಸುವ ಬಗ್ಗೆ ಯಾವುದೇ ಸಲಹೆಯನ್ನು ತೆಗೆದುಕೊಳ್ಳಬಹುದು ಮತ್ತು ಆ ಸಲಹೆಗೆ ಜೀವನದಲ್ಲಿ ಸ್ಥಾನವನ್ನು ಸಹ ನೀಡಬಹುದು ಸಂಜೆ ಸ್ನೇಹಿತರೊಡನೆ ಹೋಗಿ ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.



**ಕನ್ಯಾ:** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ದಿನದಲ್ಲಿ ನಂತರ ಹಣಕಾಸು ಪರಿಸ್ಥಿತಿಗಳು ಸುಧಾರಿಸುತ್ತವೆ. ನಿಮ್ಮನ್ನು ನೀವೇ ಮುದ್ದಿಸಿಕೊಳ್ಳಲು ಮತ್ತು ನೀವು ಹೆಚ್ಚು ಆನಂದಿಸುವ ಕೆಲಸಗಳನ್ನು ಮಾಡಲು ಒಳ್ಳೆಯ ದಿನ. ನಿಮ್ಮ ಸಂಗಾತಿಯು ಇಂದು ಇಡೀ ದಿನ ನಿಮ್ಮ ಬಗ್ಗೆ ಚಿಂತಿಸುತ್ತೀರಿ. ಪ್ರಮುಖ ಜನರೊಡನೆ ಮಾತನಾಡುವಾಗ ನಿಮ್ಮ ಕಿವಿ ಮತ್ತು ಕಣ್ಣುಗಳನ್ನು ತೆರೆದಿಡಿ



**ತುಲಾ:** ಬಿಡುವಿರದ ಕಾರ್ಯಕ್ರಮದ ಹೊರತಾಗಿಯೂ ಆರೋಗ್ಯ ಚೆನ್ನಾಗಿರುತ್ತದೆ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ಇತರರಿಗೆ ಪ್ರತಿಫಲಗಳು ತರುವ ನಿಮ್ಮ ಸಾಮರ್ಥ್ಯ ಪ್ರತಿಫಲ ತರುತ್ತದೆ.



**ವೃಶ್ಚಿಕ:** ನೀವು ಯೋಗ ಧ್ಯಾನದೊಂದಿಗೆ ದಿನವನ್ನು ಪ್ರಾರಂಭಿಸಬಹುದು. ಇದನ್ನು ಮಾಡುವುದರಿಂದ ನಿಮಗೆ ಪ್ರಯೋಜನಕಾರಿಯಾಗುತ್ತದೆ ಮತ್ತು ದಿನವಿಡೀ ನಿಮ್ಮಲ್ಲಿ ಶಕ್ತಿ ಉಳಿದಿರುತ್ತದೆ. ಇಂದು ಸುಮ್ಮನೆ ಕುಳಿತುಕೊಳ್ಳುವ ಬದಲು-ಏಕೆ ಏನನ್ನಾದರೂ ಮಾಡ ಬಾರದು ಇದು ನಿಮ್ಮ ಗಳಿಕೆಯ ಶಕ್ತಿಯನ್ನು ಸುಧಾರಿಸುತ್ತದೆ. ಇತರರು ಹೇಳುವುದನ್ನು ಅಥವಾ ಸಲಹೆ ನೀಡುವುದನ್ನು ನಂಬದಿರಲು ಎಚ್ಚರಿಕೆ ವಹಿಸಿ.



**ಧನು:** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಇತರರಿಗೆ ನಿಮ್ಮ ಸಮಯ ನೀಡಲು ಒಳ್ಳೆಯ ದಿನ. ನಿಮ್ಮ ಪ್ರೇಮಿಯ ಮಾತುಗಳಿಗೆ ನೀವು ತುಂಬ ಸಂವೇದನಾಶೀಲರಾಗಿರುತ್ತೀರಿ.



**ಮಕರ:** ತಾತ್ಕಾಲಿಕವಾದ ಉದ್ವೇಗದಲ್ಲಿ ನಿರ್ಧಾರ ಕೈಗೊಳ್ಳಬೇಡಿ ಇದು ನಿಮ್ಮ ಮಕ್ಕಳ ಹಿತಾಸಕ್ತಿಗೆ ಹಾನಿ ಮಾಡಬಹುದು. ತನ್ನ ಹಣವನ್ನು ಹೇಗೆ ಸಂಗ್ರಹಿಸುವುದು ಎಂಬ ಈ ಕೌಶಲ್ಯವನ್ನು ಇಂದು ನೀವು ಕಲಿಯಬಹುದು ಮತ್ತು ಈ ಕೌಶಲ್ಯವನ್ನು ಕಲಿತು ನೀವು ನಿಮ್ಮ ಹಣವನ್ನು ಉಳಿಸಬಹುದು. ಕುಟುಂಬದ ಸದಸ್ಯರೊಂದಿಗೆ ಸಾಮಾಜಿಕ ಕೂಟ ಎಲ್ಲರನ್ನೂ ಒಳ್ಳೆಯ ಚಿತ್ತದಲ್ಲಿಡುತ್ತದೆ.



**ಕುಂಭ:** ಒತ್ತಡವನ್ನು ಉಪೇಕ್ಷಿಸಬಾರದು. ಇದು ವೇಗವಾಗಿ ತಂಬಾಕು ಮತ್ತು ಮದ್ಯದಷ್ಟೇ ಗಂಭೀರವಾದ ಒಂದು ಸಾಂಕ್ರಾಮಿಕ ರೋಗವಾಗುತ್ತಿದೆ ವೆಚ್ಚದ ಏರಿದರೂ ಆದಾಯದಲ್ಲಿನ ಹೆಚ್ಚಳ ನಿಮ್ಮ ಖರ್ಚುಗಳನ್ನು ನೋಡಿಕೊಳ್ಳುತ್ತದೆ. ಮಕ್ಕಳು ನೀವು ಅವರೆಡೆಗೆ ಗಮನ ಹರಿಸಬೇಕೆಂಬ ಬೇಡಿಕೆಯಿಟ್ಟರೂ ಅವರು ನಿಮಗೆ ಸಂತೋಷ ತರುತ್ತಾರೆ.



**ಮೀನ:** ಪ್ರತಿ ವ್ಯಕ್ತಿಯನ್ನೂ ಆಲಿಸಿ ನಿಮ್ಮ ಸಮಸ್ಯೆಗಳಿಗೆ ಪರಿಹಾರ ದೊರಕಬಹುದು. ಇಂದು ಯಾವುದೇ ಸಹಾಯವಿಲ್ಲದೆ, ನೀವು ಹಣವನ್ನು ಗಳಿಸುವಲ್ಲಿ ಸಾಮರ್ಥ್ಯರಾಗಿರುತ್ತೀರಿ. ಸ್ನೇಹಿತರು ಜೊತೆಗಿನ ಚಟುವಟಿಕೆಗಳು ಆಹ್ಲಾದಕರವಾಗಿರುತ್ತವೆ - ಇಲ್ಲದಿದ್ದರೆ ನೀವು ಖಾಲಿ ಕೈಯಲ್ಲಿ ಜೊತೆ ತೆರಳುತ್ತೀರಿ. ನಿಮ್ಮ ಪ್ರೇಮಿಯನ್ನು ಭೇಟಿ ಮಾಡುತ್ತಿದ್ದ ಹಾಗೆ ನಿಮ್ಮ ಮನಸ್ಸನ್ನು ಪ್ರಣಯ ಆವರಿಸಿಕೊಳ್ಳುತ್ತದೆ.

# ವರ್ಷಾಂತ್ಯಕ್ಕೆ ಮೆಗಾ ಕ್ಲ್ಯಾಷ್!

### ಪ್ರಮುಖ ಮುಖ್ಯಾಂಶಗಳು

- ವರ್ಷಾಂತ್ಯದಲ್ಲಿ ಬಾಕ್ಸಾಫೀಸ್‌ನಲ್ಲಿ ಹಗ್ಗಜಗ್ಗಾಟ
- ಕನ್ನಡ ಸಿನಿಮಾಗಳು ಎದುರು ಬರಲಿವೆ ಪರಭಾಷೆ ಸಿನಿಮಾಗಳು
- ಕ್ರಿಸ್ಮಸ್ ರಜೆ ಯಾರಿಗೆ ವರವಾಗಲಿದೆ ಎಂಬುದೇ ಕುತೂಹಲ

## 45, ಮಾರ್ಕ್ ಜತೆ ಡಜನ್‌ಗೂ ಹೆಚ್ಚು ಸಿನಿಮಾಗಳು ರಿಲೀಸ್

ಪ್ರತಿ ಕ್ರಿಸ್ಮಸ್ ಮತ್ತು ಹೊಸ ವರ್ಷಾಚರಣೆಯ ಜತೆಗೆ ಚಿತ್ರರಂಗವೂ ಬಾಕ್ಸಾಫೀಸ್ ಹಬ್ಬ ಆಚರಿಸುವುದು ಸಾಮಾನ್ಯ. ಸಿಗುವ ಸಾಲು ರಜೆಗಳನ್ನು ಸದುಪಯೋಗಪಡಿಸಿಕೊಳ್ಳಲು ಚಿತ್ರತಂಡಗಳು ನಾ ಮುಂದು, ತಾ ಮುಂದು ಅಂತ ಮೊದಲೇ ರಿಲೀಸ್ ದಿನಾಂಕ ಘೋಷಿಸಿಬಿಡುತ್ತವೆ. ಆದರೆ, ಈ ವರ್ಷ ಹಿಂದಿನ ವರ್ಷಗಳಿಗಿಂತ ಚಿತ್ರಗಳ ನಡುವಿನ ಬಾಕ್ಸಾಫೀಸ್ ಹಗ್ಗಜಗ್ಗಾಟ ಕೊಂಚ ಹೆಚ್ಚಿರಲಿದೆ. ಅದಕ್ಕೆ ಕಾರಣ ಕನ್ನಡದಲ್ಲೇ ಬಹುನಿರೀಕ್ಷಿತ 45 ಮತ್ತು ಮಾರ್ಕ್ ಚಿತ್ರಗಳು ತೆರೆಗೆ ಬರಲಿದ್ದು, ಜತೆಗೆ ಹಿಂದಿ, ತೆಲುಗು, ತಮಿಳು ಮತ್ತು ಮಲಯಾಳಂನಲ್ಲೂ ಹಲವು ಸಿನಿಮಾಗಳು ರಿಲೀಸ್ ಆಗಲು ಸಿದ್ಧತೆ ನಡೆಸಿವೆ. ಹಾಗಾದರೆ ಈ ಬಾರಿ ಕ್ರಿಸ್ಮಸ್ ಹಬ್ಬಕ್ಕೆ ಸಂತಾ ಕ್ಲಾಸ್ ಯಾವ ಚಿತ್ರಕ್ಕೆ ಸರ್‌ಪ್ರೈಸ್ ನೀಡಲಿದ್ದಾನೆ ಎಂಬುದು ಕುತೂಹಲ ಮೂಡಿಸಿದೆ.

**45 ಹೊಸ ಅಲೆ:** ಸಂಗೀತ ನಿರ್ದೇಶಕ ಅರ್ಜುನ್ ಜನ್ಯ ಚೊಚ್ಚಲ ನಿರ್ದೇಶನದ 45 ಇದೇ 25ರಂದು ರಿಲೀಸ್ ಆಗಿದೆ. ಶಿವರಾಜಕುಮಾರ್, ಉಪೇಂದ್ರ ಮತ್ತು ರಾಜ್ ಬಿ. ಶೆಟ್ಟಿ ಮುಖ್ಯಭೂಮಿಕೆಯಲ್ಲಿರುವ ಕಾರಣ ಈ ಚಿತ್ರದ ಬಗ್ಗೆ ನಿರೀಕ್ಷೆ ಹೆಚ್ಚಿದೆ. ಈಗಾಗಲೇ ಟ್ರೇಲರ್, ಟೀಸರ್ ಮೂಲಕ ಸದ್ದು ಮಾಡಿರುವ ಈ ಸಿನಿಮಾ ಕರ್ನಾಟಕ ಮಾತ್ರವಲ್ಲ ದೇಶ, ವಿದೇಶಗಳಲ್ಲೂ ಕ್ರೇಜ್ ಹೆಚ್ಚಿಸಿದೆ. ಕೆನಡಾದಲ್ಲಿ ಈಗಾಗಲೇ ಮುಂಗಡ ಬುಕಿಂಗ್ ಆರಂಭವಾಗಿದ್ದು, ಹೌಸ್ ಫುಲ್ ಆಗಿದೆ. ಪ್ಯಾನ್ ಇಂಡಿಯಾ ರೂಪದಲ್ಲಿ ರಿಲೀಸ್ ಆಗುತ್ತಿರುವ ಈ ಚಿತ್ರಕ್ಕೆ ರಾಜ್ಯವಷ್ಟೇ ಅಲ್ಲದೇ ನೆರೆ ರಾಜ್ಯದಲ್ಲೂ ಹವಾ ಎಬ್ಬಿಸಿದೆ.

**ಸುದೀಪ್‌ಗೆ ವಿಜಯದ ಮಾರ್ಕ್:** 45 ರಿಲೀಸ್ ಆದ ದಿನವೇ ಕಿಚ್ಚ ಸುದೀಪ್ ಅಭಿನಯದ ಮಾರ್ಕ್ ತೆರೆಗೆ ಬರಲಿದೆ. ಮ್ಯಾಕ್ಸ್ ವಿಜಯದ ಬಳಿಕ ನಿರ್ದೇಶಕ ವಿಜಯ್ ಕಾರ್ತಿಕೇಯನ್ ಮತ್ತು ಸುದೀಪ್ ಮಾರ್ಕ್ ಮೂಲಕ ಮತ್ತೆ ಒಂದಾಗಿರುವ ಕಾರಣ ನಿರೀಕ್ಷೆ ಹೆಚ್ಚಿಸಿದೆ. ತಮಿಳಿನ ಯೋಗಿಬಾಬು, ನವೀನ್ ಚಂದ್ರ, ವಿಕ್ರಾಂತ್, ಮಲಯಾಳಂನ ಗುರು ಸೋಮಸುಂದರಂ, ಶೈನ್ ಟಾಮ್ ಚಾಕೋ ಕಲಾಬಳಗದಲ್ಲಿದ್ದಾರೆ. ಈ ಕಾರಣಕ್ಕಾಗಿ ರಾಜ್ಯವಷ್ಟೇ ಅಲ್ಲದೇ ನೆರೆ ರಾಜ್ಯದಲ್ಲೂ ಮಾರ್ಕ್ ಸದ್ದು ಮಾಡಲಿದೆ.

**ಮೋಹನ್ ಲಾಲ್ ವೃಷಭ:** ಕನ್ನಡದ ಎರಡು ಬಹುನಿರೀಕ್ಷಿತ ಚಿತ್ರಗಳ ಜತೆ ಮಲಯಾಳಂ ನಟ ಮೋಹನ್ ಲಾಲ್ ಹಾಗೂ ಕನ್ನಡದ ರನ್ನ, ಮುಕುಂದ ಮುರಾರಿ ನಿರ್ದೇಶಕ ನಂದ ಕಿಶೋರ್ ಕಾಂಬಿನೇಷನ್‌ನ ವೃಷಭ ಕೂಡ 25ರಂದು ರಿಲೀಸ್ ಆಗುತ್ತಿದೆ. ಕನ್ನಡಿಗರಾದ ಸಮರ್ಜಿತ್ ಲಂಕೇಶ್, ರಾಗಿಣಿ ದ್ವಿವೇದಿ, ಗರುಡ ರಾಮ್, ಕಿಶೋರ್ ಕುಮಾರ್, ಬಿಗ್‌ಬಾಸ್ ಕನ್ನಡ 12 ರ ಸ್ಪರ್ಧಿ ಮ್ಯೂಟೆಂಟ್ ರಘು ಅಭಿನಯಿಸಿದ್ದಾರೆ. ಆ್ಯಕ್ಷನ್, ಫ್ಯಾಂಟಸಿ, ಪೀರಿಯಾಡಿಕ್ ಜಾನರ್‌ನ ವೃಷಭ ಈಗಾಗಲೇ ಟ್ರೇಲರ್ ಮೂಲಕ ಗಮನ ಸೆಳೆದಿದ್ದು, 45 ಹಾಗೂ ಮಾರ್ಕ್‌ಗೆ ಸ್ಪರ್ಧೆಯೊಡ್ಡುವ ಲಕ್ಷಣಗಳು ಗೋಚರವಾಗುತ್ತಿವೆ.





**ಅನಕೊಂಡ ಬಂತು:** ಈ ವರ್ಷಾಂತ್ಯಕ್ಕೆ ಹಾಲಿವುಡ್‌ನ ಅನಕೊಂಡ ಕೂಡ ತೆರೆಗೆ ಬರಲಿದೆ. ಟಾಮ್ ಗೊರ್ಮಿಕನ್ ನಿರ್ದೇಶನದ ಈ ಹಾಲಿವುಡ್ ಚಿತ್ರವನ್ನು ರಾಜ್ಯದಲ್ಲಿ ಹೊಂಬಾಳೆ ಫಿಲಂಸ್ ವಿತರಣೆ ಮಾಡುತ್ತಿದೆ. ಮಲ್ಟಿಪ್ಲೆಕ್ಸ್‌ಗಳಲ್ಲಿ ಸಾಮಾನ್ಯವಾಗಿ ಹಾಲಿವುಡ್ ಚಿತ್ರಗಳಿಗೆ ಹೆಚ್ಚು ಪ್ರಾಧಾನ್ಯತೆ ಸಿಗುವುದರಿಂದ ಕನ್ನಡ ಸಿನಿಮಾಗಳಿಗೆ ಇದು ಸ್ಪರ್ಧೆಯೊಡ್ಡಲಿದೆ. ಉಳಿದಂತೆ ಇದೇ ತಿಂಗಳು ರಿಲೀಸ್ ಆಗಿರುವ ದರ್ಶನ್ ನಟನೆಯ ದ ಡೆವಿಲ್, ಹಿಂದಿಯ ಧುರಂಧರ್ ಮತ್ತು ಹಾಲಿವುಡ್ ಅವತಾರ್ 3: ಫೈರ್ ಆ್ಯಂಡ್ ಆ್ಯಶ್ ಚಿತ್ರಗಳಿಗೆ ಉತ್ತಮ ರೆಸ್ಪಾನ್ಸ್ ವ್ಯಕ್ತವಾಗುತ್ತಿದ್ದು, ಥಿಯೇಟರ್ ಮತ್ತು ಮಲ್ಟಿಪ್ಲೆಕ್ಸ್ ಸಮಸ್ಯೆ ಎದುರಾಗುವ ಸಾಧ್ಯತೆ ಇದೆ.

**ಪರಭಾಷೆಯ ಸಿನಿಮಾಗಳಿವೆ:** ವರ್ಷಾಂತ್ಯದ ಕ್ರಿಸ್‌ಮಸ್ ರಜೆ ಹಾಗೂ ಹೊಸ ವರ್ಷದ ರಜೆಗಳನ್ನು ಸದುಪಯೋಗಪಡಿಸಿಕೊಳ್ಳಲು ತೆಲುಗು, ಹಿಂದಿ, ತಮಿಳಿನಲ್ಲೂ ಹಲವು ಚಿತ್ರಗಳು ರಿಲೀಸ್ ಆಗುತ್ತಿವೆ. ಕಾರ್ತಿಕ್ ಆರ್ಯನ್, ಅನನ್ಯಾ ಪಾಂಡೆ ನಟಿಸಿರುವ ಹಿಂದಿಯ ತು ಮೇರಿ ಮೇ ತೇರಾ ಮೇ ತೇರಾ ತು ಮೇರಿ, ತೆಲುಗಿನಲ್ಲಿ ಸಾಯಿ ಕುಮಾರ್ ಪುತ್ರ ಆದಿ ನಟನೆಯ ಶಂಬಾಲಾ, ಸುಧಿ ಸುಡಿಗಾಳಿಯ ಗೋಟ್, ರೋಷನ್ ಮೇಕಾ ನಟಿಸಿರುವ ಚಾಂಪಿಯನ್ ಮತ್ತು ತಮಿಳಿನಲ್ಲಿ ಅರುಣ್ ವಿಜಯ್ ಅಭಿನಯದ ಆ್ಯಕ್ಷನ್-ಥ್ರಿಲ್ಲರ್ ರೆಟ್ಟಾ ತಲಾ, ಮಲಯಾಳಂನ ಕಾಮಿಡಿ, ಫ್ಯಾಂಟಸಿ ಚಿತ್ರ ಸರ್ವಂಮಯ ಕೂಡ ರಿಲೀಸ್ ಆಗುತ್ತಿವೆ.

## ತೆರೆಗೆ ಬರಲು ಸಿದ್ಧವಾದ ಸೈಕಾಲಜಿಕಲ್ ಥ್ರಿಲ್ಲರ್ ವಿಕಲ್ಪ!

ಕನ್ನಡ ಚಿತ್ರರಂಗದಲ್ಲಿ ಕೆಲವು ಸಿನಿಮಾಗಳು ತಮ್ಮ ಸ್ಟಾರ್ ಕಾಸ್ಟಿಂಗ್, ಬಿಗ್ ಬಜೆಟ್ ಮೂಲಕ ಸದ್ದು ಮಾಡಿದರೆ, ಇನ್ನು ಕೆಲವು ಸಿನಿಮಾಗಳು ತಮ್ಮ ಕಂಟೆಂಟ್, ಟೈಟಲ್ ಮೂಲಕವೇ ಸಿನಿಪ್ರಿಯರನ್ನು ಸದ್ದಿಲ್ಲದೆ ಸೆಳೆಯಲು ಯಶಸ್ವಿಯಾಗಿಬಿಡುತ್ತವೆ. ಇತ್ತೀಚೆಗೆ ಹೀಗೆ ಅಂಥದ್ದೇ ಕಂಟೆಂಟ್ ಮತ್ತು ಟೈಟಲ್ ಮೂಲಕವೇ ಸ್ಯಾಂಡಲ್‌ವುಡ್ ಸಿನಿಪ್ರಿಯರನ್ನು ಸೆಳೆಯುತ್ತಿರುವ ಚಿತ್ರ ವಿಕಲ್ಪ ಬಹುತೇಕ ಹೊಸ ಪ್ರತಿಭೆಗಳೇ ಸೇರಿ ನಿರ್ಮಿಸುತ್ತಿರುವ ವಿಕಲ್ಪ ಒಂದು ಸೈಕಾಲಜಿಕಲ್ -ಥ್ರಿಲ್ಲರ್ ಕಥಾಹಂದರದ ಚಿತ್ರ. ಮನುಷ್ಯನ ಮನಸ್ಸಿನ ಸುಪ್ತ ಭಾವನೆಗಳು, ತುಮುಲ-ತಲ್ಲಣಗಳನ್ನು ಈ ಚಿತ್ರದ ಮೂಲಕ ತೆರೆಮೇಲೆ ತರುತ್ತಿದ್ದಾರೆ ಯುವ ನಟ ಕಂ ನಿರ್ದೇಶಕ ಪೃಥ್ವಿರಾಜ್ ಪಾಟೀಲ್.

ಕನ್ನಡ ಚಿತ್ರರಂಗದಲ್ಲಿ ಪ್ರತಿವರ್ಷ ನೂರಾರು ಸಿನಿಮಾಗಳು ಬಿಡುಗಡೆಯಾಗಿ ತೆರೆಗೆ ಬರುತ್ತಿವೆ. ಆದರೆ ಇಷ್ಟೊಂದು ಸಿನಿಮಾಗಳ ಪೈಕಿ ಸೈಕಾಲಜಿಕಲ್ ಥ್ರಿಲ್ಲರ್ ಸಿನಿಮಾಗಳ ಸಂಖ್ಯೆ ಮಾತ್ರ ಕೇವಲ ಬೆರಳೆಣಿಕೆಯಷ್ಟು ಮಾತ್ರ, ಎಂದೇ ಹೇಳಬಹುದು. ಅಂಥ ಬೆರಳೆಣಿಕೆಯ ವಿರಳ ಸಿನಿಮಾಗಳ ಸಾಲಿಗೆ ಸೇರುವ ಚಿತ್ರವೇ ವಿಕಲ್ಪ. ಬಹುತೇಕ ಯುವ ಮನಸ್ಸುಗಳೇ ಸೇರಿ ಮಾಡಲು ಹೊರಟಿರುವ ವಿಕಲ್ಪ ಕನ್ನಡ ಚಿತ್ರರಂಗದ ಮಟ್ಟಿಗೆ ಒಂದು ಅಪರೂಪದ ಚಿತ್ರವಾಗಿ ನಿಲ್ಲದೆ ಎಂಬುದು ಚಿತ್ರತಂಡದ ನಿರೀಕ್ಷೆ.

ವಿಕಲ್ಪ ಎಂದರೆ ವಾಸ್ತವ ಮತ್ತು ಕಲ್ಪನೆಗಳ ನಡುವಿನ ಒಂದು ಸ್ಥಿತಿ ಎಂದರ್ಥ. ನಮ್ಮ ಚಿತ್ರದ ಶೀರ್ಷಿಕೆಯ ಪ್ರಕಾರ, ಇದೊಂದು ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಕಥೆ ಎಂದೆನಿಸಿದರೂ, ಇದು ಒಂದು ಸಂಪೂರ್ಣ ಥ್ರಿಲ್ಲರ್ ಚಿತ್ರ ಎನ್ನುವುದು ವಿಶೇಷ'. ಸೈಕಾಲಜಿಕಲ್-ಥ್ರಿಲ್ಲರ್ ಅಂಶಗಳ ಜೊತೆಗೆ ನವಿರಾದ ಹಾಸ್ಯ ಮತ್ತು ಮನೋರಂಜನೆಗೆ ಹೆಚ್ಚಿನ ಒತ್ತನ್ನು ಕೊಟ್ಟು ಇಡೀ ಚಿತ್ರದ ಕಥೆಯನ್ನು ಹೆಣೆಯಲಾಗಿದೆ. ಈ ಚಿತ್ರಕ್ಕೆ ಚಿತ್ರದ ಕಥೆಯೆ ಹೀರೋ. ಇಲ್ಲಿ ಪ್ರತಿ ಪಾತ್ರಗಳೂ ಮಾತನಾಡುತ್ತವೆ. ಪ್ರತಿ ಪಾತ್ರಗಳೂ ನೋಡುಗರ ಮನಮುಟ್ಟುತ್ತವೆ ಎಂದು ಹೇಳುತ್ತಾರೆ ವಿಕಲ್ಪದ ನಿರ್ದೇಶಕ ಪೃಥ್ವಿರಾಜ್ ಪಾಟೀಲ್.

ಸುಮಾರು ಎರಡು ದಶಕಗಳಿಗೂ ಹೆಚ್ಚಿನ ಕಾಲ ಹವ್ಯಾಸಿ ರಂಗಭೂಮಿಯಲ್ಲಿ ಅನುಭವಪಡೆದಿರುವ, ಪ್ರತಿಷ್ಠಿತ ಬಹುರಾಷ್ಟ್ರೀಯ ಐಟಿ ಕಂಪನಿಯ ವ್ಯವಸ್ಥಾಪಕ ನಿರ್ದೇಶಕರಾಗಿರುವ ಪೃಥ್ವಿರಾಜ್ ಪಾಟೀಲ್, ತಮ್ಮ ಪರಿಕಲ್ಪನೆಯನ್ನು ವಿಕಲ್ಪ ಚಿತ್ರದ ಮೂಲಕ ತೆರೆಮೇಲೆ ತರುತ್ತಿದ್ದಾರೆ. ಸುರೂಸ್ ಟಾಕೀಸ್ ಸಂಸ್ಥೆಯ ಅಡಿಯಲ್ಲಿ ಶ್ರೀಮತಿ ಇಂದಿರಾ ಶಿವಸ್ವಾಮಿ ನಿರ್ಮಾಣದಲ್ಲಿ ಮೂಡಿಬರುತ್ತಿರುವ ಚೊಚ್ಚಲ ಚಿತ್ರ ಇದಾಗಿದ್ದು, ಈ ಚಿತ್ರದಲ್ಲಿ ನಿರ್ದೇಶಕ ಪೃಥ್ವಿರಾಜ್ ಪಾಟೀಲ್ ಅವರೇ ತೆರೆಮೇಲೂ ಮುಖ್ಯಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಒಂದು ಚಿತ್ರಕ್ಕೆ ಕಥೆ ಮತ್ತು ಬರವಣಿಗೆಯೇ ಮುಖ್ಯ ಎಂದು ಅಪೇಕ್ಷಿಸುವ ಕನ್ನಡದ ಎಲ್ಲಾ ಪ್ರಬುದ್ಧ ಚಿತ್ರ ಪ್ರೇಕ್ಷಕರ ಪಾಲಿಗೆ ಈ ಚಿತ್ರ ಒಂದು ಉಡುಗೊರೆಯಾಗಿ ತೆರೆಮೇಲೆ ಮೂಡಿಬರುತ್ತಿದೆ ಎಂಬುದು ನಿರ್ದೇಶಕರ ಮಾತು.

ವಿಕಲ್ಪ ಚಿತ್ರದ ಮತ್ತೊಂದು ವಿಶೇಷತೆಯೆಂದರೆ, ಅನೇಕ ನುರಿತ ಮಾನಸಿಕ ವೈದ್ಯರ ಸಲಹೆಯ ಮೇರೆಗೆ ಈ ಚಿತ್ರದ ಹಲವು ಸನ್ನಿವೇಶಗಳನ್ನು ಚಿತ್ರಿಸಲಾಗಿರುವುದು. ಚಿತ್ರದ ದೃಶ್ಯಗಳು ಸಹಜತೆಗೆ ಅತ್ಯಂತ ಹತ್ತಿರವಾಗಿರಬೇಕು ಎಂಬ ಆಶಯದಿಂದ ಚಿತ್ರತಂಡ ಇಂಥದ್ದೊಂದು ಕೆಲಸ ಮಾಡಿದೆ. ಬೆಂಗಳೂರು, ತೀರ್ಥಹಳ್ಳಿ, ಸಾಗರ, ಶಿರಸಿ, ಕುಂದಾಪುರ, ಯಲ್ಲಾಪುರ ಸುತ್ತಮುತ್ತ ವಿಕಲ್ಪ ಚಿತ್ರದ ಬಹುತೇಕ ಚಿತ್ರೀಕರಣ ನಡಸಲಾಗಿದ್ದು, ಸಿಂಗಪುರ, ನೆದರ್‌ಲ್ಯಾಂಡ್ ಸೇರಿದಂತೆ ವಿದೇಶಗಳಲ್ಲೂ ವಿಕಲ್ಪದ ಚಿತ್ರೀಕರಣ ಮಾಡಲಾಗಿದೆ.




ವಿಕಲ್ಪ ಚಿತ್ರದಲ್ಲಿ ಪೃಥ್ವಿರಾಜ್ ಪಾಟೀಲ್, ನಾಗಶ್ರೀ ಹೆಬ್ಬಾರ್, ಸಂಧ್ಯಾ ವಿನಾಯಕ್, ಗಣಪತಿ ವಡ್ಡಿನಗದ್ದೆ, ಸ್ವರೂಪ್ ಬಚ್ಚ್, ಪೂಜಾ ಬಚ್ಚ್, ಜಯಂತ್ ಡೇವಿಡ್, ಡಾ. ಪ್ರಕೃತಿ, ಮಾಸ್ಟರ್ ಆಯುಷ್ ಸಂತೋಷ್ ಮುಂತಾದವರು ಪ್ರಮುಖ ಪಾತ್ರಗಳಲ್ಲಿ ಕಾಣಿಸಿಕೊಂಡಿದ್ದಾರೆ. ಕನ್ನಡ ಚಿತ್ರರಂಗದ ಪ್ರಸಿದ್ಧ ನಟಿಯರಲ್ಲೊಬ್ಬರಾದ ಹರಿಣಿ ಶ್ರೀಕಾಂತ್ ಈ ಚಿತ್ರದ ವಿಭಿನ್ನ ಮತ್ತು ವಿಶೇಷವಾದ ಪಾತ್ರವೊಂದಕ್ಕೆ ಬಣ್ಣ ಹಚ್ಚಿದ್ದಾರೆ. ಜೊತೆಗೆ ಮಲೆನಾಡಿನ ಪ್ರಸಿದ್ಧ ರಂಗಭೂಮಿ ಕಲಾವಿದ ಗಣಪತಿ ಹಿತ್ತಲಕೈ, ಪ್ರಜ್ಞಾ ಗಣಪತಿ, ಮಾಧವ ಶರ್ಮಾ, ಗಿರೀಶ್ ಹೆಗಡೆ, ಗಣಪತಿ ಎ. ಆರ್, ರಾಜ್ಯ ಪ್ರಶಸ್ತಿ ವಿಜೇತ ಯಕ್ಷಗಾನ ಕಲಾವಿದ ಗೋಡೆ ನಾರಾಯಣ ಹೆಗಡೆ ಮುಂತಾದ ದೊಡ್ಡ ಕಲಾವಿದರ ತಾರಾಗಣವೇ ವಿಕಲ್ಪದಲ್ಲಿರುವುದು ಮತ್ತೊಂದು ವಿಶೇಷ.

ಇನ್ನು ವಿಕಲ್ಪ ಚಿತ್ರಕ್ಕೆ ಮಿಥುನ್ ತೀರ್ಥಹಳ್ಳಿ ಸಹ ನಿರ್ದೇಶನ ಮಾಡಿದ್ದಾರೆ. ವಿಕಲ್ಪ ಸುಂದರ ದೃಶ್ಯಗಳನ್ನು ಅಭಿರಾಮ್ ಗೌಡ ತಮ್ಮ ಕ್ಯಾಮೆರಾದಲ್ಲಿ ಸೆರೆಹಿಡಿದಿದ್ದರೆ, ದಕ್ಷಿಣ ಭಾರತದ ಖ್ಯಾತ ಸಂಕಲನಕಾರ ಸುರೇಶ್ ಆರುಮುಗಮ್ ಚಿತ್ರಕ್ಕೆ ಸಂಕಲನ ಕಾರ್ಯ ನಿರ್ವಹಿಸಿದ್ದಾರೆ. ವಿಕಲ್ಪದ ವಿಭಿನ್ನ ಹಾಡುಗಳಿಗೆ ಸಂವತ್ಸರ ಸಂಗೀತ ಸಂಯೋಜಿಸಿದ್ದು, ಪೃಥ್ವಿರಾಜ್ ಪಾಟಿಲ್ ಮತ್ತು ಕೌಂಡಿನ್ಯ ಕುಡ್ಲುತೋಟ ಹಾಡುಗಳಿಗೆ ಸಾಹಿತ್ಯ ರಚಿಸಿದ್ದಾರೆ. ಸಿದ್ದಾರ್ಥ್ ಬೆಳ್ಮಣ್ಣು, ಸಂವತ್ಸರ, ಶ್ರೀರಂಜಿನಿ, ಇಂಚರ ಮೊದಲಾದ ಗಾಯಕರ ಧ್ವನಿಯಲ್ಲಿ ವಿಕಲ್ಪದ ಹಾಡುಗಳು ಮೂಡಿಬಂದಿವೆ. ಸದ್ಯ ವಿಕಲ್ಪದ ಚಿತ್ರೀಕರಣ ಮುಕ್ತಾಯಗೊಂಡು, ಚಿತ್ರದ ಅಂತಿಮ ಹಂತದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳು ಭರದಿಂದ ನಡೆಯುತ್ತಿದೆ.

ವಿಕಲ್ಪ ಚಿತ್ರದ ನಿರೂಪಣೆ, ಅತ್ಯುತ್ತಮ ಬರವಣಿಗೆ, ಸೀಟ್ ಎಡ್ಜಿಗೆ ಕೂರಿಸುವಂತಹ ಥ್ರಿಲ್ಲಿಂಗ್ ಚಿತ್ರಕಥೆ, ತೀರಾ ಆತ್ಮೀಯರು ಎನಿಸುವಂತಹ ನೈಜ ಪಾತ್ರಗಳು, ಕಚಗುಳಿ ಇಡುವ ನೈಜ ಹಾಸ್ಯ, ಕಲ್ಟ್ ಹಾಡುಗಳು, ಹೀಗೆ ಒಂದಷ್ಟು ಹೊಸ ವಿಚಾರಗಳನ್ನು ನಿಜವಾಗಿಯೂ ಹೊಸತನ ಬಯಸುವ ಪ್ರೇಕ್ಷಕರಿಗೆ ಇಷ್ಟವಾಗುತ್ತದೆ. ವಿಕಲ್ಪ ಚಿತ್ರತಂಡವು ತೀರಾ ವಿನಯ ಮತ್ತು ಜವಾಬ್ದಾರಿಯಿಂದ ಪ್ರೇಕ್ಷಕರನ್ನು ರಂಜಿಸುವ ಆತ್ಮವಿಶ್ವಾಸವನ್ನು ಹೊಂದಿದೆ. ಆದಷ್ಟು ಬೇಗ ವಿಕಲ್ಪವನ್ನು ಪ್ರೇಕ್ಷಕರ ಮುಂದೆ ತರಲು ಕಾತುರರಾಗಿದ್ದೇವೆ ಎಂಬುದು ಚಿತ್ರದ ನಿರ್ದೇಶಕ ಕಂ ನಟ ಪೃಥ್ವಿರಾಜ್ ಪಾಟೀಲ್ ಮತ್ತು ಚಿತ್ರತಂಡದ ಒಕ್ಕೊರಲ ಮಾತು.

## ಮೂರು ವರ್ಷ, ಐದು ದೊಡ್ಡ ಸಿನಿಮಾ; ಅಲ್ಲು ಅರ್ಜುನ್ ಅಭಿಮಾನಿಗಳಿಗೆ ಹಬ್ಬ


ಪುಷ್ಪ ಚಿತ್ರದ ಯಶಸ್ಸಿನ ನಂತರ ಜಾಗತಿಕ ಮನ್ನಣೆ ಗಳಿಸಿದ ಅಲ್ಲು ಅರ್ಜುನ್, ತಮ್ಮ ಮುಂದಿನ ಮೂರು ವರ್ಷಗಳ ಐದು ದೊಡ್ಡ ಯೋಜನೆಗಳನ್ನು ಎಚ್ಚರಿಕೆಯಿಂದ ಯೋಜಿಸುತ್ತಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸದ್ದು ಮಾಡುತ್ತಿರುವ ಈ ಚಿತ್ರಗಳು ಪ್ಯಾನ್-ವರ್ಲ್ಡ್ ಮಟ್ಟದಲ್ಲಿ ದಕ್ಷಿಣ ಚಿತ್ರರಂಗದ ಶಕ್ತಿಯನ್ನು ತೋರಿಸಲಿವೆ. ಅಟ್ಲೀ, ಸಂದೀಪ್ ರೆಡ್ಡಿ ವಂಗಾ, ಪ್ರಶಾಂತ್ ನೀಲ್ ನಿರ್ದೇಶನದ ಚಿತ್ರಗಳು ಮತ್ತು ಬಹುನಿರೀಕ್ಷಿತ ಪುಷ್ಪ 3 ಈ ಸಾಲಿನಲ್ಲಿ ಸೇರಿವೆ, ಬನ್ನಿ ಅಭಿಮಾನಿಗಳಿಗೆ ಭಾರಿ ಮನರಂಜನೆ ನೀಡಲಿವೆ.

ಪುಷ್ಪ ಚಿತ್ರದ ಮೂಲಕ ಜಾಗತಿಕ ಮನ್ನಣೆ ಗಳಿಸಿದ ಅಲ್ಲು ಅರ್ಜುನ್ ಈಗ ತಮ್ಮ ಮುಂದಿನ ಯೋಜನೆಗಳನ್ನು ಬಹಳ ಎಚ್ಚರಿಕೆಯಿಂದ ಯೋಜಿಸುತ್ತಿದ್ದಾರೆ. ಮುಂದಿನ ಮೂರು ವರ್ಷಗಳಲ್ಲಿ ಬರಲಿರುವ ಅವರ ಐದು ದೊಡ್ಡ ಚಿತ್ರಗಳ ವಿವರಗಳು ಈಗ ಸಾಮಾಜಿಕ ಮಾಧ್ಯಮದಲ್ಲಿ ಸಂಚಲನ ಸೃಷ್ಟಿಸುತ್ತಿವೆ. ಬನ್ನಿ ತೆಲುಗಿನಲ್ಲಿ ಮಾತ್ರವಲ್ಲದೆ ಪ್ಯಾನ್-ವರ್ಲ್ಡ್ ಮಟ್ಟದಲ್ಲಿಯೂ ತಮ್ಮ ಶಕ್ತಿಯನ್ನು ತೋರಿಸಲು ಸಿದ್ಧರಾಗಿದ್ದಾರೆ. ಆ ಕ್ರೇಜಿ ಸಿನಿಮಾಗಳು ಯಾವುವು ಎಂದು ನೋಡೋಣ.

**ಅಟ್ಲೀ ನಿರ್ದೇಶನದ ಸಿನಿಮಾ (22) :** ಅಲ್ಲು ಅರ್ಜುನ್ ಪ್ರಸ್ತುತ ಕಾಲಿವುಡ್ ಸ್ಟಾರ್ ನಿರ್ದೇಶಕ ಅಟ್ಲೀ ನಿರ್ದೇಶನದಲ್ಲಿ ಬೃಹತ್ ಪ್ಯಾನ್-ವರ್ಲ್ಡ್ ಚಿತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ. ಈ ಚಿತ್ರವನ್ನು ಸನ್ ಪಿಕ್ಚರ್ಸ್ ಸುಮಾರು 800 ಕೋಟಿ ರೂ. ಬಜೆಟ್‌ನಲ್ಲಿ ನಿರ್ಮಿಸುತ್ತಿದೆ. ಈ ಚಿತ್ರದಲ್ಲಿ ಬನ್ನಿ ಹಿಂದೆಂದೂ ಕಾಣದ ರೀತಿಯಲ್ಲಿ ಲುಕ್‌ಗಳಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಹಾಲಿವುಡ್ ತಂತ್ರಜ್ಞರ ಮಾರ್ಗದರ್ಶನದಲ್ಲಿ ಚಿತ್ರೀಕರಣಗೊಳ್ಳುತ್ತಿರುವ ಅಂಡರ್‌ವಾಟರ್ ದೃಶ್ಯ ಕೂಡ ಇರಲಿದೆ. ಈ ಚಿತ್ರ 2027 ರ ಬೇಸಿಗೆಯಲ್ಲಿ ಬಿಡುಗಡೆಯಾಗುವ ಸಾಧ್ಯತೆಯಿದೆ.

**ಸಂದೀಪ್ ರೆಡ್ಡಿ ವಂಗಾ ಜೊತೆ ವೈಲ್ಡ್ ಆಕ್ಷನ್:** ಅನಿಮಲ್ ಚಿತ್ರದ ಮೂಲಕ ಭಾರತೀಯ ಬಾಕ್ಸ್ ಆಫೀಸ್‌ನಲ್ಲಿ ಸಂಚಲನ ಮೂಡಿಸಿದ ಸಂದೀಪ್ ರೆಡ್ಡಿ ವಂಗಾ ಅವರೊಂದಿಗೆ ಅಲ್ಲು ಅರ್ಜುನ್ ಒಂದು ಚಿತ್ರಕ್ಕೆ ಕಮಿಟ್ ಆಗಿದ್ದಾರೆ. ಅವರಿಬ್ಬರ ಸಂಯೋಜನೆಯ ಘೋಷಣೆಯಾದಾಗಿನಿಂದ, ಅಭಿಮಾನಿಗಳಲ್ಲಿ ಭಾರಿ ನಿರೀಕ್ಷೆಗಳಿವೆ. ಪ್ರಸ್ತುತ, ಸಂದೀಪ್ ಪ್ರಭಾಸ್ ಜೊತೆ ಸ್ಪಿರಿಟ್ ಚಿತ್ರದ ಕೆಲಸದಲ್ಲಿ ನಿರತರಾಗಿದ್ದಾರೆ. ಅದು ಪೂರ್ಣಗೊಂಡ ತಕ್ಷಣ, 2027 ರ ಕೊನೆಯಲ್ಲಿ ಅಥವಾ 2028 ರಲ್ಲಿ ಬನ್ನಿ ಜೊತೆ ಒಂದು ಚಿತ್ರ ಬರುವ ಸಾಧ್ಯತೆಯಿದೆ.

**ಪ್ರಶಾಂತ್ ನೀಲ್, ಬೋಯಪತಿ ಶ್ರೀನು:** ಕೆಜಿಎಫ್ ನಿರ್ದೇಶಕ ಪ್ರಶಾಂತ್ ನೀಲ್ ಕೂಡ ಅಲ್ಲು ಅರ್ಜುನ್ ಗಾಗಿ ಒಂದು ಪವರ್‌ಫುಲ್ ಸ್ಕ್ರಿಪ್ಟ್ ಸಿದ್ಧಪಡಿಸಿದ್ದಾರೆ ಎಂಬ ವರದಿಗಳಿವೆ. ಇವರಿಬ್ಬರ ಕಾಂಬೊದಲ್ಲಿನ ಚಿತ್ರವು ಹೈ ವೋಲ್ಟೇಜ್ ಆಕ್ಷನ್ ಡ್ರಾಮಾ ಆಗಲಿದೆ. ಅಲ್ಲದೆ, ಸರೈನೋಡು ನಂತಹ ಬ್ಲಾಕ್‌ಬಸ್ಟರ್ ನಂತರ, ಬನ್ನಿ ಬೋಯಪತಿ ಶ್ರೀನು ಅವರೊಂದಿಗೆ ಮತ್ತೊಂದು ಮಾಸ್ ಎಂಟರ್‌ಟೈನರ್ ಮಾಡಲು ಸಿದ್ಧರಿದ್ದಾರೆ. ಈ ಚಿತ್ರ ಗೀತಾ ಆರ್ಟ್ಸ್ ಬ್ಯಾನರ್ ಅಡಿಯಲ್ಲಿ ಬರುವ ಸಾಧ್ಯತೆಯಿದೆ.



**ಪುಷ್ಪ 3 ದಿ ರಾಂಪೇಜ್..:** ಎಲ್ಲಕ್ಕಿಂತ ಹೆಚ್ಚಾಗಿ, ಅಭಿಮಾನಿಗಳು ಪುಷ್ಪ 3 ಗಾಗಿ ಕಾತರದಿಂದ ಕಾಯುತ್ತಿದ್ದಾರೆ. ಪುಷ್ಪ 2 ರ ನಂತರ ಈ ಸರಣಿ ಕೊನೆಗೊಳ್ಳುವುದಿಲ್ಲ ಮತ್ತು ಭಾಗ 3 ಕೂಡ ಇರುತ್ತದೆ ಎಂದು ತಂಡದವರು ಈಗಾಗಲೇ ಸುಳಿವು ನೀಡಿದ್ದಾರೆ. ಈ ಚಿತ್ರವನ್ನು 2028ರ ವೇಳೆಗೆ ಬಿಡುಗಡೆ ಮಾಡಲು ಯೋಜಿಸಲಾಗಿದೆ. ಸುಕುಮಾರ್ ಅವರ ದೂರದೃಷ್ಟಿಯ ಪ್ರಕಾರ, ಅಂತರರಾಷ್ಟ್ರೀಯ ಕಳ್ಳಸಾಗಣೆ ಸಂದರ್ಭದಲ್ಲಿ ಈ ಮೂರನೇ ಭಾಗವು ಇನ್ನೂ ದೊಡ್ಡದಾಗಲಿದೆ.



## ದರ್ಶನ್‌ಗೆ ಯಾವಾಗ್ಲೂ ಒಳ್ಳೆಯದಾಗಲಿ ಎಂದು ಬಯಸುತ್ತೇನೆ: ಸುದೀಪ್

ಸುದೀಪ್ ಹಾಗೂ ದರ್ಶನ್ ಸ್ಟಾರ್ ವಾರ್ ನಡುವೆ ಸುದೀಪ್ ಮಾತೊಂದು ಭಾರಿ ವೈರಲ್ ಆಗುತ್ತಿದೆ. ಅಭಿಮಾನಿಯ ಪ್ರಶ್ನೆಗೆ ಉತ್ತರಿಸಿರುವ ಕಿಚ್ಚ ಸುದೀಪ್, ಯಾವಾಗಲೂ ಒಳ್ಳೆಯದನ್ನೇ ಬಯಸುತ್ತೇನೆ ಎಂದಿದ್ದಾರೆ.

ಅಭಿಮಾನಿಗಳಿಗಾಗಿ ಕ್ಯೂ ಎ ಏರ್ಪಡಿಸಿದ್ದರು ಕಿಚ್ಚ. ಈ ವೇಳೆ ಅಭಿಮಾನಿಯೊಬ್ಬರು ದರ್ಶನ್ ಹಾಗೂ ಸುದೀಪ್ ಒಟ್ಟಿಗೆ ಇರುವ ಫೋಟೋ ಹಾಕಿ, ಈ ಫೋಟೋ ಬಗ್ಗೆ ಒನ್ ಲೈನ್ ಆನ್ಸರ್ ಕೊಡುವಂತೆ ಕೇಳಿದ್ದಾರೆ. ಇದಕ್ಕೆ ಉತ್ತರಿಸಿರುವ ಕಿಚ್ಚ ಅವರಿಗೆ ಸದಾ ಒಳ್ಳೆಯದನ್ನೇ ಬಯಸುತ್ತೇನೆ ಎಂದಿದ್ದಾರೆ.

ಅಸಲಿಗೆ ಸುದೀಪ್ ಹಾಗೂ ದರ್ಶನ್ ಫ್ಯಾನ್ಸ್ ನಡುವೆ ಫ್ಯಾನ್ಸ್ ವಾರ್ ಜಟಾಪಟಿ ಜೋರಾಗಿದೆ. ಈ ವೇಳೆ ಅಭಿಮಾನಿಯ ಸ್ಮಾರ್ಟ್ ಪ್ರಶ್ನೆಗೆ ಕಿಚ್ಚ ನಾಜುಕಾಗೇ ಉತ್ತರಿಸಿದ್ದಾರೆ. ಸುದೀಪ್ ಉತ್ತರಕ್ಕೆ ಅನೇಕರು ಖುಷಿ ವ್ಯಕ್ತಪಡಿಸಿದ್ದಾರೆ. ದರ್ಶನ್ ಬಗ್ಗೆ ಉತ್ತಮ ಭಾವನೆಯನ್ನು ಸುದೀಪ್ ಇಟ್ಟುಕೊಂಡಿದ್ದಾರೆ ಎಂದು ಹರ್ಷ ವ್ಯಕ್ತಪಡಿಸುತ್ತಿದ್ದಾರೆ. ಹೀಗೆ, ಸ್ಟಾರ್ ವಾರ್ ಸಂದರ್ಭದಲ್ಲಿ ಸುದೀಪ್ ಶಾಂತ ಪ್ರತಿಕ್ರಿಯೆ ಕೊಡುವ ಮೂಲಕ ಸ್ಟಾರ್ ವಾರ್ ಗಲಾಟೆಯನ್ನು ಮುಗಿಸುತ್ತಾರಾ ಎಂಬ ಕುತೂಹಲ ವ್ಯಕ್ತವಾಗಿದೆ. ಆದರೆ ಸಮಯವೇ ಉತ್ತರ ಕೊಡಬೇಕು.


## ಸ್ಯಾಂಡಲ್‌ವುಡ್ ಸ್ಟಾರ್ ಕಪಲ್ಸ್‌ಗಳಿಂದ ಲ್ಯಾಂಡ್ ಲಾರ್ಡ್ ಚಿತ್ರದ ಹಾಡು ರಿಲೀಸ್

ಸಾರಥಿ ಫಿಲಂಸ್ ಲಾಂಛನದಲ್ಲಿ ಕೆ.ವಿ. ಸತ್ಯಪ್ರಕಾಶ್ - ಹೇಮಂತ್ ಗೌಡ ಕೆ.ಎಸ್ ನಿರ್ಮಿಸಿರುವ, ಜಡೇಶ್ ಕೆ.ಹಂಪಿ ನಿರ್ದೇಶನದ ಹಾಗೂ ನಟ ದುನಿಯಾ ವಿಜಯ್ ಮತ್ತು ನಟಿ ರಚಿತಾ ರಾಮ್ ಮುಖ್ಯಭೂಮಿಕೆಯಲ್ಲಿ ಅಭಿನಯದ ಲ್ಯಾಂಡ್ ಲಾರ್ಡ್ ಚಿತ್ರ ಶೀಘ್ರವೇ ಬಿಡುಗಡೆಯತ್ತ ಹೆಜ್ಜೆ ಹಾಕಿದೆ. ಚಿತ್ರಕ್ಕಾಗಿ ಯೋಗರಾಜ್ ಭಟ್ ಅವರು ಬರೆದಿರುವ, ಅಜನೀಶ್ ಲೋಕನಾಥ್ ಸಂಗೀತ ನೀಡಿರುವ ನಿಂಗವ್ವ ನಿಂಗವ್ವ ಹಾಡು ಇದೀಗ ಅಧಿಕೃತವಾಗಿ ಬಿಡುಗಡೆಯಾಗಿದೆ.

ಗಾಯಕ ವಿಜಯ್ ಪ್ರಕಾಶ್ - ಅನನ್ಯ ಭಟ್ ಕಂಠಸಿರಿಯಲ್ಲಿ ಮೂಡಿಬಂದಿರುವ ಈ ಹಾಡಿಗೆ ಭೂಷಣ್ ಕೋರಿಯೋಗ್ರಫಿ ಮಾಡಿದ್ದಾರೆ. ಆನಂದ್ ಆಡಿಯೋ ಯೂಟ್ಯೂಬ್ ಚಾನಲ್‌ನಲ್ಲಿ ಬಿಡುಗಡೆಯಾಗಿರುವ ಈ ಹಾಡಿಗೆ ಸಿನಿಪ್ರಿಯರಿಂದ ಉತ್ತಮ ಪ್ರತಿಕ್ರಿಯೆಗಳು ಲಭಿಸುತ್ತಿವೆ.

ಸ್ಯಾಂಡಲ್‌ವುಡ್‌ನ ತಾರಾ ದಂಪತಿಗಳಾದ ನೆನಪಿರಲಿ ಪ್ರೇಮ್ - ಜ್ಯೋತಿ, ಡಾರ್ಲಿಂಗ್ ಕೃಷ್ಣ - ಮಿಲನ ನಾಗರಾಜ್ ಹಾಗೂ ತರುಣ್ ಸುಧೀರ್ - ಸೋನಾಲ್ ಅವರಿಂದ ನಿಂಗವ್ವ ನಿಂಗವ್ವ ಹಾಡನ್ನು ರಿಲೀಸ್ ಮಾಡಲಾಯಿತು. ಸಾಂಗ್ ಬಿಡುಗಡೆ ಕುರಿತು ಮಾತನಾಡಿದ ಸ್ಟಾರ್ ಕಪಲ್ಸ್, ಯೋಗರಾಜ್ ಭಟ್ ಅವರ ಸಾಹಿತ್ಯ, ಅಜನೀಶ್ ಲೋಕನಾಥ್ ಸಂಗೀತ ಸಂಯೋಜನೆ, ವಿಜಯ್ ಪ್ರಕಾಶ್ ಗಾಯನ ಹಾಗೂ ವಿಶೇಷವಾಗಿ ದುನಿಯಾ ವಿಜಯ್, ರಚಿತಾ ರಾಮ್ ಅವರ ಅಭಿನಯದ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಜನವರಿ 23ರಂದು ತೆರೆ ಕಾಣಲಿರುವ ಲ್ಯಾಂಡ್ ಲಾರ್ಡ್ ಚಿತ್ರದ ಬಿಡುಗಡೆಗೆ ಕನ್ನಡ ಚಿತ್ರರಂಗದ ಕಲಾವಿದರಿಂದ ಶುಭಹಾರೈಕೆಗಳು ಬಂದಿವೆ. ಈ ಹಾಡು ಉತ್ತಮವಾಗಿ ಮೂಡಿಬಂದಿದೆ. ಸಾಂಗ್ ಚಿತ್ರೀಕರಣ ಸಮಯದಿಂದಲೂ ಯಾವಾಗ ಬಿಡುಗಡೆಯಾಗಬಹುದೆಂದು ಕಾಯುತ್ತಿದ್ದೆ. ಸ್ವಾಮಿ ಅವರ ಛಾಯಾಗ್ರಹಣ, ಯೋಗರಾಜ್ ಭಟ್ ಅವರ ಸಾಹಿತ್ಯ, ಅಜನೀಶ್ ಲೋಕನಾಥ್ ಅವರ ಸಂಗೀತ ಹಾಗು ವಿಜಯ್ ಪ್ರಕಾಶ್ ಅವರ ಗಾಯನ ಎಲ್ಲವೂ ಚೆನ್ನಾಗಿದೆ. ಇನ್ನೂ, ವಿಜಯ್ ಸರ್ ರಾಚಯ್ಯ ಪಾತ್ರದಲ್ಲಿ, ನಾನು ನಿಂಗವ್ವ ಪಾತ್ರದಲ್ಲಿ ಕಾಣಿಸಿಕೊಂಡಿದ್ದೇವೆ. ಈ ಹಾಡಲ್ಲಿ ನಮ್ಮಿಬ್ಬರ ಅಭಿನಯಕ್ಕೆ ಎಲ್ಲರೂ ನೀಡುತ್ತಿರುವ ಮೆಚ್ಚುಗೆಗೆ ಮನ ತುಂಬಿ ಬಂದಿದೆ ಎಂದು ನಟಿ ರಚಿತಾ ರಾಮ್ ಸಂತಸ ವ್ಯಕ್ತಪಡಿಸಿದ್ದಾರೆ.



# ಗ್ಯಾರಂಟಿಗೆ ಹಣ ಹೊಂದಿಸಿಕೊಳ್ಳಲು ಮದ್ಯದಂಗಡಿ ಹರಾಜು

## ರಾಜ್ಯ ಸರ್ಕಾರದ ವಿರುದ್ಧ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟೀಕೆ

• ಪ್ರಜೋದಯ ವರದಿ



**ದಾವಣಗೆರೆ:** ರಾಜ್ಯ ಸರ್ಕಾರವು ಗ್ಯಾರಂಟಿಗಳಿಗೆ ಹಣ ಹೊಂದಿಸಿಕೊಳ್ಳಲು, ಖಾಲಿ ಆಗಿರುವ ಖಜಾನೆಯನ್ನು ಭರ್ತಿ ಮಾಡಿಕೊಳ್ಳಲು ಮದ್ಯದ ಅಂಗಡಿಗಳಿಗೆ ಪರವಾನಗಿ ನೀಡುವ ನೆಪದಲ್ಲಿ ಸುಲಿಗೆ ಮಾಡುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಗಂಭೀರ ಆರೋಪಿಸಿದರು.

ದಾವಣಗೆರೆಯಲ್ಲಿ ಗುರುವಾರ ದಿವಂಗತ ಶಾಮನೂರು ಶಿವಶಂಕರಪ್ಪ ಅವರ ಸ್ಮೃತಿ ಸ್ಥಳಕ್ಕೆ ತೆರಳಿ ನಮನ ಸಲ್ಲಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮದ್ಯದಂಗಡಿ ಪರವಾನಗಿ ಒಂದಕ್ಕೆ 1.95 ಕೋಟಿ ದರವನ್ನು ರಾಜ್ಯ ಸರ್ಕಾರ ನಿಗದಿ ಮಾಡಿದೆ. ಇದು ಲೂಟಿನಲ್ಲೇ ಮತ್ತೇನು. ಜನರಿಗೆ ಇನ್ನು ದೊಡ್ಡ ಪ್ರಮಾಣದಲ್ಲಿ ಕುಡಿತದ ಚಟ ಹತ್ತಿಸಲು ಸರ್ಕಾರವೇ ಉತ್ತೇಜನ ನೀಡುತ್ತಿದೆ. ಇದೇ ರೀತಿ ಪ್ರತಿಯೊಂದು ಇಲಾಖೆಯನ್ನು ಲೂಟಿ ಮಾಡುತ್ತಿದೆ ಎಂದು ಟೀಕಿಸಿದರು.

ಪರಿಶಿಷ್ಟ ಜಾತಿ ಉಪ ಯೋಜನೆ (ಎಸ್‌ಸಿಎಸ್‌ಪಿ) ಹಾಗೂ ಪರಿಶಿಷ್ಟ ಪಂಗಡ ಉಪಯೋಜನೆ (ಟಿಎಸ್‌ಪಿ) ಸೇರಿ ವಿವಿಧ ಯೋಜನೆಗಳ ಹಣ, ಅನುದಾನವನ್ನು ರಾಜ್ಯ ಸರ್ಕಾರ ದುರುಪಯೋಗ ಮಾಡಿಕೊಳ್ಳುತ್ತಿದೆ. ಎಷ್ಟು ಸಾಧ್ಯವೋ ಅಷ್ಟರ ಮಟ್ಟಿಗೆ ರಾಜ್ಯದ ಖಜಾನೆಯನ್ನು ಕೊಳ್ಳೆ ಹೊಡೆಯಲಾಗುತ್ತಿದೆ ಎಂದರು.

ಮದ್ಯದಂಗಡಿ ಹರಾಜು ಮೂಲಕ ಸುಲಿಗೆ ಮಾಡುವುದು ರಾಜ್ಯ ಸರ್ಕಾರವು ಜನತೆಗೆ ನೀಡುತ್ತಿರುವ 'ಹೊಸ ವರ್ಷದ ಕೊಡುಗೆ' ಎಂದು ಎಂದು ಕೇಂದ್ರ ಸಚಿವರು ಲೇವಡಿ ಮಾಡಿದರು.

ರಾಜ್ಯದಲ್ಲಿ ಅಭಿವೃದ್ಧಿ ಪಾತಾಳಕ್ಕೆ ಬಿದ್ದಿದೆ. ಕೇವಲ ಗ್ಯಾರಂಟಿ ಅಂತ ಹೇಳಿಕೊಂಡು ಎರಡೂವರೆ ವರ್ಷ ಆಡಳಿತ ನಡೆಸಿದ್ದಾರೆ. ರಾಜ್ಯದ ರಸ್ತೆಗಳನ್ನು ನೋಡಿದರೆ ಇವರ ಆಡಳಿತದ ಹಣೆಬರಹ ಗೊತ್ತಾಗುತ್ತದೆ. ಅಧಿಕಾರ ಹಂಚಿಕೆ ಕಿತ್ತಾಟದಲ್ಲಿಯೇ ಸಿಎಂ, ಡಿಸಿಎಂ ಇಷ್ಟು ದಿನ ಕಾಲಹರಣ ಮಾಡಿದ್ದಾರೆ. ಇವರನ್ನು ಜನರು ಕ್ಷಮಿಸುವುದಿಲ್ಲ ಎಂದು ಟೀಕಾ ಪ್ರಹಾರ ನಡೆಸಿದರು.

**ಶಾಮನೂರು ಶಿವಶಂಕರಪ್ಪ ಅವರಿಗೆ ನಮನ:**

ಇದಕ್ಕೂ ಮುನ್ನ ಕುಮಾರಸ್ವಾಮಿ ಅವರು ಇತ್ತೀಚಿಗೆ ಅಗಲಿದ ಮಾಜಿ ಸಚಿವ ಶಾಮನೂರು ಶಿವಶಂಕರಪ್ಪ ಅವರ ಸಮಾಧಿ ಸ್ಥಳಕ್ಕೆ ತೆರಳಿ ನಮನ ಸಲ್ಲಿಸಿದರು. ಬಳಿಕ ಶಾಮನೂರು ಅವರ ನಿವಾಸಕ್ಕೆ ತೆರಳಿ ಅವರ ಪುತ್ರ, ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಅವರನ್ನು ಭೇಟಿಯಾಗಿ ಸಾಂತ್ವನ ಹೇಳಿದರು. ಈ ಸಂದರ್ಭದಲ್ಲಿ ಅವರ ಕುಟುಂಬ ಸದಸ್ಯರು ಹಾಜರಿದ್ದರು.

ಮಾಜಿ ಮಂತ್ರಿ ಸಾ.ರಾ. ಮಹೇಶ್, ವಿಧಾನ ಪರಿಷತ್ ಸದಸ್ಯ ಎಸ್.ಎಲ್. ಬೋಜೇಗೌಡ, ವಿಧಾನ ಪರಿಷತ್ ಮಾಜಿ ಸದಸ್ಯ ಹೆಚ್.ಎಂ.ರಮೇಶ್‌ಗೌಡ ಇದ್ದರು.

# ಭೂ ಪರಿವರ್ತನೆ ಈಗ ಸರಳ: ಸಿ.ಎಂ.

• ಪ್ರಜೋದಯ ವರದಿ



**ಬೆಂಗಳೂರು:** ರಾಜ್ಯ ಸರ್ಕಾರವು ಭೂ ಪರಿವರ್ತನೆ ಪ್ರಕ್ರಿಯೆಯನ್ನು ಸರಳೀಕರಣ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕರ್ನಾಟಕ ಭೂ ಕಂದಾಯ ಕಾಯ್ದೆ 1964ರ ತಿದ್ದುಪಡಿಗೆ ಡಿ.23 ರಂದು ಅಂತಿಮ ಅಧಿಸೂಚನೆ ಹೊರಡಿಸಲಾಗಿದೆ. ಕರ್ನಾಟಕ ಭೂ ಕಂದಾಯ ಕಾಯ್ದೆ 1964 ಕಲಂ 95ರ ತಿದ್ದುಪಡಿಗೆ ಹೊರಡಿಸಲಾಗಿರುವ ಅಧಿಸೂಚನೆಯಲ್ಲಿ ಸೇರಿಸಿರುವ ಕಳೆದ 2-3 ವರ್ಷಗಳಲ್ಲಿ ತರಲಾದ ಕಾನೂನಿನ ತಿದ್ದುಪಡಿಗಳನ್ನು ಸಂವಾದಿಯಾಗಿ ಕೆಲ ನಿಯಮಗಳನ್ನು ರಚಿಸಲಾಗಿದೆ ಎಂದು ಅವರು ಹೇಳಿದ್ದಾರೆ.

ಕಳೆದ 2 ವರ್ಷದಲ್ಲಿ ಭೂ ಕಂದಾಯ ಕಾಯ್ದೆ 1964ರ ವಿವಿಧ ಕಲಂಗಳಿಗೆ ತಿದ್ದುಪಡಿ ತಂದು ಕರ್ನಾಟಕ ರಾಜ್ಯದಲ್ಲಿ ಪ್ರಗತಿ ಪಥದತ್ತ ಹಾಗೂ ಸಾರ್ವಜನಿಕರಿಗೆ ಜನಸ್ನೇಹಿ ಆಡಳಿತಕ್ಕೆ ನಾಂದಿ ಹಾಡಲು ಪ್ರಯತ್ನಿಸಲಾಗಿದ್ದು, 47 ಕಲಂಗಳಿಗೆ 9 ತಿದ್ದುಪಡಿ ತರಲಾಗಿದೆ.

ಕರ್ನಾಟಕ ಭೂ ಕಂದಾಯ ನಿಯಮಗಳು 1966 ಅನ್ನು ಸಮಗ್ರವಾಗಿ 56 ವರ್ಷಗಳ ತರುವಾಯ 44 ನಿಯಮಗಳಿಗೆ ತಿದ್ದುಪಡಿ ತರಲಾಗಿದ್ದು, 1974ರಲ್ಲಿ ದೇವರಾಜು ಅರಸು ಭೂ ಸುಧಾರಣಾ ಕಾಯ್ದೆ 1961ಕ್ಕೆ 145 ಕಡೆ ತಿದ್ದುಪಡಿ ತಂದು ಕಾನೂನಿಗೆ ಸ್ವಾತಂತ್ರ್ಯ ನೀಡಲಾಗಿತ್ತು. ಅದಾದ ಬಳಿಕ ಸಮಗ್ರ ತಿದ್ದುಪಡಿ ತಂದಿರುವುದು ಇದೇ ಮೊದಲು. ಈ ತಿದ್ದುಪಡಿ ಮೂಲಕ ಕಂದಾಯ ನ್ಯಾಯಾಲಯಗಳನ್ನು ಪಾರದರ್ಶಕವಾಗಿ, ನಿಯಮಬದ್ಧವಾಗಿ ನಡೆಸಲು ಹಾಗೂ ಸಾರ್ವಜನಿಕರಿಗೆ ಸರಳ- ಸುಲಲಿತ ನ್ಯಾಯದಾನ ನೀಡಲು ಬದ್ಧವಾಗಿದೆ ಎಂದಿದ್ದಾರೆ.

ಭೂ ಪರಿವರ್ತನೆಯನ್ನು ಸರಳೀಕೃತವಾಗಿ ಪ್ರಕ್ರಿಯೆಗೊಳಪಡಿಸಿ ರಾಜ್ಯವನ್ನು ಅಭಿವೃದ್ಧಿ ಪಥದತ್ತ ಸಾಗಿಸಲು ಹಾಗೂ ಬಂಡವಾಳ ಹೂಡಿಕೆಗೆ ಹೂಡಿಕೆದಾರರ ಸ್ನೇಹಿಯಾಗಿ ಖರೀದಿಸಲಾದ ಭೂಮಿಗೆ ಭೂ ಪರಿವರ್ತನೆ ನೀಡಲು ಈ ತಿದ್ದುಪಡಿ ತರಲಾಗಿದೆ ಎಂದು ಸರ್ಕಾರ ತಿಳಿಸಿದೆ. ಮಾಸ್ಟರ್ ಪ್ಲಾನ್ ಪ್ರಕಾರ ಭೂ ಬಳಕೆಗೆ ಪರಿವರ್ತನೆ ಅವಶ್ಯಕತೆ ತೆಗೆದು ಹಾಕಲಾಗಿದೆ. ಇಂತಹ ಪ್ರಕರಣಗಳಲ್ಲಿ ನೇರವಾಗಿ ಪ್ಲಾನ್ ಅಪ್ರೂವಲ್‌ಗೆ ಹೋಗಬಹುದು. ಮಾಸ್ಟರ್ ಪ್ಲಾನ್ ಹೊರಗಿನ ಹಾಗೂ ಪರಿಭಾವಿತ ಭೂ ಪರಿವರ್ತನೆ (ಡೀಮ್ಡ್ ಕನ್ವರ್ಷನ್) ಈ ಹಿಂದೆ ಮೂರು ನಾಲ್ಕು ತಿಂಗಳು ಸಮಯ ತೆಗೆದುಕೊಳ್ಳುತ್ತಿತ್ತು. ಆದರೆ ಪ್ರಸ್ತುತ 30 ದಿನಗಳಲ್ಲಿ ಭೂ ಪರಿವರ್ತನೆ ಕಡ್ಡಾಯಗೊಳಿಸಲಾಗಿದೆ.

ಪರಿವರ್ತನೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಜಿಲ್ಲಾಧಿಕಾರಿಗಳು 30 ದಿನಗಳ ಒಳಗಾಗಿ ಸಂಬಂಧಿತ ಇಲಾಖೆಯ ಜೊತೆಗೆ ಚರ್ಚಿಸಿ ಭೂ ಪರಿವರ್ತನೆಗೆ ಅವಕಾಶ ನೀಡಬಹುದು ಅಥವಾ ತಿರಸ್ಕರಿಸಬಹುದು. 30 ದಿನಗಳ ಒಳಗಾಗಿ ಜಿಲ್ಲಾಧಿಕಾರಿಗಳು ಯಾವ ನಿರ್ಧಾರವೂ ತೆಗೆದುಕೊಳ್ಳದಿದ್ದಲ್ಲಿ, ಸ್ವಯಂ ಚಾಲಿತವಾಗಿ ಭೂ ಪರಿವರ್ತನೆಗೆ ಅವಕಾಶವಾಗುತ್ತದೆ.

## ಜೆ.ಬಿ.ತಮ್ಮಣ್ಣಗೌಡಗೆ ಶಿಕ್ಷಣ ರತ್ನ ಪ್ರಶಸ್ತಿ



**ಹಾಸನ:** ಶಿಕ್ಷಣ ಕ್ಷೇತ್ರದಲ್ಲಿ ನಿವೃತ್ತಿಯ ನಂತರವೂ ನಮ್ಮ ಶಾಲೆ ಮತ್ತು ನಮ್ಮೂರ ಶಾಲೆ ಎಂಬ ಪರಿಕಲ್ಪನೆಯಡಿಯಲ್ಲಿ ಹತ್ತನೇ ತರಗತಿಯಲ್ಲಿ ಹೆಚ್ಚಿನ ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿ ವರ್ಷವೂ ನಗದು ಬಹುಮಾನಗಳನ್ನು ನೀಡುತ್ತಾ ಶಿಕ್ಷಣ ಸೇವೆಯಲ್ಲಿ ತೊಡಗಿರುವ ನಿವೃತ್ತ ಶಿಕ್ಷಣಾಧಿಕಾರಿ ಜೆ.ಬಿ. ತಮ್ಮಣ್ಣಗೌಡರನ್ನು ಬೆಂಗಳೂರಿನ ಜನ್ಮಭೂಮಿ ಸಾಂಸ್ಕೃತಿಕ ನಾಗರೀಕರ ವೇದಿಕೆ (ನೋಂ) ಯು ಗುರುತಿಸಿ, 2025 ನೇ ವರ್ಷದಲ್ಲಿ ಶಿಕ್ಷಣ ರತ್ನ ಪ್ರಶಸ್ತಿಗೆ ಆಯ್ಕೆ ಮಾಡಿದ್ದು, ಡಿ.29 ರಂದು ಪ್ರಶಸ್ತಿ ನೀಡಿ ಗೌರವಿಸಲಾಗುವುದು.

## ಸಿಎಂ ಸಿದ್ದರಾಮಯ್ಯ ಇಂದು ದೆಹಲಿಗೆ

• ಪ್ರಜೋದಯ ವರದಿ

**ಬೆಂಗಳೂರು:** ಕಾಂಗ್ರೆಸ್ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಭಾಗಿಯಾಗಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದೆಹಲಿಗೆ ತೆರಳಲಿದ್ದಾರೆ.

ಡಿ.27 ರಂದು ದೆಹಲಿಯ ಇಂದಿರಾ ಭವನದಲ್ಲಿ ಸಿಡಬ್ಲ್ಯೂಸಿ ಸಭೆ ಆಯೋಜನೆಗೊಂಡಿದೆ. ಈ ಸಭೆಯಲ್ಲಿ ಭಾಗಿಯಾಗುವಂತೆ ಕಾಂಗ್ರೆಸ್ ಅಧಿಕಾರದಲ್ಲಿರುವ ಮೂರು ರಾಜ್ಯಗಳ ಮುಖ್ಯಮಂತ್ರಿಗಳಿಗೆ ಆಹ್ವಾನ ನೀಡಲಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಜೊತೆ ತೆಲಂಗಾಣದ ರೇವಂತ್ ರೆಡ್ಡಿ, ಹಿಮಾಚಲ ಪ್ರದೇಶದ ಸುಖ್ವಿಂದರ್ ಸಿಂಗ್ ಸುಖು ಭಾಗಿಯಾಗಲಿದ್ದಾರೆ. ಕರ್ನಾಟಕದ ಸಿಡಬ್ಲ್ಯೂಸಿ ಸದಸ್ಯರಾದ ಬಿ.ಕೆ.ಹರಿಪ್ರಸಾದ್, ನಾಸೀರ್ ಹುಸೇನ್ ಹಾಗೂ ವೀರಪ್ಪ ಮೊಯ್ಲಿ ಅವರುಗಳು ಪಾಲ್ಗೊಳ್ಳಲಿದ್ದಾರೆ.

ಈ ಮೊದಲು ಸಿಡಬ್ಲ್ಯೂಸಿ ಸಭೆಗೆ ನನಗೆ ಆಹ್ವಾನವಿಲ್ಲ ಎಂದು ಸಿಎಂ ಹೇಳಿದ್ದರು. ಈಗ ನಾಳೆ ಸಿಎಂ ದೆಹಲಿಗೆ ಹೋಗುವುದು ಅಧಿಕೃತವಾಗಿದೆ.

ಐದು ರಾಜ್ಯಗಳ ಚುನಾವಣೆ, ಮತಕಳ್ಳತನ, ನ್ಯಾಷನಲ್ ಹೆರಾಲ್ಡ್ ಮತ್ತು ಮನರೇಗಾ ಕಾಯ್ದೆ ತಿದ್ದುಪಡಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದ ವಿರುದ್ಧ ಹೋರಾಟ ರೂಪಿಸುವ ಬಗ್ಗೆ ಸಿಡಬ್ಲ್ಯೂಸಿ ಸಭೆಯಲ್ಲಿ ಚರ್ಚೆ ನಡೆಯಲಿದೆ ಎಂದು ಹೇಳಲಾಗುತ್ತಿದೆ.

**ಡಿಕೆಶಿಗೆ ಇಲ್ಲ ಆಹ್ವಾನ:**

ನಾಳೆ ನಡೆಯಲಿರುವ ಸಿಡಬ್ಲ್ಯೂಸಿ ಸಭೆಗೆ ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರಿಗೆ ಆಹ್ವಾನವಿಲ್ಲ ಎಂದು ಹೇಳಿದ್ದಾರೆ.

# ಪ್ರಯಾಣಿಕರ ತಂಗುದಾಣ ನಿರ್ಮಾಣದ ಕಾಮಗಾರಿಗೆ ಚಾಲನೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ವಾಣಿಜ್ಯ ಕೇಂದ್ರ ಭಾಗ ಹಾಗೂ ಜನವಸತಿಯೊಂದಿಗೆ ತಾಲ್ಲೂಕು ಮಟ್ಟಕ್ಕೆ ಬೆಳೆದಿರುವ ಹಿರೀಸಾವೆ ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ಪ್ರಮುಖ ಸೌಲಭ್ಯಗಳ ಅಗತ್ಯವಿದೆ ಎಂದು ಸಂಸದ ಶ್ರೇಯಸ್ ಎಂ.ಪಟೇಲ್ ಅವರು ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಶ್ರೀಕಂಠಯ್ಯ ವೃತ್ತದಲ್ಲಿ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 10 ಲಕ್ಷ ರೂ. ವೆಚ್ಚದ ಪ್ರಯಾಣಿಕರ ತಂಗುದಾಣ ನಿರ್ಮಾಣದ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿ, ಸರ್ಕಾರದ ಗಮನ ಸೆಳೆದು ಅಗ್ನಿ ಶಾಮಕ ಠಾಣೆಯನ್ನು ಹಿರೀಸಾವೆಯಲ್ಲಿ ಶೀಘ್ರ ಆರಂಭಿಸಲಾಗುವುದು ಎಂದರು.

ಇತ್ತೀಚಿನ ವರ್ಷಗಳಿಂದ ಹಿರೀಸಾವೆ ಹೋಬಳಿ ವ್ಯಾಪ್ತಿಯಲ್ಲಿ ಹೆಚ್ಚು ಬೆಂಕಿ ಅವಘಡಗಳು ಸಂಭವಿಸುತ್ತಿದ್ದು, ಅಗ್ನಿ ಶಾಮಕ ಠಾಣೆ ಅಗತ್ಯವಿದೆ. ಶೀಘ್ರದಲ್ಲಿಯೇ ಕಲ್ಪಿಸಲಾಗುವುದು ಎಂದು ತಿಳಿಸಿದರು.

ಬೆಂಗಳೂರು- ಹಾಸನ ರೈಲ್ವೆ ಮಾರ್ಗದಲ್ಲಿ ಬೆಳಗ್ಗೆ ಮತ್ತು ಸಂಜೆ ಕೆಲವು ರೈಲು ನಿಲುಗಡೆ ಹಾಗೂ ರಾಷ್ಟ್ರೀಯ ಹೆದ್ದಾರಿ-75 ರ ಅಂಬೇಡ್ಕರ್ ವೃತ್ತ ಸೇರಿದಂತೆ ಹಲವು ಕಡೆ ಅಂಡರ್ ಪಾಸ್ ನಿರ್ಮಾಣ ಮಾಡಿಕೊಡುವಂತೆ ಸಂಸದರಿಗೆ ಮನವಿ ಸಲ್ಲಿಸಿದರು.

ರಾಷ್ಟ್ರೀಯ ಹೆದ್ದಾರಿ 75 ರ ಕೆಲವು ಕಡೆ ಅಂಡರ್‌ಪಾಸ್ ತಾಂತ್ರಿಕ ತೊಂದರೆಗಳನ್ನು ಬಗೆಹರಿಸಲಾಗುವುದು ಮತ್ತು ರೈಲುಗಳ ನಿಲುಗಡೆ ಬಗ್ಗೆ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವುದಾಗಿ ಸಂಸದರು ಭರವಸೆ ನೀಡಿದರು.

ರಾಜ್ಯ ವಿದ್ಯುತ್ ಕಾರ್ಖಾನೆ ನಿಗಮದ ಅಧ್ಯಕ್ಷ ಎಚ್.ಸಿ. ಲಲಿತ್ ರಾಘವ್ ಮಾತನಾಡಿ, ಜುಲೈ 18 ಕ್ಕೆ ತಾತನವರಾದ ಮಾಜಿ ಸಚಿವ ದಿ. ಶ್ರೀಕಂಠಯ್ಯ ಜನ್ಮ ಶತಮಾನೋತ್ಸವನ್ನು ಆಯೋಜಿಸಲಾಗುವುದು ಎಂದು ಅವರು ತಿಳಿಸಿದರು.

ಮಾಜಿ ಶಾಸಕ ಸಿ.ಎಸ್. ಪುಟ್ಟೇಗೌಡ ಅವರು ಮಾತನಾಡಿ, ಜಿಲ್ಲೆಯಲ್ಲಿ ಇಬ್ಬರು ಯುವ ನಾಯಕರಾಗಿದ್ದು, ಬಡವರ ಪರವಾದ ಕೆಲಸ ಮಾಡಿ. ತಾತಂದಿರ ಹೆಸರನ್ನು ಉಳಿಸಿ. ಜನಗಳ ಮಧ್ಯೆ ನಿಂತು ಅವರ ಕಷ್ಟಗಳನ್ನು ಆಲಿಸಲು ಮತ್ಯಾರು ಇಲ್ಲ ಎಂದರು.

ಗ್ರಾಮ ಪಂಚಾಯಿತಿ ಸದಸ್ಯರಾದ ಮಾರುತಿ ಮಂಜುನಾಥ್, ಶಂಕರ್, ಚೇತನ್, ಬಿ.ಆರ್. ಪ್ರಕಾಶ್, ಪುನಿತ್, ಕಾಂಗ್ರೆಸ್ ಮುಖಂಡರಾದ ಯುವರಾಜ್, ಎಚ್.ಎಂ. ರಘು, ಉದಯಕುಮಾರ್, ಎಚ್.ಆರ್. ಬಾಲಕಷ್ಣ, ಬ್ಯಾಡರಹಳ್ಳಿ ಯೋಗೇಶ್, ಮುರುಳೀಧರ್, ಶ್ರೀಧರ್, ಬ್ಯಾಂಗಲ್ ಮಹೇಶ್, ಜಿನ್ನೇನಹಳ್ಳಿ ರಾಮೇಗೌಡ, ಆಕರ್ಷ, ಚಿಕ್ಕರಾಮೇಗೌಡ, ರಾಶಿಗೌಡ, ಸೋಮೇಗೌಡ, ರಂಗಸ್ವಾಮಿ ಇನ್ನಿತರರಿದ್ದರು.

## ಗ್ಯಾರೇಜ್ ಮಾಲೀಕರ ಸಂಘಕ್ಕೆ ಆಯ್ಕೆ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ದ್ವಿಚಕ್ರ ವಾಹನ ಗ್ಯಾರೇಜ್ ಮಾಲೀಕರ ಸಂಘದ ನೂತನ ಅಧ್ಯಕ್ಷರಾಗಿ ಭಾನು ಮೋಟಾರ್ ಮಾಲೀಕ ಮಧು ಅವರು ಆಯ್ಕೆಯಾಗಿದ್ದಾರೆ.

ಪಟ್ಟಣದ ನಾಗಸಮುದ್ರ ರಸ್ತೆಯಲ್ಲಿರುವ ಸತ್ಯಕಾಳಮ್ಮ ದೇವಾಲಯದ ಆವರಣದಲ್ಲಿ 2025-26 ನೇ ಸಾಲಿನ ಸರ್ವ ಸದಸ್ಯರ ಸಭೆ ಮತ್ತು ಪದಾಧಿಕಾರಿಗಳ ಆಯ್ಕೆಯ ಕಾರ್ಯಕ್ರಮವನ್ನು ಜರುಗಿಸಲಾಯಿತು.

ಅದೇ ರೀತಿ ಇನ್ನಿತರ ಪದಾಧಿಕಾರಿಗಳ ಹುದ್ದೆಯಿದ್ದು ಆ ಹುದ್ದೆಗಳಲ್ಲಿ ಉಪಾಧ್ಯಕ್ಷರಾಗಿ ಮಂಜು ಚೋಳೇನಹಳ್ಳಿ, ಕಾರ್ಯದರ್ಶಿಯಾಗಿ ನಾಗ ಮಾರ್ಕೆಟ್, ಸಹ ಕಾರ್ಯದರ್ಶಿಯಾಗಿ ಸಂದಿಲ್, ಖಜಾಂಚಿಯಾಗಿ ಶ್ರೀನಿವಾಸ್, ಸಹ ಖಜಾಂಚಿಯಾಗಿ ಮಣಿ, ಸಂಚಾಲಕರಾಗಿ ಯೋಗಚಾರಿ ಮತ್ತು ವಾಸಿಮ್ ಬುಲೆಟ್ ಇವರನ್ನು ಸರ್ವ ಸದಸ್ಯರ ಸಮ್ಮುಖದಲ್ಲಿ ಆಯ್ಕೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಸಂಘದ ವತಿಯಿಂದ 2026 ಕ್ಯಾಲೆಂಡರ್ ಅನ್ನು ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಮಾಜಿ ಅಧ್ಯಕ್ಷರು ಮತ್ತು ಕಾರ್ಯದರ್ಶಿ ಹಾಗೂ ಕಾರ್ಯಕಾರಿ ಮಂಡಳಿ ಸದಸ್ಯರುಗಳು ಹಾಗೂ ಸರ್ವ ಸದಸ್ಯರು ಹಾಜರಿದ್ದರು.

# ಬೀದಿ ನಾಟಕಗಳಿಂದ ಅನಿಷ್ಟ ಪದ್ಧತಿಗಳ ಬಗ್ಗೆ ಅರಿವು

• ಪ್ರಜೋದಯ ವರದಿ



**ಆಲೂರು:** ಬೀದಿ ನಾಟಕಗಳ ಮೂಲಕ ಅಸ್ಪೃಶ್ಯತೆ ಒಳಗೊಂಡಂತೆ ಸಮಾಜದಲ್ಲಿರುವ ಅನಿಷ್ಟ ಪದ್ಧತಿಗಳನ್ನು ಹೋಗಲಾಡಿಸಲು ಜನಸಾಮಾನ್ಯರಲ್ಲಿ ಅರಿವು ಮೂಡಿಸಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ಕೌಸರ್ ಅಹ್ಮದ್ ಅವರುತಿಳಿಸಿದರು.

ಪಟ್ಟಣದ ಬಸ್ ನಿಲ್ದಾಣ ಮುಂಭಾಗದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ, ಕಲಾವಿದ ಬಿ.ಟಿ.ಮಾನವ ಮತ್ತು ತಂಡದಿಂದ ದೌರ್ಜನ್ಯ ಹಾಗೂ ಅಸ್ಪೃಶ್ಯತೆ ನಿವಾರಣೆ ಬಗ್ಗೆ ಅರಿವು ಮೂಡಿಸುವ ಬೀದಿ ನಾಟಕ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷಗಳು ಕಳೆದರೂ ಅಸ್ಪೃಶ್ಯತೆ ಆಚರಣೆ ಇಂದಿಗೂ ಜೀವಂತವಾಗಿರುವುದು ವಿಷಾದನೀಯ. ಜನಾಂದೋಲನದ ರೀತಿಯಲ್ಲಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಂಡಾಗ ಮಾತ್ರ ಅಸ್ಪೃಶ್ಯತೆ ತೊಲಗಿಸಲು ಸಾಧ್ಯ. ಸಾಮಾಜಿಕ ಕಾರ್ಯಕ್ರಮಗಳನ್ನು ವೈಜ್ಞಾನಿಕ ಮಾನೋಭಾವದಿಂದ ನೋಡಿದಾಗ ಅಸ್ಪೃಶ್ಯತೆ, ಜಾತಿ ಪದ್ಧತಿ ಹಾಗೂ ತಾರತಮ್ಯ ಹೋಗಲಾಡಿಸಬಹುದು ಎಂದು ಹೇಳಿದರು.

ಅಸ್ಪೃಶ್ಯತೆಯ ಆಚರಣೆಯಿಂದ ದೇಶದ ಅಭಿವೃದ್ಧಿ ಕುಂಠಿತಗೊಂಡಿದೆ. ಸಮಾಜದ ಅಭಿವೃದ್ಧಿಯ ಮೇಲೆ ದುಷ್ಪರಿಣಾಮ ಬೀರುವ ಸಾಮಾಜಿಕ ಪಿಡುಗುಗಳ ನಿರ್ಮೂಲನೆಗೆ ಪ್ರತಿಯೊಬ್ಬರು ಮುಂದಾಗಬೇಕು. ಅಸ್ಪೃಶ್ಯತೆ ಎಂಬುದು ಸಾಮಾಜಿಕ ಪಿಡುಗಾಗಿದ್ದು ದಲಿತರಷ್ಟೇ ಅಲ್ಲದೆ, ಇತರೆ ಜನಾಂಗದವರು ಅಸ್ಪೃಶ್ಯತೆಗೆ ಒಳಗಾಗುತ್ತಿದ್ದಾರೆ. ಗ್ರಾಮೀಣ ಭಾಗಗಳಲ್ಲಿ ದೌರ್ಜನ್ಯ, ಅಸ್ಪೃಶ್ಯತೆಯ ಆಚರಣೆ ಹೆಚ್ಚು ಕಂಡು ಬರುವುದರಿಂದ ಬೀದಿ ನಾಟಕಗಳು, ಜಾನಪದ ಹಾಡುಗಳ ಮೂಲಕ ಅರಿವು ಮೂಡಿಸುವ ಅವಶ್ಯಕತೆ ಇದೆ. ಈ ಪಿಡುಗಿನಿಂದ ತೊಂದರೆಗೆ ಒಳಗಾದವರ ರಕ್ಷಣೆ ಹಾಗೂ ಸಬಲೀಕರಣಕ್ಕಾಗಿ ಸರಕಾರ ಕಾನೂನನ್ನು ಮತ್ತು ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಸಾರ್ವಜನಿಕರು ಇದರ ಉಪಯೋಗಗಳನ್ನು ಪಡೆದುಕೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ಉದ್ಯೋಗ ಖಾತ್ರಿ ಯೋಜನೆ ಸಹಾಯಕ ನಿರ್ದೇಶಕ ಕೇಶವಮೂರ್ತಿ, ಸಹಾಯಕ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನಾಗೇಶ್, ಪಟ್ಟಣ ಪಂಚಾಯಿತಿ ನಿವೃತ್ತ ನೌಕರರಾದ ಮಂಜುನಾಥ್, ನಿಂಗೇಗೌಡ, ಸಿಬ್ಬಂದಿಗಳು ಮತ್ತು ಕಲಾವಿದರು ಉಪಸ್ಥಿತರಿದ್ದರು.

## 'ಬಾಂಗ್ಲಾದೇಶ ಮುಸ್ಲಿಮರು, ಬೌದ್ಧರು, ಕ್ರಿಶ್ಚಿಯನ್ನರು, ಹಿಂದೂಗಳಿಗೆ ಸೇರಿದ್ದು'

• ಪ್ರಜೋದಯ ಎಂದ

**ಢಾಕಾ:** ಪ್ರಧಾನಿ ಹುದ್ದೆ ಮೇಲೆ ಕಣ್ಣಿಟ್ಟಿರುವ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರ ಪುತ್ರ ಮತ್ತು ಅವರ ಜನಪ್ರಿಯ ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷದ (ಬಿಎನ್‌ಪಿ) ಹಂಗಾಮಿ ಅಧ್ಯಕ್ಷ ತಾರಿಕ್ ರೆಹಮಾನ್ ಬರೊಬ್ಬರಿ 17 ವರ್ಷಗಳ ಬಳಿಕ ಸ್ವದೇಶ ಬಾಂಗ್ಲಾದೇಶಕ್ಕೆ ಮರಳಿದ್ದಾರೆ.

ಬಳಿಕ ತಮ್ಮ ಬೆಂಬಲಿಗರನ್ನು ಮತ್ತು ಬಾಂಗ್ಲಾದೇಶ ಜನತೆಯನ್ನು ಉದ್ದೇಶಿಸಿ ಮಾತನಾಡಿದ ತಾರಿಕ್ ರೆಹಮಾನ್, ಇಂದು, ನನ್ನ ದೇಶಕ್ಕಾಗಿ ನನಗೆ ಒಂದು ಯೋಜನೆ ಇದೆ ಎಂದು ನಾನು ಹೇಳಲು ಬಯಸುತ್ತೇನೆ... ಜನರು ಬಹುಕಾಲದಿಂದ ಆಶಿಸುತ್ತಿದ್ದ ಸುರಕ್ಷಿತ ರಾಜ್ಯ ಎಂದು ಹೇಳಿದರು.

60 ವರ್ಷದ ರೆಹಮಾನ್ ತಮ್ಮ ಸ್ವದೇಶಕ್ಕೆ ಮರಳಿದ ನಂತರ ಮಾಡಿದ ಮೊದಲ ಭಾಷಣ ಇದಾಗಿದ್ದು, ಈ ವೇಳೆ ಅವರು ಒಗ್ಗಟ್ಟಿನ ಮಂತ್ರ ಜಪಿಸಿದರು. ನಾವು ಒಟ್ಟಾಗಿ ದೇಶವನ್ನು ನಿರ್ಮಿಸುವ ಸಮಯ ಇದು. ಈ ದೇಶವು ಬೆಟ್ಟಗಳು ಮತ್ತು ಬಯಲು ಪ್ರದೇಶಗಳ ಜನರಿಗೆ, ಮುಸ್ಲಿಮರು, ಬೌದ್ಧರು, ಕ್ರಿಶ್ಚಿಯನ್ನರು ಮತ್ತು ಹಿಂದೂಗಳಿಗೆ ಸೇರಿದೆ ಎಂದರು.

ತಮ್ಮ ತಾಯಿ ದೇಶಕ್ಕಾಗಿ ಎಲ್ಲವನ್ನೂ ತ್ಯಾಗ ಮಾಡಿದ್ದಾರೆ ಮತ್ತು ಅವರನ್ನು ಭೇಟಿ ಮಾಡಲು ಮತ್ತು ನನ್ನ ಕೃತಜ್ಞತೆಯನ್ನು ವ್ಯಕ್ತಪಡಿಸಲು ಬಂದಿರುವುದಾಗಿ ರೆಹಮಾನ್ ಅವರು ಹೇಳಿದರು.

## ಮೀನು ಮಾರಾಟಗಾರರಿಂದ ಸಹಾಯಧನಕ್ಕೆ ಅರ್ಜಿ ಆಹ್ವಾನ

• ಪ್ರಜೋದಯ ವರದಿ



**ಹಾಸನ:** ಕೇಂದ್ರ ಪುರಸ್ಕೃತ ಪ್ರಧಾನ ಮಂತ್ರಿ ಮತ್ಸ್ಯಸಂಪದ ಯೋಜನೆಯ 2025-26ನೇ ಸಾಲಿನಲ್ಲಿ ಧರ್ತಿ ಅಭಾ ಜಾತೀಯ ಗ್ರಾಮ ಉತ್ಕರ್ಷ ಅಭಿಯಾನ ಕಾರ್ಯಕ್ರಮದಡಿ ಪರಿಶಿಷ್ಟ ಪಂಗಡದ ಮೀನು ಮಾರಾಟಗಾರರಿಗೆ ದ್ವಿಚಕ್ರ ವಾಹನದೊಂದಿಗೆ ಐಸ್ ಬಾಕ್ಸ್ ಖರೀದಿಗೆ ಸಹಾಯಧನ ನೀಡಲು ಹಾಸನ ಜಿಲ್ಲೆಯ ಈ ಕೆಳಕಂಡ ತಾಲ್ಲೂಕುಗಳಲ್ಲಿನ ಗ್ರಾಮಗಳ ಅರ್ಹ ಮೀನು ಮಾರಾಟಗಾರರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹಾಸನ ತಾಲ್ಲೂಕಿನ ಯಳಗುಂದ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೊಮ್ಮೇನಹಳ್ಳಿ ಮತ್ತು ಜಾಗರವಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಾಗರವಳ್ಳಿ, ಅರಸೀಕೆರೆ ತಾಲ್ಲೂಕಿನ ಉಂಡಿಗನಾಳು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುರುಡಹಳ್ಳಿ ಮತ್ತು ಕಲ್ಲುಗುಂಡಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಲೇಹಳ್ಳಿ, ಬೇಲೂರು ತಾಲ್ಲೂಕಿನ ಹಗರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಅಂಗಡಿಹಳ್ಳಿ ಹಾಗೂ ಹೊಳೆನರಸೀಪುರ ತಾಲ್ಲೂಕಿನ ಮೂಡಲಹಿಪ್ಪೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜಕ್ಕವಳ್ಳಿ ಈ ಗ್ರಾಮಗಳಲ್ಲಿನ ಪರಿಶಿಷ್ಟ ಪಂಗಡದ ಮೀನುಗಾರರು ಮಾತ್ರ ಸದರಿ ಕಾರ್ಯಕ್ರಮದಡಿ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಅರ್ಹ ಮೀನು ಮಾರಾಟಗಾರರು ದಿನಾಂಕ 05.01.2026 ರೊಳಗೆ ಅರ್ಜಿಗಳನ್ನು ಸಂಬಂಧಪಟ್ಟ ದಾಖಲೆಗಳೊಂದಿಗೆ ಆಯಾ ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಸಲ್ಲಿಸಬೇಕಾಗಿರುತ್ತದೆ. ಅಂತಿಮ ದಿನಾಂಕದ ನಂತರ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರು ಹಾಸನ- 9964395651, ಅರಸೀಕೆರೆ -8549933411, ಬೇಲೂರು- 7411278429, ಹೊಳೆನರಸೀಪುರ- 8792747119 ಮತ್ತು ಮೀನುಗಾರಿಕೆ ಉಪ ನಿರ್ದೇಶಕರು ಹಾಸನ -8296125312 ಅಧಿಕಾರಿಗಳನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಪಂಚಾಯತ್ ಮೀನುಗಾರಿಕೆ ಉಪ ನಿರ್ದೇಶಕರು ತಿಳಿಸಿದ್ದಾರೆ.

# ರಾಜಕೀಯಕ್ಕೆ ಹೊಸ ದಿಕ್ಕು ನೀಡಿದ ಮಹಾನಾಯಕ ವಾಜಪೇಯಿ

• ಪ್ರಜೋದಯ ವರದಿ



**ಸಕಲೇಶಪುರ:** ಭಾರತ ರತ್ನ, ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರು ಭಾರತೀಯ ರಾಜಕಾರಣದಲ್ಲಿ ಶಿಷ್ಟಾಚಾರ, ಪ್ರಾಮಾಣಿಕತೆ ಮತ್ತು ಸಮ್ಮಿಲನ ರಾಜಕೀಯಕ್ಕೆ ಹೊಸ ದಿಕ್ಕು ನೀಡಿದ ಮಹಾನಾಯಕರು ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಶಾಸಕರ ಗೃಹ ಕಚೇರಿಯಲ್ಲಿ ತಾಲ್ಲೂಕು ಬಿಜೆಪಿ ಮಂಡಲ ವತಿಯಿಂದ ಭಾರತರತ್ನ, ಮಾಜಿ ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಾಜಪೇಯಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಸಿಮೆಂಟ್ ಮಂಜು ಅವರು, ಅಟಲ್ ಬಿಹಾರಿ ವಾಜಪೇಯಿ ಅವರು ಪ್ರಾಮಾಣಿಕತೆ, ನಿಷ್ಠಾವಂತ ನಾಯಕತ್ವ ಮತ್ತು ಅಜಾತಶತ್ರು ಗುಣಗಳಿಂದ ದೇಶದ ರಾಜಕಾರಣದಲ್ಲಿ ಅಪರೂಪದ ಸ್ಥಾನ ಪಡೆದಿದ್ದರು ಎಂದು ಹೇಳಿದರಲ್ಲದೆ, ಕವಿ ಹೃದಯದ ರಾಜಕಾರಣಿಯಾಗಿದ್ದ ವಾಜಪೇಯಿ ಅವರು ಪಕ್ಷಾತೀತ ಗೌರವ ಪಡೆದ ಅಜಾತಶತ್ರು ನಾಯಕರೆಂದು ಗುರುತಿಸಲ್ಪಟ್ಟಿದ್ದರು ಎಂದು ಕೊಂಡಾಡಿದರು.

ಪ್ರಧಾನಮಂತ್ರಿಯಾಗಿ ಅವರು ದೇಶದ ಮೂಲಸೌಕರ್ಯ ಅಭಿವೃದ್ಧಿಗೆ ವಿಶೇಷ ಒತ್ತು ನೀಡಿದ್ದು, ಸುವರ್ಣ ಚತುಷ್ಪಥ ಯೋಜನೆ, ಗ್ರಾಮೀಣ ರಸ್ತೆ ಅಭಿವೃದ್ಧಿ ಹಾಗೂ ಪೋಖ್ರಾನ್ ಅಣುಪರೀಕ್ಷೆಗಳಂತಹ ಮಹತ್ವದ ನಿರ್ಣಯಗಳು ಅವರ ಆಡಳಿತದ ಪ್ರಮುಖ ಗುರುತುಗಳಾಗಿವೆ. ಅಲ್ಲದೆ, ಭಾರತದ ವಿದೇಶಾಂಗ ನೀತಿಗೆ ಹೊಸ ಆಯಾಮ ನೀಡಿದ ಅವರು, ಪಾಕಿಸ್ತಾನದೊಂದಿಗೆ ಶಾಂತಿ ಪ್ರಯತ್ನಗಳ ಭಾಗವಾಗಿ ಲಾಹೋರ್ ಬಸ್ ಯಾತ್ರೆ ಕೈಗೊಂಡಿದ್ದರು ಎಂದು ಶಾಸಕರು ಸ್ಮರಿಸಿದರು.

ಆಡಳಿತದಲ್ಲಿ ಪಾರದರ್ಶಕತೆ ಮತ್ತು ಉತ್ತಮ ಆಡಳಿತಕ್ಕೆ ಒತ್ತು ನೀಡಿದ ಕಾರಣ ಅವರ ಜನ್ಮದಿನವನ್ನು ದೇಶಾದ್ಯಂತ ಉತ್ತಮ ಆಡಳಿತ ದಿನವಾಗಿ ಆಚರಿಸಲಾಗುತ್ತಿದೆ. ಅಟಲ್ ಬಿಹಾರಿ ವಾಜಪೇಯಿ ಅವರ ಜೀವನ ಮೌಲ್ಯಗಳು ಹಾಗೂ ಚಿಂತನೆಗಳು ಇಂದಿನ ಹಾಗೂ ಮುಂದಿನ ಪೀಳಿಗೆಗೆ ಸದಾ ಪ್ರೇರಣೆಯಾಗಿವೆ ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ನಗರದ ಪಂಪ್ ಹೌಸ್ ಬಳಿ ಗಿಡ ನೆಡುವ ಮೂಲಕ ವಾಜಪೇಯಿ ಅವರ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಬಿಜೆಪಿ ತಾಲ್ಲೂಕು ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಪಕ್ಷದ ಪ್ರಧಾನ ಕಾರ್ಯದರ್ಶಿಗಳಾದ ಅಗ್ನಿ ಸೋಮಶೇಖರ್ ಹಾಗೂ ಮಧು ಬೊಮ್ಮನಕೆರೆ, ನಗರ ಅಧ್ಯಕ್ಷ ಲೋಕೇಶ್, ಕ್ಯಾನಹಳ್ಳಿ ವಾಸು, ಜೈಶಂಕರ್, ರಾಜ್‌ಕುಮಾರ್ ಸೇರಿದಂತೆ ಇನ್ನಿತರರಿದ್ದರು.

## ಮಗುವಿನೊಟ್ಟಿಗೆ ಮಗುವಾಗಿ ವಿದ್ಯೆ ಕಲಿಸುವವರೇ ನಿಜವಾದ ಶಿಕ್ಷಕರು: ಜಿ.ಎಸ್.ಸುಹಾಸಿನಿ

# ಸರ್ಕಾರಿ ಶಾಲೆಗಳಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ

• ಪ್ರಜೋದಯ ವರದಿ



**ಹಾಸನ:** ಶಾಲಾ ಮಕ್ಕಳ ಮುಗ್ಧತೆಯನ್ನರಿತು ಮಗುವಿನೊಟ್ಟಿಗೆ ಮಗುವಾಗಿ ವಿದ್ಯೆ ಕಲಿಸುವವರೇ ನಿಜವಾದ ಶಿಕ್ಷಕರು ಎಂದು ಸಾಣೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಪ್ರಭಾರಿ ಮುಖ್ಯೋಪಾಧ್ಯಾಯಿನಿ ಜಿ.ಎಸ್.ಸುಹಾಸಿನಿ ಅವರು ಅಭಿಪ್ರಾಯಪಟ್ಟರು.

ತಾಲ್ಲೂಕಿನ ಸಾಣೇನಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಏರ್ಪಡಿಸಿದ್ದ ಶಾಲಾ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಮ್ಮ ಸರ್ಕಾರಿ ಶಾಲೆಗಳಲ್ಲಿ ಇಲಾಖೆಯ ಎಲ್ಲಾ ಶೈಕ್ಷಣಿಕ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದರೊಂದಿಗೆ ಉತ್ತಮ ಸಂಸ್ಕಾರ ಬೆಳೆಸಲಾಗುತ್ತಿದೆ. ವಿದ್ಯಾರ್ಥಿಗಳ ಸರ್ವತೋಮುಖ ಪ್ರಗತಿಗೆ ಶ್ರಮಿಸುತ್ತಿರುವುದಾಗಿ ತಿಳಿಸಿದರು.

ಚುಟುಕು ಸಾಹಿತ್ಯ ಪರಿಷತ್ ಜಿಲ್ಲಾ ಅಧ್ಯಕ್ಷ ಬಾ.ನಂ.ಲೋಕೇಶ್ ಮಾತನಾಡಿ, ಗ್ರಾಮೀಣ ಪ್ರದೇಶದ ಮುಗ್ಧ ಜನರ ಮಕ್ಕಳಿಗೆ ಪ್ರೋತ್ಸಾಹದಾಯಕ ಶಿಕ್ಷಣ ನೀಡುವಲ್ಲಿ ಶಿಕ್ಷಕರು ಸೇವಾ ನಿಷ್ಠೆ ತೋರಿಸಬೇಕು. ಪ್ರತಿ ಮಕ್ಕಳು ಒಂದಿಲ್ಲೊಂದು ಪ್ರತಿಭೆಯನ್ನು ಹೊಂದಿರುತ್ತಾರೆ. ಅದನ್ನು ಹೆಕ್ಕಿ ತೆಗೆದು ಪ್ರದರ್ಶನಕ್ಕೆ ವೇದಿಕೆ ನಿರ್ಮಾಣ ಮಾಡಿಕೊಟ್ಟದ್ದೇ ಆದಲ್ಲಿ ವಿದ್ಯಾರ್ಥಿಗಳ ಸರ್ವತೋಮುಖ ಪ್ರಗತಿಗೆ ನಾಂದಿ ಹಾಡಿದಂತೆಯೇ ಸರಿ. ಇಂತಹ ಉತ್ತಮ ಕೆಲಸ ಸಾಣೇನಹಳ್ಳಿ ಶಾಲೆಯ ಶಿಕ್ಷಕರಿಂದ ಆಗುತ್ತಿದೆ ಎಂಬುದಕ್ಕೆ ಇಂದಿನ ದಿನಗಳಲ್ಲಿ ವಿದ್ಯಾರ್ಥಿಗಳು ಪ್ರದರ್ಶಿಸುತ್ತಿರುವ ಚಟುವಟಿಕೆಗಳು ಸಾಕ್ಷೀಕರಿಸುತ್ತವೆ ಎಂದು ತಿಳಿಸಿದರು.

ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷೆ ಚೈತ್ರ ನಾಯಕರಹಳ್ಳಿ ಅವರು, ಶಾಲೆಗಳ ಸಬಲೀಕರಣವಾಗಲು ಪೋಷಕರು ಹಾಗೂ ಸಮುದಾಯ ಕೈ ಜೋಡಿಸಬೇಕು. ಉತ್ತಮ ಶಿಕ್ಷಕರಿರುವ ಶಾಲೆ ಪ್ರಜ್ವಲಿಸುತ್ತದೆ. ಸೇವಾ ವೃತ್ತಿ ಎನಿಸಿಕೊಂಡಿರುವ ಶಿಕ್ಷಕ ವೃತ್ತಿಯನ್ನು ದೇವರ ಪೂಜೆಯಂತೆ ನಿಷ್ಠೆಯಿಂದ ಮಾಡುವ ಶಿಕ್ಷಕರು ಇಂದು ಸರ್ಕಾರಿ ಶಾಲೆಯಲ್ಲಿ ಕಾರ್ಯತತ್ಪರರಾಗಿದ್ದಾರೆ ಎಂದರು.

ಆಚಾರ್ಯ ಕಾಮರ್ಸ್ ಕಾಲೇಜಿನ ಪ್ರಾಶುಪಾಲ ಡಾ. ಆದರ್ಶ ಅವರು ಮಾತನಾಡಿ, ಹಳ್ಳಿಯಲ್ಲಿ ಬೆಳೆದವರೇ ಡೆಲ್ಲಿಯವರೆಗೆ ಹೋಗುವುದರೊಂದಿಗೆ ಅಲ್ಲಿ ತನ್ನ ಛಾಪನ್ನು ಮೂಡಿಸುವ ಪ್ರತಿಭಾವಂತರಾಗುತ್ತಾರೆ. ಜನಿಸಿದ ಯಾವ ಮಕ್ಕಳೂ ದಡ್ಡರಲ್ಲ, ಎಲ್ಲರನ್ನೂ ಬುದ್ಧಿವಂತರನ್ನಾಗಿ ಮಾಡುವ ಶಕ್ತಿ ಶಿಕ್ಷಕರಿಗಿದೆ ಎಂಬುದು ಈ ಶಾಲೆಯ ಶಿಕ್ಷಕರಿಂದ ಗೋಚರವಾಗುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ನಾಯಕರಹಳ್ಳಿ ಮಂಜೇಗೌಡ ಮಾತನಾಡಿ, ಶಿಕ್ಷಕರು ಮತ್ತು ಮಕ್ಕಳ ನಡುವಿನ ಆರೋಗ್ಯ ಕರ ಬಾಂಧವ್ಯ ಬೆಳೆಯಲು ಪೋಷಕರು ಸಹಕಾರಿಯಾಗಿದ್ದಾರೆ. ಇದು ಸಂಬಲಗೊಳ್ಳಲು ಪೂರಕವಾಗಿವೆ ಎಂದು ತಿಳಿಸಿದರು.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಹಾಗೂ ಪೋಷಕರನ್ನು ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ವಿದ್ಯಾರ್ಥಿಗಳಿಂದ ನಡೆದ ನೃತ್ಯ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ನೆರೆದಿದ್ದ ಎಲ್ಲರ ಮನಗೆದ್ದಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎಸ್ ಡಿ ಎಂ ಸಿ ಅಧ್ಯಕ್ಷೆ ವಿಧ್ಯಾರಾಣಿ, ಶಿಕ್ಷಕರಾದ ಸುರೇಶ, ಕುಮಾರಸ್ವಾಮಿ, ಕೆ.ಎಸ್.ಸುರೇಶ, ಕುಮಾರಸ್ವಾಮಿ ಐ.ಸಿ., ಎಸ್.ಡಿ. ಎಂ.ಸಿ. ಉಪಾಧ್ಯಕ್ಷ ಪುಟ್ಟರಾಜು, ಪ್ರೌಢ ಶಾಲಾ ಶಿಕ್ಷಕ ಮಂಜುನಾಥ್, ಶಿಕ್ಷಕರ ಸಂಘದ ಉಪಾಧ್ಯಕ್ಷ ಗುಡುಗನಹಳ್ಳಿ ಮಂಜುನಾಥ್, ಸಂಘದ ನಿರ್ದೇಶಕರು, ಪೋಷಕರು ಉಪಸ್ಥಿತರಿದ್ದರು.

# ದೆಹಲಿಯಲ್ಲಿ ಅಟಲ್ ಕ್ಯಾಂಟೀನ್ ಆರಂಭ

• ಪ್ರಜೋದಯ ವರದಿ



**ನವದೆಹಲಿ:** ಕರ್ನಾಟಕದಲ್ಲಿರುವ ಇಂದಿರಾ ಕ್ಯಾಂಟೀನ್‌ನಂತೆ ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಇಂದಿನಿಂದ 'ಅಟಲ್ ಕ್ಯಾಂಟೀನ್' ಆರಂಭಿಸಲಾಗಿದೆ. ನಗರದಾದ್ಯಂತ 100 ಸ್ಥಳಗಳಲ್ಲಿ ಕೇವಲ 5 ರೂ.ಗೆ ಪೌಷ್ಟಿಕಾಂಶದ ಊಟವನ್ನು ಒದಗಿಸಲು ಅಟಲ್ ಕ್ಯಾಂಟೀನ್‌ಗಳನ್ನು ದೆಹಲಿ ಸರ್ಕಾರ ಆರಂಭಿಸಿದೆ.

ಪ್ರಧಾನಮಂತ್ರಿ ಅಟಲ್ ಬಿಹಾರಿ ವಾಜಪೇಯಿ ಅವರ 101 ನೇ ಜನ್ಮದಿನದ ಸ್ಮರಣಾರ್ಥ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಅವರು ಬಡವರು, ಕಾರ್ಮಿಕರು ಮತ್ತು ಕಡಿಮೆ ಆದಾಯದ ಕುಟುಂಬಗಳಿಗೆ ಗುಣಮಟ್ಟದ ಆಹಾರವನ್ನು ಒದಗಿಸುವ ಉದ್ದೇಶದಿಂದ 100 ಅಟಲ್ ಕ್ಯಾಂಟೀನ್‌ಗಳನ್ನು ಪ್ರಾರಂಭಿಸಿದ್ದಾರೆ.

ಅಟಲ್ ಕ್ಯಾಂಟೀನ್ ದೆಹಲಿಯ ಆತ್ಮವಾಗಲಿದೆ, ಯಾರೂ ಹಸಿವಿನಿಂದ ಮಲಗಬಾರದು ಎಂಬ ಉದ್ದೇಶದಿಂದ ಇದನ್ನು ಸ್ಥಾಪಿಸಲಾಗಿದೆ ಎಂದು ಅವರು ಹೇಳಿದ್ದಾರೆ.

**ಮೆನುವಿನಲ್ಲಿ ಏನಿದೆ?** ದೆಹಲಿಯಾದ್ಯಂತ 45 ಅಟಲ್ ಕ್ಯಾಂಟೀನ್‌ಗಳು ಇಂದು ಪ್ರಾರಂಭವಾಗಿವೆ. ಉಳಿದ 55 ಕ್ಯಾಂಟೀನ್‌ಗಳು ಮುಂದಿನ ದಿನಗಳಲ್ಲಿ ಉದ್ಘಾಟನೆಗೊಳ್ಳಲಿವೆ. ಈ ಕ್ಯಾಂಟೀನ್‌ಗಳಲ್ಲಿ ದಿನಕ್ಕೆ ಎರಡು ಊಟಗಳನ್ನು ನೀಡುತ್ತವೆ - ಬೆಳಿಗ್ಗೆ 11 ರಿಂದ ಸಂಜೆ 4 ರ ನಡುವೆ ಮತ್ತು ಸಂಜೆ 6:30 ರಿಂದ 9:30 ರ ನಡುವೆ ಸುಮಾರು 500 ಜನರಿಗೆ ಥಾಲಿ ಊಟ ಇರುತ್ತದೆ. ಇದರಲ್ಲಿ ದಾಲ್, ಅನ್ನ, ಚಪಾತಿ ಜೊತೆಗೆ ತರಕಾರಿ ಪಲ್ಯ ಮತ್ತು ಉಪ್ಪಿನ ಕಾಯಿ ಸಹ ಇರುತ್ತದೆ.

**ಕೇವಲ 5 ರೂ.ಗೆ ಥಾಲಿ**

**ಊಟ ವಿತರಣೆಗಾಗಿ ಡಿಜಿಟಲ್ ಟೋಕನ್ ವ್ಯವಸ್ಥೆ:**

ಊಟದ ವಿತರಣೆಗಾಗಿ ದೆಹಲಿ ಸರ್ಕಾರ ಡಿಜಿಟಲ್ ಟೋಕನ್ ವ್ಯವಸ್ಥೆಯನ್ನು ಪರಿಚಯಿಸಿದೆ. ಮನುಷ್ಯರಿಂದ ಕೂಪನ್ ಕೊಡುವ ಬದಲು ಡಿಜಿಟಲ್ ಕೂಪನ್ ವ್ಯವಸ್ಥೆ ಮಾಡಲಾಗಿದೆ.

ದೆಹಲಿ ಅರ್ಬನ್ ಶೆಲ್ಟರ್ ಇಂಪ್ರೂವ್‌ಮೆಂಟ್ ಬೋರ್ಡ್‌ನ ಡಿಜಿಟಲ್ ಪ್ಲಾಟ್‌ಫಾರ್ಮ್ ಮೂಲಕ ಕ್ಯಾಮೆರಾಗಳು ಎಲ್ಲಾ ಕೇಂದ್ರಗಳನ್ನು ಮೇಲ್ವಿಚಾರಣೆ ಮಾಡುತ್ತವೆ.

# ಲಖನೌದಲ್ಲಿ ರಾಷ್ಟ್ರೀಯ ಪ್ರೇರಣಾ ಸ್ಥಳ ಲೋಕಾರ್ಪಣೆ

## ಅಟಲ್ ಬಿಹಾರಿ ವಾಜಪೇಯಿ ಜನ್ಮ ದಿನದ ಕೊಡುಗೆ | ನಾಯಕರ ಕೊಂಡಾಡಿದ ಮೋದಿ

• ಪ್ರಜೋದಯ ವರದಿ

**ಲಖನೌ:** ಭಾರತ ರತ್ನ, ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಜನ್ಮ ದಿನದ ಅಂಗವಾಗಿ ಗುರುವಾರ ಪ್ರಧಾನಿ ನರೇಂದ್ರ ಮೋದಿ ಅವರು ರಾಷ್ಟ್ರೀಯ ಪ್ರೇರಣಾ ಸ್ಥಳವನ್ನು ಲೋಕಾರ್ಪಣೆ ಗೊಳಿಸಿದರು.

ವಿಸ್ತಾರವಾದ ಸಂಕೀರ್ಣವು ವಾಜಪೇಯಿ ಅವರೊಂದಿಗೆ ಬಿಜೆಪಿಯ ಸಂಸ್ಥಾಪಕ ಶಾಮ ಪ್ರಸಾದ್ ಮುಖರ್ಜಿ ಮತ್ತು ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ 65 ಅಡಿ ಎತ್ತರದ ಕಂಚಿನ ಪ್ರತಿಮೆಗಳನ್ನು ಒಳಗೊಂಡಿದೆ.

ಅತ್ಯಾಧುನಿಕ ವಸ್ತು ಸಂಗ್ರಹಾಲಯವನ್ನು ಕಮಲದ ಆಕಾರದ ರಚನೆಯಲ್ಲಿ ವಿನ್ಯಾಸ ಗೊಳಿಸಲಾಗಿದೆ. 98,000 ಚದರ ಅಡಿ ಪ್ರದೇಶ ದಲ್ಲಿದೆ. ದೇಶ ನಿರ್ಮಾಣಕ್ಕೆ ಈ ನಾಯಕರ ಕೊಡುಗೆಗ ಳನ್ನು ತಿಳಿಯಲು ಪ್ರವಾಸಿಗರಿಗೆ ಅವಕಾಶ ನೀಡುತ್ತದೆ. ರಾಷ್ಟ್ರೀಯ ಪ್ರೇರಣಾ ಸ್ಥಳ ಉದ್ಘಾಟನೆ ನಂತರ ಇತರ ನಾಯಕ ರೊಂದಿಗೆ ಸಂಕೀರ್ಣದೊಳಗೆ ಇರುವ ವಸ್ತು ಸಂಗ್ರಹಾಲಯಕ್ಕೆ ಭೇಟಿ ನೀಡಿದ ಪ್ರಧಾನಿ ಮೋದಿ, ವಾಜಪೇಯಿ, ಶ್ಯಾಮ ಪ್ರಸಾದ್ ಮುಖರ್ಜಿ ಮತ್ತು ಪಂಡಿತ್ ದೀನದಯಾಳ್ ಉಪಾಧ್ಯಾಯ ಅವರ ಜೀವನ ಮತ್ತು ಕೊಡುಗೆಗಳನ್ನು ಬಿಂಬಿಸುವ ಪ್ರದರ್ಶನ ವೀಕ್ಷಿಸಿದರು.





**230 ಕೋಟಿ ರೂ. ವೆಚ್ಚದಲ್ಲಿ ನಿರ್ಮಾಣ**

ರಾಷ್ಟ್ರೀಯ ಪ್ರೇರಣಾ ಸ್ಥಳವನ್ನು 230 ಕೋಟಿ ರೂ. ಅಂದಾಜು ವೆಚ್ಚದಲ್ಲಿ 65 ಎಕರೆ ಪ್ರದೇಶದಲ್ಲಿ ನಿರ್ಮಾಣ ಮಾಡಲಾಗಿದೆ. ಈ ಸ್ಮಾರಕ ರಾಷ್ಟ್ರೀಯ ಪ್ರಾಮುಖ್ಯತೆಯ ಸ್ಫೂರ್ತಿದಾಯಕ ಸಂಕೀರ್ಣವಾಗಿದೆ. ಪ್ರಸ್ತುತ ಮತ್ತು ಭವಿಷ್ಯದ ಪೀಳಿಗೆಗೆ ಪ್ರೇರಣೆಯ ಸ್ಥಳ ಎನ್ನಲಾಗಿದೆ. ಇದು ಭಾರತದ ರಾಜಕೀಯ ಚಿಂತನೆ ಮತ್ತು ಸಾರ್ವಜನಿಕ ಜೀವನವನ್ನು ರೂಪಿಸುವಲ್ಲಿ ವಾಜಪೇಯಿ, ಮುಖರ್ಜಿ ಮತ್ತು ಉಪಾಧ್ಯಾಯರ ಪ್ರಮುಖ ಪಾತ್ರವನ್ನು ಪ್ರತಿಬಿಂಬಿಸುತ್ತದೆ.

**ಪ್ರತಿಮೆಗಳು ರಾಷ್ಟ್ರಕ್ಕೆ ಸ್ಫೂರ್ತಿ**

ರಾಷ್ಟ್ರೀಯ ಪ್ರೇರಣಾ ಸ್ಥಳ ಭಾರತವನ್ನು ಸ್ವಾಭಿಮಾನ, ಏಕತೆ ಮತ್ತು ಸೇವೆಯ ಹಾದಿಯಲ್ಲಿ ಮುನ್ನಡೆಸುವ ದೃಷ್ಟಿಯನ್ನು ಪ್ರತಿನಿಧಿಸುತ್ತದೆಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದರು.

ಡಾ.ಶಾಮ ಪ್ರಸಾದ್ ಮುಖರ್ಜಿ, ಪಂಡಿತ್ ದೀನದಯಾಳ್ ಉಪಾಧ್ಯಾಯ ಮತ್ತು ಅಟಲ್ ಬಿಹಾರಿ ಅವರ ಅತ್ಯುನ್ನತ ಪ್ರತಿಮೆಗಳು ರಾಷ್ಟ್ರಕ್ಕೆ ಸ್ಫೂರ್ತಿಯಾಗಿವೆ. ನಮ್ಮ ಪ್ರತಿ ಯೊಂದು ಹೆಜ್ಜೆ, ಪ್ರತಿ ಪ್ರಯತ್ನವೂ ರಾಷ್ಟ್ರ ನಿರ್ಮಾಣಕ್ಕೆ ಸಮರ್ಪಿತವಾಗಿರಬೇಕೆಂಬ ಸಂದೇಶ ವನ್ನು ಸ್ಫೂರ್ತಿ ತಾಣವು ನೀಡುತ್ತದೆಂದರು.

ಈ ಪ್ರೇರಣಾ ಸ್ಥಳವನ್ನು ನಿರ್ಮಿಸಿರುವ 30 ಎಕರೆಗೂ ಹೆಚ್ಚಿನ ಜಾಗ ಹಲವು ದಶಕಗಳಿಂದ ಕಸದಿಂದ ತುಂಬಿತ್ತು. ಕಳೆದ ಮೂರು ವರ್ಷಗಳಲ್ಲಿ ಸಂಪೂರ್ಣವಾಗಿ ತೆರವುಗೊಳಿಸಲಾಗಿದೆ. ಈ ಯೋಜನೆಗೆ ಸಂಬಂಧಿಸಿದ ಎಲ್ಲಾ ಕಾರ್ಮಿಕರು, ಕುಶಲಕರ್ಮಿಗಳಿಗೆ ಅಭಿನಂದನೆ ಸಲ್ಲಿಸುತ್ತೇನೆ. ಭಾರತದಲ್ಲಿ ಎರಡು ಸಂವಿಧಾನಗಳು, ಎರಡು ಧ್ವಜಗಳು ಮತ್ತು ಇಬ್ಬರು ಮುಖ್ಯಸ್ಥರನ್ನು ಡಾ.ಶಾಮ ಪ್ರಶಾದ್ ಮುಖರ್ಜಿ ತಿರಸ್ಕರಿಸಿದ್ದರು. ಸ್ವಾತಂತ್ರ್ಯ ನಂತರವೂ ಜಮ್ಮು ಮತ್ತು ಕಾಶ್ಮೀರದಲ್ಲಿ ಈ ವ್ಯವಸ್ಥೆ ಇದದ್ದು, ಭಾರತದ ಸಮಗ್ರತೆಗೆ ದೊಡ್ಡ ಸವಾಲಾಗಿತ್ತು. ಬಿಜೆಪಿ ಸರ್ಕಾರ 370 ನೇ ವಿಧಿಯ ಗೋಡೆಯನ್ನು ಕಿತ್ತೊಗೆದಿದೆ ಎಂದರು.

ಭಾರತದಲ್ಲಿ ತಯಾರಿಸಿದ ವಸ್ತುಗಳು ಪ್ರಪಂಚದ ಮೂಲೆ ಮೂಲೆಗಳನ್ನು ತಲುಪು ತ್ತಿವೆ. ಉತ್ತರ ಪ್ರದೇಶದಲ್ಲಿಯೂ ಇಂತಹ ಒಂದು ಜಿಲ್ಲೆ ಒಂದು ಉತ್ಪನ್ನ ಅಭಿಯಾನ ನಡೆ ಯುತ್ತಿದೆ. ಸಣ್ಣ ಕೈಗಾರಿಕೆಗಳು ಮತ್ತು ಸಣ್ಣ ಘಟಕಗಳ ಸಾಮರ್ಥ್ಯ ಹೆಚ್ಚುತ್ತಿದೆ. ಉತ್ತರ ಪ್ರದೇಶದಲ್ಲಿ ಬೃಹತ್ ರಕ್ಷಣಾ ಕಾರಿಡಾರ್ ನಿರ್ಮಾಣವಾಗುತ್ತಿದೆ. ಆಪರೇಷನ್ ಸಿಂಧೂರ ಸಮಯದಲ್ಲಿ ಜಗತ್ತು ಕಂಡ ಪರಾಕ್ರಮದ ಬ್ರಹ್ಮೋಸ್ ಕ್ಷಿಪಣಿಯನ್ನು ಈಗ ಲಕ್ನೋದಲ್ಲಿ ತಯಾರಿಸಲಾಗುತ್ತಿದೆ. ಉತ್ತರ ಪ್ರದೇಶದ ರಕ್ಷಣಾ ಕಾರಿಡಾರ್ ರಕ್ಷಣಾ ಉತ್ಪಾದನೆಗೆ ಜಾಗತಿಕವಾಗಿ ಹೆಸರುವಾಸಿಯಾಗುವ ದಿನ ದೂರವಿಲ್ಲ. ದಶಕಗಳ ಹಿಂದೆ ದೀನದಯಾಳ್ ಉಪಾಧ್ಯಾಯ ಅವರು ಅಂತ್ಯೋದಯ ಕನಸು ಕಂಡಿದ್ದರು. ಕೊನೆಯ ಸಾಲಿನಲ್ಲಿ ನಿಂತಿರುವ ವ್ಯಕ್ತಿಯ ಮುಖದ ನಗುವಿನಿಂದಲೇ ಭಾರತದ ಪ್ರಗತಿ ಇದೆ ಎನ್ನುತ್ತಿದ್ದರು. ದೀನದಯಾಳ್‌ಜಿಯವರ ಕನಸನ್ನು ಸಂಕಲ್ಪವನ್ನಾಗಿಸಿಕೊಂಡಿರುವುದಾಗಿ ತಿಳಿಸಿದರು.

ಇಂದು ಡಿಜಿಟಲ್ ಗುರುತಿನ ಬಗ್ಗೆ ತುಂಬಾ ಚರ್ಚೆ ನಡೆಯುತ್ತಿದೆ. ಅದಕ್ಕೆ ಬುನಾದಿ ಹಾಕಿದ್ದು ಅಟಲ್ ಬಿಹಾರಿ ವಾಜಪೇಯಿ ಅವರ ಸರ್ಕಾರ. ಅವರ ಕಾಲದಲ್ಲಿ ಆರಂಭವಾದ ವಿಶೇಷ ಕಾರ್ಡ್‌ನ ಕೆಲಸ ಈಗ ಆಧಾರ್ ಎಂದು ವಿಶ್ವಪ್ರಸಿದ್ಧವಾಗಿದೆ. ಭಾರತದಲ್ಲಿ ಟೆಲಿಕಾಂ ಕ್ರಾಂತಿಯ ವೇಗವನ್ನು ಹೆಚ್ಚಿಸಿದ ಶ್ರೇಯಸ್ಸು ಅಟಲ್‌ಗೆ ಸಲ್ಲುತ್ತದೆ. ಅವರ ಸರ್ಕಾರ ರೂಪಿಸಿದ ಟೆಲಿಕಾಂ ನೀತಿಯು ಪ್ರತಿ ಮನೆಗೆ ಫೋನ್ ಮತ್ತು ಇಂಟರ್‌ನೆಟ್ ಅನ್ನು ಸುಲಭವವಾಗಿ ತರಲು ಸಾಧ್ಯವಾಯಿತು. ಇಂದು ಭಾರತವು ವಿಶ್ವದಲ್ಲಿ ಅತಿ ಹೆಚ್ಚು ಮೊಬೈಲ್ ಮತ್ತು ಇಂಟರ್‌ನೆಟ್ ಬಳಕೆದಾರರನ್ನು ಹೊಂದಿರುವ ದೇಶಗಳಲ್ಲಿ ಒಂದಾಗಿದೆ ಎಂದರು.

# ಕಾಂಗ್ರೆಸ್‌ಗೆ ಟಕ್ಕರ್ ಕೊಡಲು ಅಖಾಡಕ್ಕಿಳಿದ ದೇವೇಗೌಡರು

» ಮೊದಲನೇ ಪುಟದಿಂದ

ಮಾತನಾಡಿದದೇವೇಗೌಡ ಅವರು, ಕಾಂಗ್ರೆಸ್ ನಾಯಕರು ಹಾಸನದಲ್ಲಿ 70 ರಿಂದ 80 ಸಾವಿರ ಜನರನ್ನು ಸೇರಿಸಿ ದೇವೇಗೌಡರನ್ನು ಅಥವಾ ಹಾಸನ ಜಿಲ್ಲೆಯನ್ನು ಮುಗಿಸುವ ಉದ್ದೇಶದಿಂದ ಸಮಾವೇಶ ನಡೆಸಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು.

ಜೆಡಿಎಸ್ ಕೂಡ ಶೀಘ್ರದಲ್ಲೇ ಬೃಹತ್ ಸಮಾವೇಶ ನಡೆಸಲಿದ್ದು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಮಾಜಿ ಸಚಿವ ಎಚ್.ಡಿ. ರೇವಣ್ಣ ಹಾಗು ಜಿಲ್ಲೆಯ ಶಾಸಕರು ಮತ್ತು ಮುಖಂಡರೊಂದಿಗೆ ಚರ್ಚಿಸಿ ದಿನಾಂಕ ನಿಗದಿಪಡಿಸಲಾಗುವುದೆಂದು ತಿಳಿಸಿದ್ದಾರೆ.

**ಮುಖಂಡರೊಂದಿಗೆ ಕುಮಾರಸ್ವಾಮಿ ಸಂಪರ್ಕ**

ಇತ್ತೀಚೆಗೆ ಕೇಂದ್ರದ ಮಾಜಿ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಸಹ ಪದೇ ಪದೇ ಜಿಲ್ಲೆಗೆ ಭೇಟಿ ನೀಡಿ ಪಕ್ಷದ ಮುಖಂಡರೊಂದಿಗೆ ಚರ್ಚೆ ನಡೆಸುತ್ತಿದ್ದಾರೆ. ಭಾನುವಾರಷ್ಟೇ ಚಿಕ್ಕಮಗಳೂರಿಗೆ ತೆರಳುವ ಮಾರ್ಗ ಮಧ್ಯೆ ಶಾಸಕ ಹೆಚ್.ಪಿ.ಸ್ವರೂಪ್ ಅವರ ನಿವಾಸದಲ್ಲಿ ಸ್ಥಳೀಯ ನಾಯಕರು ಹಾಗು ಕಾರ್ಯಕರ್ತರೊಂದಿಗೆ ಸಭೆ ನಡೆಸಿದ ಅವರು, ಕಾಂಗ್ರೆಸ್ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದರು. ಕಾಂಗ್ರೆಸ್ ಜಿಲ್ಲೆಯಲ್ಲಿ ಉತ್ಸಾಹದಿಂದ ಸಭೆಗಳನ್ನು ನಡೆಸುತ್ತಿದೆ. ಇದಕ್ಕೆ ತಕ್ಕಂತೆ ಜೆಡಿಎಸ್ ಕೂಡ ಮುಂದಿನ ದಿನಗಳಲ್ಲಿ ಸಂಘಟನೆಗೆ ಹೆಚ್ಚಿನ ಒತ್ತು ನೀಡಲಿದೆ ಎಂದು ಅವರು ಹೇಳಿದ್ದರು.

ಲೋಕಸಭಾ ಚುನಾವಣೆ ಬಳಿಕ ಜೆಡಿಎಸ್‌ನಲ್ಲಿ ಮೂಡಿದ್ದ ಮುಸುಕಿನ ವಾತಾವರಣ ಇದೀಗ ದೇವೇಗೌಡರು ಹಾಗು ಕುಮಾರಸ್ವಾಮಿ ಅವರ ಹೇಳಿಕೆಗಳಿಂದ ಹೊಸ ಉತ್ಸವ ಮೂಡುತ್ತಿದೆ. ಜನವರಿಯಲ್ಲಿ ನಡೆಯಲಿರುವ ಬೃಹತ್ ಸಮಾವೇಶವು ಕಾರ್ಯಕರ್ತರಲ್ಲಿ ಹುರುಪು ಮೂಡಿಸುವ ಜೊತೆಗೆ, ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಪಕ್ಷವನ್ನು ಸಜ್ಜುಗೊಳಿಸುವಲ್ಲಿ ಮಹತ್ವದ ಪಾತ್ರ ವಹಿಸುವ ನಿರೀಕ್ಷೆ ವ್ಯಕ್ತವಾಗಿದೆ.

# ಕಾಡಾನೆಗಳ ದಾಂಧಲೆ, ಭೀಮನ ಓಡಾಟಕ್ಕೆ ರೈತರು ಹೈರಾಣು

» ಮೊದಲನೇ ಪುಟದಿಂದ

ಗುಂಪಿನ ಒಂಟಿ ಕಾಡಾನೆಯೊಂದು ನಮ್ಮನ್ನು ಬೆನ್ನತ್ತಿದ್ದು ಕೂದಲೆಳೆ ಅಂತರದಲ್ಲಿ ಪಾರಾಗಿದ್ದೇವೆಂದು ರೈತರಾದ ಗಂಗಾಧರ, ಯುವರಾಜ ಅವರು ಅಳಲು ತೋಡಿಕೊಂಡಿದ್ದಾರೆ.

15 ಎಕರೆ ಗದ್ದೆಯಲ್ಲಿ ಬೆಳೆದಿದ್ದ ಭತ್ತದ ಪೈರನ್ನು ಕಾಡಾನೆಗಳು ತಿಂದು, ತುಳಿದು ಬಂಜರು ಭೂಮಿಯನ್ನಾಗಿಸಿವೆ. ಇನ್ನೇನು ಮುಂದಿನ ವಾರದಲ್ಲಿ ಕೊಯ್ಲು ಆರಂಭಿಸಬೇಕು ಅನ್ನುವಷ್ಟರಲ್ಲಿ ಕಾಡಾನೆಗಳು ದಾಂಧಲೆ ನಡೆಸಿರುವುದರಿಂದ ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ ಎಂದು ರೈತರು ಸಮಸ್ಯೆ ಹೇಳಿಕೊಂಡಿದ್ದಾರೆ.

ಮಲೆನಾಡು ಭಾಗದಲ್ಲಿ ಕೃಷಿಯನ್ನೇ ಅವಲಂಬಿಸಿಕೊಂಡ ಜೀವನ ಕಟ್ಟಿಕೊಂಡಿದ್ದರೂ ಮಿತಿ ಮೀರಿದ ಕಾಡಾನೆಗಳ ಹಾವಳಿಯಿಂದ ನಿತ್ಯ ಉಸಿರುಗಟ್ಟುವ ಸ್ಥಿತಿಯಲ್ಲಿ ದಿನ ದೂಡುವಂತಾಗಿದೆ. ಅರಣ್ಯ ಇಲಾಖೆ ಈ ಬಗ್ಗೆ ಗಮನ ಹರಿಸುವಂತೆ ಒತ್ತಾಯಿಸಿದ್ದಾರೆ.

ಸಕಲೇಶಪುರ ತಾಲ್ಲೂಕಿನ ಹೆತ್ತೂರು ಮತ್ತು ಯಸಳೂರು ಹೋಬಳಿಯ ಐಗೂರು ಗ್ರಾಮದ ಹಳೆ ನರ್ಸರಿ, ಹಳ್ಳಿಯೂರು ಗ್ರಾಮದ ಏಕರೆಸಾರ್ಟ್ ಹಿಂಭಾಗವಿರುವ ಪ್ಲಾಂಟೇಷನ್, ಕಡ್ರಳ್ಳಿ ಗ್ರಾಮದ ಹೆಗ್ಗಿ ಬೆಟ್ಟ, ಕಿರ್ಕಳ್ಳಿ ಗ್ರಾಮದ ಒಂಟಿಗದ್ದೆ, ಜೇಡಿಗದ್ದೆ, ಸುತ್ತಮುತ್ತ ಕಾಡಾನೆಗಳ ಗುಂಪು ಕಂಡುಬಂದಿವೆ.



ಕೋಳಿ ಸಾಕಾಣಿಕೆದಾರ ರೈತರ ಕ್ಷೇಮಾಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ಚಂದ್ರಶೇಖರ್ ಅವರನ್ನು ಜಿಲ್ಲಾ ಪತ್ರಕರ್ತರ ಸಂಘದಿಂದ ಸನ್ಮಾನಿಸಲಾಯಿತು. ಸಂಘದ ಅಧ್ಯಕ್ಷರಾದ ಜೆ.ಆರ್.ಕೆಂಚೇಗೌಡ, ಉಪಾಧ್ಯಕ್ಷ ಜಿ.ಪ್ರಕಾಶ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಪ್ರಕಾಶ್, ಅತೀಕ್ ಇದ್ದರು.

# ಮುಖ್ಯಮಂತ್ರಿ ಕುರ್ಚಿಗಾಗಿ ಹೋರಾಟ ಅಚಲ

» ಮೊದಲನೇ ಪುಟದಿಂದ

ಆಹ್ವಾನ ಬಂದಿದ್ದು ಅವರು ತೆರಳುತ್ತಾರೆ. ನನ್ನನ್ನು ಕರೆದಿಲ್ಲವಾದ್ದರಿಂದ ಹೋಗುವುದಿಲ್ಲವೆಂದರು.

**ಭೇಟಿ ಗುಟ್ಟು ಬಿಟ್ಟುಕೊಡದ ಡಿ.ಕೆ.ಶಿ.**

ಎಐಸಿಸಿ ಅಧ್ಯಕ್ಷರ ಭೇಟಿ ವಿಚಾರವನ್ನು ಬಿಟ್ಟುಕೊಡದ ಶಿವಕುಮಾರ್ ಅವರು, ಕೇಂದ್ರವು ಜಾರಿಗೆ ತಂದಿ ರುವ ವಿಬಿ ಜಿ ರಾಮ್ ಜಿ ಕಾಯ್ದೆ ಕುರಿತು ಚರ್ಚಿಸಲು ಬಂದಿದ್ದೇನೆಂ ದರು. ರಾಜ್ಯ ಘಟಕದ ಮುಖ್ಯಸ್ಥರಾಗಿ ಕಾಂಗ್ರೆಸ್ ಅಧ್ಯಕ್ಷರೊಂದಿಗೆ ಚರ್ಚಿ ಸಲು ಬಂದಿದ್ದೆ. ಈ ಭೇಟಿಗೆ ವಿಶೇಷ ಅರ್ಥ ಕಲ್ಪಿಸುವ ಅವಶ್ಯಕತೆಯಿಲ್ಲ. ಮುಖ್ಯಮಂತ್ರಿ ಬದಲಾವಣೆ ಕುರಿತು ನಾನು ಯಾರೊಂದಿಗೂ ಮಾತನಾಡಿಲ್ಲ. ಹೈಕಮಾಂಡ್ ತೀರ್ಮಾನಕ್ಕೆ ಬದ್ಧವೆಂದು ಸಿದ್ದರಾಮಯ್ಯ ಹೇಳಿದ್ದಾರೆ. ಆ ಬಗ್ಗೆ ಹೆಚ್ಚು ಮಾತನಾಡು ವುದಿಲ್ಲವೆಂದರು.

ನಾನು ಪಕ್ಷದ ಆಜೀವ ಕಾರ್ಯಕರ್ತ. ಹುದ್ದೆ ಏನೇ ಇರಲಿ ಇಲ್ಲದೆ ಇರಲಿ ಕಾರ್ಯಕರ್ತನಾಗಿ ಶಾಶ್ವತವಾಗಿರುತ್ತೇನೆ. ಪಕ್ಷಕ್ಕಾಗಿ ಪೋಸ್ಟರ್ ಅಂಟಿಸುವುದು ಸೇರಿ ಎಲ್ಲಾ ಕೆಲಸ ಮಾಡಿದ್ದೇನೆ. ವೇದಿಕೆ ಮೇಲೆ ಕುಳಿತು ಭಾಷಣ ಮಾಡಲು ಬಂದಿಲ್ಲವೆಂದು ತೀಕ್ಷ್ಣವಾಗಿ ಹೇಳಿದರು.

# ಬಸ್ ದುರಂತ: 6 ಮಂದಿ ಸಜೀವ ದಹನ


## 28 ಜನರಿಗೆ ಗಾಯ: ಪ್ರಧಾನಿ ಮೋದಿ, ಸಿಎಂ ಸಿದ್ದರಾಮಯ್ಯ ಸಂತಾಪ

• ಪ್ರಜೋದಯ ವರದಿ

**ಬೆಂಗಳೂರು:** ಚಿತ್ರದುರ್ಗ ಹಿರಿಯೂರು ತಾಲ್ಲೂಕಿನ ಜವನಗೊಂಡನಹಳ್ಳಿ ಬಳಿ ಗುರುವಾರ ನಸುಕಿ ಜಾವ ನಡೆದ ಭೀಕರ ಅಪಘಾತದಲ್ಲಿ ಹಾಸನ ಜಿಲ್ಲೆಯ ಇಬ್ಬರು ಯುವತಿಯರು ಸೇರಿ ಒಟ್ಟು 6 ಜನರು ಸಜೀವದಹನವಾಗಿದ್ದಾರೆ. 28 ಮಂದಿ ಗಾಯಗೊಂಡಿದ್ದಾರೆ.

ಹಾಸನ ಜಿಲ್ಲೆ ಚನ್ನರಾಯಪಟ್ಟಣ ತಾಲ್ಲೂಕಿನ ನವ್ಯ, ಮಾನಸ ಹಾಗು ಬಿಂದು, ರಶ್ಮಿ ಮಹಲೆ, ಐದು ವರ್ಷದ ಮಗು ಗ್ರೇಯ ಮೃತರು ಎಂದು ಗುರುತಿಸಲಾಗಿದೆ. ಬಸ್‌ನಲ್ಲಿದ್ದ 5 ಮಂದಿ ಹಾಗು ಲಾರಿ ಚಾಲಕ ಸೇರಿ ಆರು ಮಂದಿ ಮೃತಪಟ್ಟಿದ್ದಾರೆಂದು ಐಜಿಪಿ ರವಿಕಾಂತೇಗೌಡ ಅವರು ತಿಳಿಸಿದ್ದಾರೆ.

ಕ್ಯಾಂಟರ್ ಡಿಕ್ಕಿ ಹೊಡೆದ ರಭಸಕ್ಕೆ ಸೀಬರ್ಡ್ ಸ್ಲೀಪರ್ (ನಾನ್ ಎಸಿ)- ಬಸ್ ಸುಟ್ಟು ಕರಕಲಾಗಿದೆ. ಸಜೀವವಾಗಿ ದಹನಗೊಂಡ ಐವರ ಮೃತದೇಹಗಳನ್ನು ಹೊರತೆಗೆಯಲಾಗಿದೆ. ಹರಿಯಾಣ ನೋಂದಣಿಯ ಕ್ಯಾಂಟರ್ ಚಾಲಕ ಕೂಡ ಮೃತಪಟ್ಟಿದ್ದಾನೆ. ಸ್ಥಳಕ್ಕೆ ಬಂದಿರುವ ವಿಧಿ ವಿಜ್ಞಾನ ಪ್ರಯೋಗಾಲಯ, ಬೆರಳಚ್ಚು ತಜ್ಞರು ಬಸ್‌ನಲ್ಲಿ ಸುಟ್ಟು ಹೋದ ವಸ್ತುಗಳನ್ನು ಸಂಗ್ರಹಿಸಿದ್ದಾರೆ. ಡಿಎನ್‌ಎ ಪರೀಕ್ಷೆಯ ನಂತರ ಮೃತಪಟ್ಟವರ ಸಂಖ್ಯೆ ಹಾಗು ಗುರುತು ಪತ್ತೆ ಯಾಗಲಿದೆ ಎಂದು ಪೊಲೀಸರು ತಿಳಿಸಿದ್ದಾರೆ.



ಬಸ್‌ಗೆ ಬೆಂಕಿ ಹೊತ್ತಿಕೊಳ್ಳುತ್ತಿದ್ದಂತೆ ಹಲವರು ಜಿಗಿದು ಪ್ರಾಣ ರಕ್ಷಣೆ ಮಾಡಿಕೊಂಡಿ ದ್ದಾರೆ. ಬೆಂಕಿ ಹೊತ್ತಿ ಉರಿಯುತ್ತಿದ್ದ ಕಾರಣ ಸ್ಥಳೀಯರು ಬಸ್ ಬಳಿ ತೆರಳಿ ರಕ್ಷಣೆ ಮಾಡಲು ಸಾಧ್ಯ ವಾಗಲಿಲ್ಲ. ಘಟನೆ ನಡೆದ 20 ನಿಮಿಷದಲ್ಲಿ ಸ್ಥಳಕ್ಕೆ ಬಂದ ಪೊಲೀಸರು ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲು ಮಾಡಿದರು. ಹಿರಿಯೂರು ತಾಲ್ಲೂಕು ಆಸ್ಪತ್ರೆಯಲ್ಲಿ 11, ತುಮಕೂರು ಜಿಲ್ಲೆ, ಶಿರಾ ಆಸ್ಪತ್ರೆಯಲ್ಲಿ 8, ಚಿತ್ರದುರ್ಗ ಬಸವೇಶ್ವರ ಆಸ್ಪತ್ರೆಯಲ್ಲಿ ಒಬ್ಬರು ಚಿಕಿತ್ಸೆ ಪಡೆಯುತ್ತಿದ್ದಾರೆ. ಬಸ್ ಚಾಲಕ ರಫೀಕ್, ಕ್ಲೀನರ್ ಮೊಹಮ್ಮದ್ ಸಾದಿಕ್ ಹಿರಿಯೂರು ಆಸ್ಪತ್ರೆಯಲ್ಲಿ ಇದ್ದಾರೆ.

### ರಾಜ್ಯದಿಂದ 5, ಕೇಂದ್ರದಿಂದ 2 ಲಕ್ಷ ರೂ. ಪರಿಹಾರ

ಬಸ್ ದುರಂತದಲ್ಲಿ ಮೃತಪಟ್ಟವರ ಕುಟುಂಬಗಳಿಗೆ ತಲಾ 5 ಲಕ್ಷ ಹಾಗೂ ಗಾಯಗೊಂಡವರಿಗೆ ತಲಾ 50,000 ಪರಿಹಾರ ನೀಡಲಾಗುವುದೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಅಪಘಾತದ ಬಗ್ಗೆ ಸೂಕ್ತ ತನಿಖೆ ನಡೆಸಿ, ಕಾರಣವನ್ನು ಪತ್ತೆಹಚ್ಚಲಾಗುವುದು. ಮೃತರ ಆತ್ಮಕ್ಕೆ ಶಾಂತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ. ಅಪಘಾತದಲ್ಲಿ ಮಡಿದ ಕುಟುಂಬಸ್ಥರ ದುಃಖದಲ್ಲಿ ನಾನೂ ಭಾಗಿ ಎಂದು ಹೇಳಿದ್ದಾರೆ. ಅಪಘಾತದಲ್ಲಿ ಮೃತಪಟ್ಟವರ ಕುಟುಂಬಕ್ಕೆ ಪ್ರಧಾನ ಮಂತ್ರಿ ಪರಿಹಾರ ನಿಧಿಯಿಂದ 2 ಲಕ್ಷ ನೀಡುವುದಾಗಿ ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ. ಅಪಘಾತದಲ್ಲಿ ಪ್ರೀತಿ ಪಾತ್ರರನ್ನು ಕಳೆದುಕೊಂಡವರಿಗೆ ಸಂತಾಪ ಸೂಚಿಸುತ್ತೇನೆ. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಹಾರೈಸಿದ್ದಾರೆ.

# ಅತ್ಯಾಚಾರ: ಬಾಲಕಿ ಮೇಲೆ ವ್ಯತಿರಿಕ್ತ ಪರಿಣಾಮ ಬೀರದಿರಲಿ

» ಮೊದಲನೇ ಪುಟದಿಂದ

ಸಾಂತ್ವನ ಹೇಳಿದ ನಂತರ ಅಧಿಕಾರಿಗಳೊಂದಿಗೆ ಸಭೆ ನಡೆಸಿದರು. ಇದೊಂದು ಹೇಯ ಕೃತ್ಯವಾಗಿದ್ದು, ಸಮಾಜವೇ ತಲೆ ತಗ್ಗಿಸುವಂತಾಗಿದೆ. ಇಂತಹ ಘಟನೆಯಿಂದ ಎಲ್ಲರೂ ಎಚ್ಚೆತ್ತುಕೊಳ್ಳಬೇಕಾಗಿದೆ. ಪ್ರಕರಣಕ್ಕೆ ಸಂಬಂಧಿಸಿ ಅಪ್ರಾಪ್ತ ವಿದ್ಯಾರ್ಥಿನಿಗೆ ಮಾನಸಿಕವಾಗಿ ಧೈರ್ಯ ತುಂಬುವ ಕೆಲಸವನ್ನು ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಮಾಡಬೇಕು. ವಿದ್ಯಾರ್ಥಿನಿಯ ಶಿಕ್ಷಣ ಕುಂಠಿತಗೊಳ್ಳದಂತೆ ಮಕ್ಕಳ ಸಮಗ್ರ ರಕ್ಷಣಾ ಘಟಕ, ಮಕ್ಕಳ ಕಲ್ಯಾಣ ಸಮಿತಿ ಹಾಗು ಶಿಕ್ಷಣ ಇಲಾಖೆ ಅಗತ್ಯ ಕ್ರಮವಹಿಸಬೇಕೆಂದು ತಿಳಿಸಿದರು.

ನಿತ್ಯ ಬಾಲ್ಯ ವಿವಾಹ ನಿಷೇಧ ಕಾಯ್ದೆ, ಪೋಕ್ಸೋ ಕಾಯ್ದೆ, ಮಕ್ಕಳ ಹಕ್ಕುಗಳ ಕುರಿತು ವ್ಯಾಪಕವಾಗಿ ಅರಿವು ಕಾರ್ಯಕ್ರಮ ಮಾಡುತ್ತಿದ್ದರೂ ಇಂತಹ ಘಟನೆಗಳು ಮರುಕಳಿಸುತ್ತಿವೆ. ವಿದ್ಯಾರ್ಥಿಗಳು ಎಚ್ಚರಿಕೆಯಿಂದ ಇರಬೇಕು. ಮಕ್ಕಳನ್ನು ರಕ್ಷಿಸುವ ಹೊಣೆಗಾರಿಕೆ ಶಾಲೆಯ ಮುಖ್ಯಸ್ಥರು, ಪೋಷಕರು ಹಾಗು ಸಮಾಜದ ಮೇಲಿದೆ. ಇಂತಹ ಘಟನೆಗಳು ಜರುಗದಂತೆ ಎಚ್ಚರ ವಹಿಸಬೇಕಾದದ್ದು ನಮ್ಮೆಲ್ಲರ ಕರ್ತವ್ಯವೆಂದು ತಿಳಿಸಿದರು.

ಘಟನೆಯ ಸತ್ಯಾಸತ್ಯತೆಯ ಕುರಿತು ಪೊಲೀಸರು ಕ್ರಮವಹಿಸಿ ತಪ್ಪಿತಸ್ಥರ ವಿರುದ್ಧ ನ್ಯಾಯಾಲಯಕ್ಕೆ ವರದಿ ಸಲ್ಲಿಸಬೇಕು. ನೊಂದ ಬಾಲಕಿಗೆ ಕಾನೂನು ಸೇವೆಗಳ ಪ್ರಾಧಿಕಾರವು ಕಾನೂನು ನೆರವು ನೀಡಲಿದೆ. ಈ ಬಗ್ಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸುವಂತೆ ಬಾಲಕಿಯ ಪೋಷಕರಿಗೆ ತಿಳಿಸಿದರು.

ಒನ್ ಸ್ಟಾಪ್ ಸಖಿ ಕೇಂದ್ರದ ಸಮಾಲೋಚಕಿ, ವಕೀಲೆ ಕೆ.ಆರ್.ಬಿಂದೇಶ್ವರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ|| ನಾಗಪ್ಪ, ವೈದ್ಯಾಧಿಕಾರಿ ಡಾ|| ಆರ್.ಎಸ್.ಜ್ಯೋತಿ, ಜಿಲ್ಲಾ ಮಕ್ಕಳ ಸಮಗ್ರ ರಕ್ಷಣಾ ಘಟಕದ ಸಿಬ್ಬಂದಿ ಕಾಂತರಾಜು ಇದ್ದರು.

# ಕ್ರೀಡೆಯಲ್ಲಿ ಸ್ವಜನ ಪಕ್ಷಪಾತ ಕೊನೆಯಾಗಿದೆ : ಪ್ರಧಾನಿ ಮೋದಿ

• ಪ್ರಜೋದಯ ವರದಿ



**ನವದೆಹಲಿ:** ಕ್ರೀಡೆಯಲ್ಲಿ 2014ಕ್ಕೂ ಮೊದಲು ನಡೆಯುತ್ತಿದ್ದ ಅಕ್ರಮಗಳು ದಶಕಗಳ ಹಿಂದೆಯೇ ಕೊನೆಗೊಂಡಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಹೇಳಿದ್ದಾರೆ.

ದೇಶದ ಯುವಕರಲ್ಲಿ ಕ್ರೀಡಾ ಸಂಸ್ಕೃತಿ ಮತ್ತು ನಾಯಕತ್ವವನ್ನು ಉತ್ತೇಜಿಸುವ ಉದ್ದೇಶ ಹೊಂದಿರುವ ಸಂಸದ್ ಖೇಲ್ ಮಹೋತ್ಸವ್ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಕ್ರೀಡೆ ಮತ್ತು ಫಿಟ್‌ನೆಸ್ ಉತ್ಸವವಾಗಿರುವ ಈ ಉಪಕ್ರಮದ ಮೂಲಕ, ದೇಶದಲ್ಲಿ ಸಾವಿರಾರು ಪ್ರತಿಭಾವಂತ ಕ್ರೀಡಾಪಟುಗಳು ಸೃಷ್ಟಿಯಾಗುತ್ತಿದ್ದಾರೆಂದರು.

ಯುವ ಸಬಲೀಕರಣ ಮತ್ತು ರಾಷ್ಟ್ರ ನಿರ್ಮಾಣದ ನಿಟ್ಟಿನಲ್ಲಿ ಈ ಉತ್ಸವವು ಆಧಾರ ಸ್ಥಂಭವಾಗಿ ರೂಪುಗೊಳ್ಳುತ್ತಿದೆ. ಸಂಸದ್ ಖೇಲ್‌ಮಹೋತ್ಸವದ ಮತ್ತೊಂದು ವಿಶೇಷ ಅಂಶವೆಂದರೆ, ಇದು ಸಾಮಾಜಿಕ ಮನಸ್ಥಿತಿಯನ್ನು ಬದಲಿಸುವ ನಿಟ್ಟಿನಲ್ಲಿ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದ್ದಾರೆ.

ತಂಡಗಳ ಆಯ್ಕೆ ಹಾಗೂ ಕ್ರೀಡಾ ಮೂಲ ಸೌಕರ್ಯದ ವಿಚಾರದಲ್ಲಿ 2014ಕ್ಕೂ ಮೊದಲು ಅಕ್ರಮಗಳು ನಡೆಯುತ್ತಿದ್ದವು. ಅಂತಹ ಅಭ್ಯಾಸಗಳು ಇದೀಗ ಕೊನೆ ಗೊಂಡಿವೆ. ಇಂದು, ಅತ್ಯಂತ ಬಡ ಕುಟುಂಬದ ಮಕ್ಕಳೂ ಕಠಿಣ ಪರಿಶ್ರಮ ಹಾಗೂ ಪ್ರತಿಭೆಯ ಮೂಲಕ ಎತ್ತರದ ಹಂತಕ್ಕೆ ತಲುಪಲು ಸಾಧ್ಯವಿದೆ ಎಂದು ತಿಳಿಸಿದ್ದಾರೆ.

ದೇಶದ ಬಜೆಟ್‌ನಲ್ಲಿ ಕ್ರೀಡೆಗಾಗಿ 3,000 ಕೋಟಿ ನೀಡಲಾಗುತ್ತಿದೆ. ಈ ಮೊತ್ತವು 2014ಕ್ಕೂ ಮೊದಲು 1,200 ಕೋಟಿ ಗೂ ಕಡಿಮೆ ಇತ್ತು ಎಂದು ಒತ್ತಿ ಹೇಳಿದ್ದಾರೆ. ನೀವು ಕೇವಲ ನಿಮ್ಮ ಗೆಲುವಿಗಾಗಿ ಆಡು ತ್ತಿಲ್ಲ. ದೇಶಕ್ಕಾಗಿ ಆಡುತ್ತಿದ್ದೀರಿ. ತ್ರಿವರ್ಣ ಧ್ವಜದ ಗೌರವ ಮತ್ತು ಘನತೆಗಾಗಿ ಆಡುತ್ತಿದ್ದೀರಿ ಎಂಬುದನ್ನು ದೇಶದ ಎಲ್ಲಾ ಕ್ರೀಡಾಪಟುಗಳಿಗೆ ಹೇಳಲು ಬಯಸು ತ್ತೇನೆ ಎಂದಿರುವ ಪ್ರಧಾನಿ, ಮಕ್ಕಳು ಕ್ರೀಡೆಯಲ್ಲಿ ತೊಡಗಿಕೊಳ್ಳಲು ಪೋಷಕರು ಪ್ರೋತ್ಸಾಹ ನೀಡಬೇಕೆಂದು ಮನವಿ ಮಾಡಿದ್ದಾರೆ.

ಕ್ರೀಡೆ ಕೇವಲ ಕಲಿಕೆಯ ಭಾಗವಷ್ಟೇ ಅಲ್ಲ. ಅದು ದೇಹದ ಆರೋಗ್ಯ ಮತ್ತು ಮಾನಸಿಕ ಸ್ವಾಸ್ಥ್ಯ ಕಾಪಾಡಿಕೊಳ್ಳುವುದಕ್ಕೆ ಅತ್ಯವಶ್ಯಕ ಎಂದು ಪ್ರತಿಪಾದಿಸಿದ್ದಾರೆ.

# ಒಡಿಶಾದಲ್ಲಿ ನಾಲ್ವರು ನಕ್ಸಲರ ಹತ್ಯೆ

• ಪ್ರಜೋದಯ ವರದಿ



**ಭುವನೇಶ್ವರ:** ಒಡಿಶಾದ ಕಂಧಮಾಲ್‌ನಲ್ಲಿ ಭದ್ರತಾ ಪಡೆಗಳ ಜೊತೆಗಿನ ಗುಂಡಿನ ಚಕಮಕಿಯಲ್ಲಿ ಕುಖ್ಯಾತ ನಕ್ಸಲ್ ನಾಯಕ ಗಣೇಶ್ ಉಯಿಕೆ ಸೇರಿ 4 ಮಂದಿ ಹತರಾಗಿದ್ದಾರೆ.

ರಾಜ್ಯದಲ್ಲಿ ನಿಷೇಧಿತ ಸಿಪಿಐ (ಮಾವೋವಾದಿ) ಸಂಘಟನೆಯ ಕೇಂದ್ರ ಸಮಿತಿ ಸದಸ್ಯರಾದ ಉಯಿಕೆ ಬಗ್ಗೆ ಮಾಹಿತಿ ನೀಡಿದವರಿಗೆ 1.1 ಕೋಟಿ ರೂ. ಬಹುಮಾನ ಘೋಷಿಸಲಾಗಿತ್ತು ಎಂದು ನಕ್ಸಲ್ ನಿಗ್ರಹ ಕಾರ್ಯಾಚರಣೆಯ ನೇತೃತ್ವ ವಹಿಸಿರುವ ಅಧಿಕಾರಿ ತಿಳಿಸಿದ್ದಾರೆ.

ಚಕಪಾಡ್ ಪೊಲೀಸ್ ಠಾಣೆ ವ್ಯಾಪ್ತಿಯ ಅರಣ್ಯದಲ್ಲಿ ಗುಂಡಿನ ಚಕಮಕಿ ನಡೆದಿದೆ. ಗುಂಡಿನ ಕಾಳಗದಲ್ಲಿ ಹತನಾದ ಒಬ್ಬ ನಕ್ಸಲನನ್ನು 69 ವರ್ಷದ ಉಯಿಕೆ ಎಂದು ಗುರುತಿಸಲಾಗಿದೆ. ಆತನನ್ನು ಪಕ್ಕ ಹನುಮಂತು ಎಂದೂ ಕರೆಯಲಾಗುತ್ತದೆ. ಗಣೇಶ್ ಅವರು ತೆಲಂಗಾಣದ ಚೆಂದ್ಯೆರ್ ಮಂಡಲದ ಪುಲ್ಲೆಮಲ ಹಳ್ಳಿಯ ನಿವಾಸಿಯಾಗಿದ್ದಾರೆಂದು ಅವರು ತಿಳಿಸಿದ್ದಾರೆ. ಉಳಿದ ಮೂವರು ನಕ್ಸಲರ ಮೂಲ ಇನ್ನಷ್ಟೇ ತಿಳಿಯಬೇಕೆಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಕುರಿತು ಎಕ್ಸ್ ಪೋಸ್ಟ್‌ನಲ್ಲಿ ಪ್ರತಿಕ್ರಿಯಿಸಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ನಕ್ಸಲ್ ಮುಕ್ತ ಭಾರತದತ್ತ ಮಹತ್ವದ ಮೈಲಿಗಲ್ಲು ಎಂದು ಬಣ್ಣಿಸಿದ್ದಾರೆ.

ಈ ಕಾರ್ಯಾಚರಣೆಯ ಮೂಲಕ ಒಡಿಶಾ ಸಂಪೂರ್ಣ ನಕ್ಸಲ್ ಮುಕ್ತ ರಾಜ್ಯವಾಗುವತ್ತಾ ಸಾಗಿದೆ. ಮಾರ್ಚ್ 31ರ ಹೊತ್ತಿಗೆ ಇದನ್ನು ಸಾಧಿಸುತ್ತೇವೆಂದು ಅವರು ತಿಳಿಸಿದ್ದಾರೆ.


# ಕಾಫಿ ಭೂಮಿ ಸರ್ಫೇಸಿ ಕಾಯ್ದೆಯಿಂದ ಹೊರಗಿಡಲು ಮನವಿ

## ಬೆಳೆಗಾರರ ಒಕ್ಕೂಟದಿಂದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿಗೆ ಕೋರಿಕೆ

• ಪ್ರಜೋದಯ ವರದಿ

**ಹಾಸನ:** ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳ ಕಾಫಿ ಕೃಷಿ ಭೂಮಿಗಳನ್ನು ಸರ್ಫೇಸಿ ಕಾಯ್ದೆಯಿಂದ ಹೊರಗಿಡುವಂತೆ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಬೆಳೆಗಾರರಿಗೆ ಅನು ಕೂಲ ಮಾಡಿಕೊಡುವಲ್ಲಿ ಸಹಕರಿಸುವಂತೆ ಕೋರಿ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರಿಗೆ ಕರ್ನಾಟಕ ಬೆಳೆಗಾರರ ಒಕ್ಕೂಟದಿಂದ ಮನವಿ ಸಲ್ಲಿಸಲಾಗಿದೆ.

ಕರ್ನಾಟಕ ರಾಜ್ಯ ಸರ್ಕಾರ ಪ್ಲಾಂಟೇಶನ್ ಬೆಳೆಗಾರರ ಅನಧಿಕೃತ ಸಾಗುವಳಿಗಳನ್ನು ದೀರ್ಘಾವಧಿ ಲೀಸ್‌ಗೆ ನೀಡಲು ನಿಯಮಗಳನ್ನು ರೂಪಿಸಿದೆ. ಲೀಸ್ ಕುರಿತಾಗಿ ಬೆಳೆಗಾರರಿಂದ ಪ್ರಾಥಮಿಕ ಹಂತದ ಅರ್ಜಿಗಳನ್ನು ಕಂದಾಯ ಇಲಾಖೆ ವತಿಯಿಂದ ಸ್ವೀಕರಿಸಲಾಗಿದೆ. ಯಾವುದೇ ನಿರ್ದಿಷ್ಟ ಕಾರಣಗಳನ್ನು ನೀಡದೇ ಈವರೆವಿಗೂ ಲೀಸ್ ಪ್ರಕ್ರಿಯೆ ಚಾಲನೆ ದೊರ ಕಿರುವುದಿಲ್ಲ. ತಾವು ರಾಜ್ಯ ಸರ್ಕಾರದ ಜೊತೆ ಈ ವಿಚಾರ ಚರ್ಚಿಸಿ ಈ ಕೂಡಲೇ ದೀರ್ಘಾವಧಿ ಲೀಸ್ ಪ್ರಕ್ರಿಯೆಗೆ ಚಾಲನೆ ನೀಡುವಂತೆ ಮುಖ್ಯಮಂತ್ರಿ ಅವರಿಗೆ ಹಾಗು ಸಂಬಧಪಟ್ಟ ಸಚಿವರಿಗೆ ತಿಳಿಸಿ ಬೆಳೆಗಾರರ ಸಮುದಾಯಕ್ಕೆ ಅನುಕೂಲ ಮಾಡಿಕೊಡಬೇಕೆಂದು ಕೇಳಿ ಕೊಳ್ಳಲಾಯಿತು.



ಅರಣ್ಯ ಭೂಮಿಗೆ ಸಂಬಂಧಪಟ್ಟಂತೆ ಸೆಕ್ಷನ್ 4(1) ಹಾಗು ಡೀಮ್ಡ್ ಅರಣ್ಯದ ಕುರಿತು ಹಾಲಿ ಇರುವ ಗೊಂದಲಗಳು ಬಗೆಹರಿಯುವವರೆಗೂ ಅರಣ್ಯ ಇಲಾಖೆಯಿಂದ ರೈತಬೆಳೆ ಗಾರರಿಗೆ ನೋಟೀಸ್‌ಗಳನ್ನು ನೀಡದಂತೆ ಸಂಬಂಧಪಟ್ಟ ಮಂತ್ರಿಗಳಿಗೆ ಹಾಗು ಅಧಿಕಾರಿಗಳಿಗೆ ಮನವರಿಕೆ ಮಾಡಿಕೊಡಬೇಕಾಗಿ ಮನವಿ ಮಾಡಲಾಯಿತು.

ಮಲೆನಾಡಿನ ಕಾಫಿ ಬೆಳೆಯುವ ಪ್ರದೇಶಗಳಲ್ಲಿ ಕಾಡಾನೆ ಮತ್ತು ಇತರೆ ಕಾಡುಪ್ರಾಣಿಗಳ ಹಾವಳಿ ದಿನದಿಂದ ದಿನಕ್ಕೆ ಅಧಿಕವಾಗುತ್ತಿರುವುದರಿಂದ ಇಲ್ಲಿನ ಜನಸಾಮಾನ್ಯರ ಬದುಕು ಚಿಂತಾಜನಕವಾಗಿದೆ. ಕಾಡಾನೆಗಳ ದಾಂಧಲೆಯಿಂದ ಮಾನವ ಪ್ರಾಣ ಹಾನಿ ಜೊತೆಗೆ ಅಪಾರ ಪ್ರಮಾಣದಲ್ಲಿ ಬೆಳೆನಷ್ಟವುಂಟಾಗುತ್ತಿದೆ. ಕಾಡಾನೆ ದಾಳಿಯಿಂದ ಉಂಟಾಗುತ್ತಿರುವ ಬೆಳೆನಷ್ಟಕ್ಕೆ ಅರಣ್ಯ ಇಲಾಖೆಯಿಂದ ಸೂಕ್ತ ಪರಿಹಾರವೂ ಕೂಡ ಸಕಾಲದಲ್ಲಿ ಲಭ್ಯವಾಗುತ್ತಿಲ್ಲ ಎಂದು ತಿಳಿಸಿದ್ದಾರೆ.

ಕಾಡಾನೆಗಳು ಎಲ್ಲೆಲ್ಲಿ ಸಂಚರಿಸುತ್ತಿವೆಯೆಂದು ನಿಖರವಾದ ಮಾಹಿತಿ ಲಭ್ಯವಾಗುತ್ತಿಲ್ಲ. ಒಟ್ಟಿನಲ್ಲಿ ಮಲೆನಾಡಿನ ಕಾಫಿ ಬೆಳೆಯುವ ಪ್ರದೇಶಗಳಲ್ಲಿ ಬೀಡುಬಿಟ್ಟಿರುವ ಕಾಡಾನೆಗಳನ್ನು ಸಂಪೂರ್ಣವಾಗಿ ಹಿಡಿದು ಸ್ಥಳಾಂತರಿಸಿ ಕಾಡಾನೆ ಸಮಸ್ಯೆಗೆ ಶೀಘ್ರವಾಗಿ ಪರಿಹಾರ ದೊರಕಿಸಿ ಕೊಡಬೇಕೆಂದು ಮನವಿ ಮಾಡಿದರು.

ನಿಯೋಗದಲ್ಲಿ ಶಾಸಕ ಹೆಚ್.ಕೆ. ಸುರೇಶ್, ಬೆಳೆಗಾರರ ಒಕ್ಕೂಟದ ಅಧ್ಯಕ್ಷ ಹಳಸೆ ಶಿವಣ್ಣ, ಉಪಾಧ್ಯಕ್ಷರಾದ ಸಿ.ಎಸ್.ಸುರೇಶ್, ಬಿ.ಎಂ. ನಾಗರಾಜು, ಮಾಜಿ ಅಧ್ಯಕ್ಷರಾದ ಬಿ.ಎಸ್.ಜಯರಾಮ್, ಡಾ.ಹೆಚ್.ಟಿ.ಮೋಹನ್‌ಕುಮಾರ್, ಸಂಘಟನಾ ಕಾರ್ಯದರ್ಶಿ ಅಶೋಕ್ ಸುರಪ್ಪನ ಹಳ್ಳಿ, ಚಿಕ್ಕಮಗಳೂರು ಜಿಲ್ಲಾ ಬೆಳೆ ಗಾರರ ಸಂಘದ ಅಧ್ಯಕ್ಷ ಕೆ.ಯು.ರತೀಶ್ ಇತರರು ಇದ್ದರು.

# ನಗದು ಸೇರಿ 1.30 ಲಕ್ಷ ರೂ. ಬೆಲೆಯ ಚಿನ್ನಾಭರಣ ಕಳವು

• ಪ್ರಜೋದಯ ವರದಿ

**ಹೊಳೆನರಸೀಪುರ:** ಹಾಡ ಹಗಲೇ ಮನೆ ಬಾಗಿಲು ಮುರಿದು ಒಳನುಗ್ಗಿರುವ ಕಳ್ಳರು ಬೀರುವಿನಲ್ಲಿಟ್ಟಿದ್ದ ನಗದು ಸೇರಿ 1.30 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿದ್ದಾರೆ.

ಹಳೇಕೋಟೆ ಹೋಬಳಿ ಮಾವಿನಕೆರೆ ಗ್ರಾಮದ ಎಂ.ಡಿ.ಪ್ರಕಾಶ್ ಅವರು ತಮ್ಮ ಪುತ್ರನ ಹುಟ್ಟು ಹಬ್ಬದ ಹಿನ್ನಲೆಯಲ್ಲಿ ಡಿ.23ರಂದು ಕುಟುಂಬ ಸಮೇತ ರಂಗನಾಥಸ್ವಾಮಿ ದೇವಸ್ಥಾನಕ್ಕೆ ತೆರಳಿದ್ದರು. ಮಧ್ಯಾಹ್ನ 1 ಗಂಟೆ ಸಮಯದಲ್ಲಿ ವಾಪಾಸ್ ಬಂದಾಗ ಮನೆ ಬಾಗಿಲು ಮುರಿದಿರುವುದು ತಿಳಿದಿದೆ. ಬೀರುವಿನಲ್ಲಿದ್ದ 10 ಗ್ರಾಂ ತೂಕದ ಚಿನ್ನದ ಸರ, ಒಂದೂವರೆ ಗ್ರಾಂ ಉಂಗುರ ಹಾಗು 50 ಸಾವಿರ ರೂ. ಕಳವು ಮಾಡಿದ್ದಾರೆ. ಹೊಳೆನರಸೀಪುರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಡಿ.27,28 ರಂದು ವಾಲಿಬಾಲ್ ಪಂದ್ಯಾವಳಿ

• ಪ್ರಜೋದಯ ವರದಿ

**ಚನ್ನರಾಯಪಟ್ಟಣ:** ಜಿಲ್ಲಾ ಮಟ್ಟದ ಹೊನಲು ಬೆಳಕಿನ ವಾಲಿಬಾಲ್ ಪಂದ್ಯಾವಳಿಯನ್ನು ಡಿ.27ರ ಶನಿವಾರ ಮತ್ತು 28ರ ಭಾನುವಾರ ಆಯೋಜಿಸಲಾಗಿದೆ ಎಂದು ಹಾಸನ ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ಟಿ. ಅರುಣ್ ಕುಮಾರ್ ಹೇಳಿದರು.

ಹಾಸನ ಜಿಲ್ಲಾ ವಾಲಿಬಾಲ್ ಅಸೋಸಿಯೇಷನ್ ಮತ್ತು ಚೌಡೇಶ್ವರಿ ವಾಲಿಬಾಲ್ ಸಂಘದ ಸಹಯೋಗದಲ್ಲಿ ಈ ಪಂದ್ಯಾವಳಿಯೂ ತಾಲ್ಲೂಕಿನ ಹಿರೀಸಾವೆ ಗ್ರಾಮದ ಸರ್ಕಾರಿ ಬಾಲಕಿ ಯರ ಪ್ರೌಢಶಾಲಾ ಆವರಣದಲ್ಲಿ ನಡೆಸಲಾಗುವುದೆಂದರು.

ಸಂಸದ ಶ್ರೇಯಸ್ ಪಟೇಲ್ ಅವರು ಪಂದ್ಯಾವಳಿ ಉದ್ಘಾಟಿಸುವರು. ಶಾಸಕ ಸಿ.ಎನ್. ಬಾಲಕೃಷ್ಣ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.ವಿಧಾನ ಪರಿಷತ್ ಸದಸ್ಯ ಸೂರಜ್ ರೇವಣ್ಣ, ಕಾಂಗ್ರೆಸ್ ಮುಖಂಡ ಎಂ.ಎ.ಗೋಪಾಲಸ್ವಾಮಿ, ರಾಜ್ಯ ವಿದ್ಯುತ್ ಕಾರ್ಖಾನೆ ನಿಗಮದ ಅಧ್ಯಕ್ಷ ಎಚ್.ಸಿ.ಲಲಿತಾ ರಾಘವ್, ವಾರ್ತಾ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಎಚ್.ಬಿ.ದಿನೇಶ್ ಮತ್ತು ಕರ್ನಾಟಕ ರಾಜ್ಯ ವಾಲಿಬಾಲ್ ಅಸೋಸಿಯೇಷನ್ ಅಧ್ಯಕ್ಷ ಹರ್ಷ, ಕಾರ್ಯದರ್ಶಿ ಆಂಟೋನಿ ಜೋಸೆಫ್ ಸೇರಿ ಹಲವು ಜನಪ್ರತಿನಿಧಿಗಳು ಮತ್ತು ಹಿರಿಯ ವಾಲಿಬಾಲ್ ಆಟಗಾರರು ಭಾಗವಹಿಸಲಿದ್ದಾರೆಂದರು.

ವಾಲಿಬಾಲ್‌ನ ಹಿರಿಯ ಆಟಗಾರರನ್ನು ಸನ್ಮಾನಿಸಲಾಗುವುದು. ಬಹುಮಾನವಾಗಿ ವಿಜೇತ ತಂಡಗಳಿಗೆ ಪ್ರಥಮ 40 ಸಾವಿರ ರೂ., ದ್ವಿತೀಯ 30 ಸಾವಿರ ರೂ., ತೃತೀಯ 20 ಸಾವಿರ ರೂ. ಹಾಗೂ ಚತುರ್ಥ 10 ಸಾವಿರ ರೂ. ನೀಡಲಾಗುವುದು. ಜಿಲ್ಲೆಯ ಪ್ರತಿ ತಾಲ್ಲೂಕಿನಿಂದ 4 ತಂಡಗಳು ಭಾಗವಹಿಸಬಹುದೆಂದು ತಿಳಿಸಿದರು.

ಜಿಲ್ಲೆಯ ಆಟಗಾರರಿಗೆ ಮಾತ್ರ ಅವಕಾಶ ನೀಡಲಾಗುವುದು. ಪಂದ್ಯಾವಳಿಯಲ್ಲಿ ಭಾಗವಹಿ ಸುವವರು ಹೆಚ್ಚಿನ ವಿವರಗಳಿಗೆ 9901130454 ಅನ್ನು ಸಂಪರ್ಕಿಸುವಂತೆ ತಿಳಿಸಿದರು.

# ಅಟಲ್ ಬಿಹಾರಿ ವಾಜಪೇಯಿ ಜನ್ಮ ದಿನಾಚರಣೆ

• ಪ್ರಜೋದಯ ವರದಿ

**ಹಾಸನ:** ದೇಶದ ಮಾಜಿ ಪ್ರಧಾನಿ, ಭಾರತ ರತ್ನ ದಿ||ಅಟಲ್ ಬಿಹಾರಿ ವಾಜಪೇಯಿ ಅವರ 101ನೇ ಹುಟ್ಟುಹಬ್ಬವನ್ನು ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ಗುರುವಾರ ಆಚರಿಸಲಾಯಿತು.

ಅಜಾತ ಶತ್ರು ವಾಜಪೇಯಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಕಾರ್ಯಕರ್ತರು ಗೌರವ ಸಲ್ಲಿಸಿದರು. ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಮಿತ್ ಶೆಟ್ಟಿ ಅವರು ಮಾತನಾಡಿ, ಭಾರತದ ರಾಜಕೀಯ ಇತಿಹಾಸದಲ್ಲಿ ಅಟಲ್ ಬಿಹಾರಿ ವಾಜಪೇಯಿ ಹೆಸರು ಅಜರಾಮರವಾಗಿದೆ. ಭಾರತದ ಪ್ರಧಾನಿಯಾಗಿ ಅವರು ಕೈಗೊಂಡ ಕ್ರಮ, ಅಭಿವೃದ್ಧಿಪರ ಯೋಜನೆಗಳು ಜನಮಾನಸದಲ್ಲಿ ಅಚ್ಚಳಿಯದೆ ಉಳಿದಿವೆ. ಜನಸಂಘದ ಮೂಲಕ ಪಕ್ಷ ಕಟ್ಟಿ ರಾಜಕೀಯದಲ್ಲಿ ಕ್ರಾಂತಿ ಸೃಷ್ಟಿಸಿದ್ದಾರೆಂದರು.

ಚುನಾವಣೆ ಸೋಲು-ಗೆಲುವಿನ ಕುರಿತು ತಲೆ ಕೆಡಿಸಿಕೊಳ್ಳದ ಅವರು ಪಕ್ಷಕ್ಕಿಂತ ದೇಶ ಮುಖ್ಯವೆಂದು ನಂಬಿದ್ದರು. ಪಕ್ಷಕ್ಕಿಂತ ದೇಶ ಮುಖ್ಯ, ವ್ಯಕ್ತಿಗಿಂತ ಪಕ್ಷ ಮುಖ್ಯ ಎಂಬುದು ಅವರ ನಿಲುವಾಗಿತ್ತು. ಸ್ವಾರ್ಥವಿಲ್ಲದೆ ಪಕ್ಷಾತೀತವಾಗಿ ದುಡಿದರು. ಬಿಜೆಪಿ ಮಾತ್ರವಲ್ಲದೆ ವಿರೋಧ ಪಕ್ಷಗಳಲ್ಲೂ ಸ್ನೇಹಿತರನ್ನು ಹೊಂದಿದ್ದ ಅಪರೂಪದ ರಾಜಕಾರಣಿ ಅವರಾಗಿದ್ದ ರೆಂದರು.



ಅಟಲ್ ಬಿಹಾರಿ ವಾಜಪೇಯಿ ಅವರ ಜನ್ಮ ದಿನವನ್ನು ಉತ್ತಮ ಆಡಳಿತ ದಿನವಾಗಿ ಆಚರಿಸಲಾಗು ತ್ತದೆ. ಭಾರತದ ಭವಿಷ್ಯವನ್ನು ರೂಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಪಾಕಿಸ್ತಾನ ವಿರುದ್ಧ ಹೋರಾಟದಲ್ಲಿ ನಮ್ಮ ಸೇನೆ ಜಯ ಸಾಧಿಸುವಲ್ಲಿ ವಾಜಪೇಯಿ ಅವರ ಸಹಕಾರ ಹೆಚ್ಚಿದೆ ಎಂದು ಹೇಳಿದರು.

ಪಕ್ಷಕ್ಕಾಗಿ ಹಲವು ವರ್ಷಗಳಿಂದ ದುಡಿದ ರಮೇಶ್ ಮತ್ತು ಪ್ರೇಮಕುಮಾರ್ ಅವರನ್ನು ಗೌರವಿಸಲಾ ಯಿತು. ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಬಿ.ಹೆಚ್.ನಾರಾಯಣ ಗೌಡ, ಯುವ ಮೋರ್ಚಾ ರಾಜ್ಯ ಉಪಾಧ್ಯಕ್ಷ ಹರ್ಷಿತ್, ಉಪಾಧ್ಯಕ್ಷ ಶೋಭನ್ ಬಾಬು, ನಗರಸಭೆ ಮಾಜಿ ಅಧ್ಯಕ್ಷ ಆರ್.ಮೋಹನ್ ಕುಮಾರ್, ಯುವ ಮೋರ್ಚಾ ಮಾಜಿ ಅಧ್ಯಕ್ಷ ಚನ್ನಕೇಶವ, ಹೆಚ್.ಎನ್.ನಾಗೇಶ್, ವೇದಾವತಿ, ಸುಮಾ, ದಯಾನಂದ್, ಮಹೇಶ್ ಇತರರು ಇದ್ದರು.


ಬೇಲೂರಿನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ.

ಕ್ರಿಮಿನಲ್ ಮಿಸ್ ನಂ.962/2025.

ಅರ್ಜಿದಾರರು : 1 ಸುರೇಶ್ ಬಿನ್ ಲೇಟ್ ಚಂದ್ರೇಗೌಡ, ಸುಮಾರು, 52 ವರ್ಷ, ಲಕ್ಷ್ಮೀಪುರ ಗ್ರಾಮ, ಮಾದೀಹಳ್ಳಿ ಹೋಬಳಿ, ಬೇಲೂರು ತಾಲ್ಲೂಕು, ಹಾಸನ ಜಿಲ್ಲೆ.

ವಿರುದ್ಧ

ರೆಸ್ಪಾಂಡೆಂಟರು : ತಹಸೀಲ್ದಾರರು, ಬೇಲೂರು ತಾಲ್ಲೂಕು.

ಕೋರ್ಟ್ ನೋಟೀಸ್

ಅರ್ಜಿದಾರರ ತಂದೆಯಾದ ಚಂದ್ರೇಗೌಡ ಬಿನ್ ರಂಗೇಗೌಡ ರವರು ದಿನಾಂಕ : 04.09.1973 ರಂದು ತಮ್ಮ ವಾಸದ ಮನೆಯಾದ ಬೇಲೂರು ತಾಲ್ಲೂಕು, ಮಾದೀಹಳ್ಳಿ ಹೋಬಳಿ, ಲಕ್ಷ್ಮೀಪುರ ಗ್ರಾಮದಲ್ಲಿರುವ ತಮ್ಮ ವಾಸದ ಮನೆಯಲ್ಲಿ ಅನಾರೋಗ್ಯದಿಂದ ಮರಣ ಹೊಂದಿರುತ್ತಾರೆ. ಆ ಬಗ್ಗೆ ಮರಣ ಧೃಢೀಕರಣ ಪತ್ರ ಕೋರಿ ಘನ ನ್ಯಾಯಾಲಯದಲ್ಲಿ ಕೇಸನ್ನು ಸಲ್ಲಿಸಿದ್ದು, ಸದರಿ ಅರ್ಜಿದಾರರುಗಳನ್ನು ಬಿಟ್ಟರೆ ಬೇರೆ ಯಾರು ವಾರಸುದಾರರಾಗಿರುವುದಿಲ್ಲ. ಆದ್ದರಿಂದ ಯಾರಾದರೂ ವಾರಸು ದಾರರು ಇದ್ದರೆ ಸದರಿ ಕೇಸಿನ ದಿನಾಂಕ : 30.01.2026 ರಂದು ನಿಮ್ಮ ಹಾಜರಾತಿಗೆಂದು ಪೂರ್ವಾಹ್ನ 11.00 ಗಂಟೆಗೆ ಅರ್ಜಿಗೆ ಅಥವಾ ಸರಿಯಾಗಿ ಮಾಹಿತಿ ಹೊಂದಿರುವ ವಕೀಲರ ಮೂಲಕ ನ್ಯಾಯಾಲಯದಲ್ಲಿ ಹಾಜರಾಗಬೇಕೆಂದು ಇದಕ್ಕೆ ತಪ್ಪಿದರೆ ಸದರಿ ಕೇಸನ್ನು ಏಕಪಕ್ಷೀಯವಾಗಿ ವಿಚಾರಣೆ ಮಾಡಲಾಗುವುದೆಂದು ಮತ್ತು ತೀರ್ಮಾನಿಸಲಾಗುವುದೆಂದು ಈ ಮೂಲಕ ನಿಮಗೆ ತಿಳಿಸಲಾಗಿದೆ.

2025ನೇ ವರ್ಷದ 12 ತಿಂಗಳಿನ 20 ದಿವಸದಂದು ಇದನ್ನು ನನ್ನ ಸಹಿಯೊಡನೆ ನ್ಯಾಯಾಲಯದ ಮೊಹರಿನೊಡನೆ ನೀಡಲಾಗಿದೆ.

ಶಿರಸ್ತೇದಾರ್, ಸಿವಿಲ್ ನ್ಯಾಯಾಧೀಶರು (ಕಿ.ವಿ) ರವರ ನ್ಯಾಯಾಲಯದಲ್ಲಿ ಬೇಲೂರು.

ಪೃಥ್ವಿರಾಜ್ ಹೆಚ್.ಎನ್,
ವಕೀಲರು, ಬೇಲೂರು, ದಿನಾಂಕ : 20.12.2025.


ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019

CMYK CMYK CMYK CMYK